ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 22, ಸಂಚಿಕೆ: 9, ಪುಟಗಳು: 8, ಶುಕ್ರವಾರ, 18 ಅಕ್ಟೋಬರ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3




ವೇಣು ಸಾರಥ್ಯದಲ್ಲಿ...

### ಸುಭಾಷಿತ

ಎಲ್ಲವೂ ಸರಿಯಿಲ್ಲದಿರುವಾಗ ಯಾವುದು ತಪ್ಪು ಎಂಬ ಪ್ರಶ್ನೆಗೆ ಉತ್ತರಿಸುವುದು ಕಷ್ಟ- **ಅನಾಮಿಕ**

### ಪಂಚಾಂಗ

(ಶುಕ್ರವಾರ 18, ಅಕ್ಟೋಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಶರದೃತು,
- ಆಶ್ವಯುಜ ಮಾಸ, ಕೃಷ್ಣ ಪಕ್ಷ,
- ಪ್ರಥು, ಶುಕ್ರವಾರ,
- ಅಶ್ವಿನಿ ನಕ್ಷತ್ರ / ಭರಣಿ ನಕ್ಷತ್ರ
- ರಾಹುಕಾಲ: 10:39 ರಿಂದ 12:08
- ಗುಳಿಕಕಾಲ: 07:41 ರಿಂದ 09:10
- ಯಮಗಂಡಕಾಲ: 03:06 ರಿಂದ 04:35




# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




# ಬರೋಬ್ಬರಿ 1.75 ಕೋಟಿ ವಂಚನೆ ಆರೋಪ



» ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಹೋದರನ ವಿರುದ್ಧ ವಂಚನೆ ಆರೋಪ



**ಹುಬ್ಬಳ್ಳಿ:** ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಹೋದರನ ವಿರುದ್ಧ ವಂಚನೆ ಆರೋಪ ಕೇಳಿಬಂದಿದೆ. ಲೋಕಸಭಾ ಚುನಾವಣೆಗೆ ಟಿಕೆಟ್ ಕೊಡಿಸುವುದಾಗಿ ನಂಬಿಸಿ 1 ಕೊಟಿ 75 ಲಕ್ಷ ಹಣ ಪಡೆದು ವಂಚನೆ ಎಸಗಿದ್ದಾರೆ ಅಂತ ಸುನಿತಾ ಚೌಹಾಣ್ ಎನ್ನುವವರು ದೂರು ನೀಡಿದ್ದಾರೆ. ಏನಿದು ಪ್ರಕರಣ?: 2018ರಲ್ಲಿ ನಾಗಠಾಣಾ ಕ್ಷೇತ್ರದಿಂದ ದೇವಾನಂದ್ ಚೌಹಾಣ್ ಜೆಡಿಎಸ್ ಪಕ್ಷದ ಶಾಸಕರಾಗಿದ್ದರು, ಆದರೆ 2023ರಲ್ಲಿ ಸೋಲು ಕಂಡಿದ್ದರು. ಆ ಬಳಿಕ ದೇವಾನಂದ್ ದಂಪತಿ ಗೋಪಾಲ್ ಜೋಶಿಯವರನ್ನು ಭೇಟಿ ಮಾಡಿದ್ದರಂತೆ. ಈ ವೇಳೆ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಕೊಡಿಸ್ತೀನಿ ಅಂತ ಹಂತ ಹಂತವಾಗಿ 1 ಕೋಟಿ 75 ಲಕ್ಷ ಹಣ ಪಡೆದು ವಂಚಿಸಿದ್ದಾರೆ ಅಂತ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಪುಟ 2

## ಸಿ.ಪಿ.ಯೋಗೇಶ್ವರ್ ಬೆನ್ನಿಗೆ ನಿಂತ ಬಿಜೆಪಿ ನಾಯಕರು

# ನಾಯಕತ್ವಕ್ಕಾಗಿ ಮೈತ್ರಿ ಫೈಟ್!

**ಚನ್ನಪಟ್ಟಣ:** ರಾಜ್ಯದಲ್ಲಿ ಇನ್ನೇನು ಕೆಲ ದಿನಗಳಲ್ಲೇ ಮೂರು ಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದ್ದು, ಈಗಾಗಲೇ ದಿನಾಂಕ ಕೂಡ ಘೋಷಣೆಯಾಗಿದೆ. ಸಧ್ಯ ಈ ಮೂರು ಕ್ಷೇತ್ರದಲ್ಲಿ ಚನ್ನಪಟ್ಟಣ ಹೈವೋಲ್ಟೇಜ್ ಕ್ಷೇತ್ರವಾಗಿದೆ. ಇಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಯೊಂದಿಗೆ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಲಿದ್ದು, ಇದೀಗ ಯಾರಿಗೆ ಟಿಕೆಟ್ ಕೊಡಬೇಕು ಎನ್ನುವುದು ತೀವ್ರ ಚರ್ಚೆಗೆ ಕಾರಣವಾಗಿದೆ. ಈ ಮಧ್ಯೆ ಬಿಜೆಪಿ-ಜೆಡಿಎಸ್‌ನಲ್ಲಿ ಒಕ್ಕಲಿಗರ ನಾಯಕತ್ವಕ್ಕಾಗಿ ಬಿಗ್ ಫೈಟ್ ನಡೆಯುತ್ತಿದೆ.

ಎನ್‌ಡಿಎ ಟಿಕೆಟ್‌ಗಾಗಿ ಹೆಚ್‌ಡಿಕೆ-ಸಿಪಿವೈ ಮಧ್ಯೆ ಫೈಟ್: ಚನ್ನಪ್ಪಟ್ಟಣದಲ್ಲಿ ಹೆಚ್‌ಡಿ ಕುಮಾರಸ್ವಾಮಿ ಅವರು ಕಳೆದ ಬಾರಿಯ ಧಾನಸಭಾ ಚುನಾವಣೆಯಲ್ಲಿ ಗೆಲುವು ಕಂಡಿದ್ದರು. ಈಗ ಬೇರೆಯವರಿಗೆ ಟಿಕೆಟ್ ಸಿಕ್ಕರೆ ಕ್ಷೇತ್ರದ ಮೇಲೆ ತಮ್ಮ ಡಿತ ತಪ್ಪುತ್ತದೆ ಎನ್ನುವ ಕಾರಣಕ್ಕೆ ಕುಟುಂಬ ಸದಸ್ಯರನ್ನು ಕಣಕ್ಕಿಳಿಸುವುದು ಸೂಕ್ತ ಎಂದು ತೀರ್ಮಾನಿಸಿದ್ದಾರೆ. ಮತ್ತೊಂದೆಡೆ ಸಿಪಿ ಯೋಗೇಶ್ವರ್ ಅವರು ಎನ್‌ಡಿಎ ಅಭ್ಯರ್ಥಿಯಾಗಿ ಕಣಕ್ಕೆ ಇಳಿಯಲು ಒಕ್ಕಲಿಗ ನಾಯಕರ ಬೆಂಬಲಕ್ಕೆ ಮೊರೆ ಹೋಗಿದ್ದಾರೆ.

ಪುಟ 2



## ಸಂಡೂರು ಟಿಕೆಟ್ ಯಾರಿಗೆ?



**ಬೆಂಗಳೂರು/ಬಳ್ಳಾರಿ:** ಸಂಡೂರು ಉಪ ಚುನಾವಣೆ ರಾಜಕೀಯ ಜೋರಾಗಿದೆ. ಬಿಜೆಪಿ ಟಿಕೆಟ್ ಆಕಾಂಕ್ಷಿಗಳಾದ ಮಾಜಿ ಸಂಸದ ದೇವೇಂದ್ರಪ್ಪ ಪರ ರಮೇಶ್ ಜಾರಕಿಹೊಳಿ, ಬಂಗಾರು ಹನುಮಂತು ಪರ ಜನಾರ್ದನ ರೆಡ್ಡಿ, ಕೆಎಸ್ ದಿವಾಕರ್ ಪರ ಶ್ರೀರಾಮುಲು ಲಾಬಿ ನಡೆಸಿದ್ದಾರೆ. ಕಾಂಗ್ರೆಸ್ ಟಿಕೆಟ್ ಹೆಚ್ಚು ಕಡಿಮೆ ಸಂಸದ ತುಕಾರಾಂ ಪತ್ನಿ ಇಲ್ಲವೇ ಪುತ್ರಿಗೆ ಸಿಗುವ ಸಾಧ್ಯತೆ ಹೆಚ್ಚಿದೆ. ಇದು ಸಂಡೂರು ಕಾಂಗ್ರೆಸ್‌ನ ಕೆಲ ನಾಯಕರ ಅಸಮಾಧಾನಕ್ಕೆ ಕಾರಣವಾಗಿದೆ. ನಿನ್ನೆ ತೋರಣಗಲ್‌ನಲ್ಲಿ ತುಮಟಿ ಲಕ್ಷ್ಮಣ್ ಪ್ರತ್ಯೇಕ ಸಭೆ ನಡೆಸಿದ್ದಾರೆ. ಇತ್ತ, ವಾಲ್ಮೀಕಿ ನಿಗಮದ ಹಗರಣ ಪ್ರಸ್ತಾಪಿಸಿದ ಜನಾರ್ದನ ರೆಡ್ಡಿ ಮಾಜಿ ಮಂತ್ರಿ ನಾಗೇಂದ್ರ ರುದ್ಧ ಹರಿಹಾಯ್ದಿದ್ದಾರೆ. ಶುಕ್ರವಾರ ಸಂಡೂರಲ್ಲಿ ಮನೆ ಮಾಡುವ ಮೂಲಕ ಮತ ಸಂಗ್ರಾಮಕ್ಕೆ ಜನಾರ್ದನ ರೆಡ್ಡಿ ಧುಮುಕಲಿದ್ದಾರೆ.

ಬಳ್ಳಾರಿಗೆ ಮಾಜಿ ಮಂತ್ರಿ ನಾಗೇಂದ್ರ ಎಂಟ್ರಿ ಕೊಟ್ಟಿದ್ದು, ಅವರಿಗೆ ಬೆಂಬಲಿಗರಿಂದ ಅದ್ದೂರಿ ಸ್ವಾಗತ ಸಿಕ್ಕಿದೆ. ಜನಾರ್ದನ ರೆಡ್ಡಿ ರುದ್ಧ ವಾಗ್ದಾಳಿ ನಡೆಸಿದ ನಾಗೇಂದ್ರ, ಅವರು ಎಲ್ಲೇ ಮನೆ ಮಾಡಿದರೂ ಗೆಲ್ಲುವುದು ನಮ್ ಪಕ್ಷ ಎಂಬ ಶ್ವಾಸ ವ್ಯಕ್ತಪಡಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿ

### ಹಳಿಯಾಳದಲ್ಲಿ ವಿದ್ಯುತ್ ಅವಘಡ ಮಳಿಗೆ, ಮನೆಗಳು ಬೆಂಕಿಗಾಹುತಿ

**ಕಾರವಾರ:** ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದಾಗಿ ಅಂಗಡಿ, ಮನೆಗಳಿಗೆ ಬೆಂಕಿ ತಗುಲಿದ ಘಟನೆ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಪಟ್ಟಣದ ಉಪ ನೋಂದಣಿ ಕಚೇರಿ ಬಳಿ ನಡೆದಿದೆ. ಉಪ ನೋಂದಣಿ ಕಚೇರಿ ಬಳಿಯ ರ ಜೆರಾಕ್ಸ್ ಸೆಂಟರ್‌ನಲ್ಲಿ ದ್ಯುತ್ ಸ್ಪರ್ಶವಾಗಿ ಬೆಂಕಿ ಉಂಟಾಗಿದ್ದು, ಪಕ್ಕದಲ್ಲೇ ಇದ್ದ ಒಂದು ಮನೆ, ಎರಡು ಅಂಗಡಿ ಹಾಗೂ ಒಂದು ಹೋಟೆಲ್‌ಗೆ ಬೆಂಕಿ ತಗುಲಿ ಸಂಪೂರ್ಣ ಸುಟ್ಟು ಹೋಗಿದೆ. ದ್ಯುತ್ ಅವಘಡದಿಂದ ಲಕ್ಷಾಂತರ ಮೌಲ್ಯದ ವಸ್ತುಗಳು ನಷ್ಟವಾಗಿವೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಧಾಸಿ ಬೆಂಕಿ ನಂದಿಸುವ ಪ್ರಯತ್ನ ನಡೆಸಿದರು. ಬೆಂಕಿಯ ಕೆನ್ನಾಲಿಗೆ ಇನ್ನೂ ಹೆಚ್ಚಿನ ಭಾಗಕ್ಕೆ ಪಸರಿಸಿದ್ದು, ರಾತ್ರಿಡೀ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಘಟನೆ ಸಂಬಂಧ ಹಳಿಯಾಳ ಶಹರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



### ಪೌಷ್ಟಿಕ ಆಹಾರ ವಿತರಣೆಗೆ ಮಿಲೆಟ್ಸ್ ಖರೀದಿ ಹೆಚ್ಚಳ

**ನವದೆಹಲಿ:** ದೇಶವಾಸಿಗಳಿಗೆ ಅಗತ್ಯ ಪೌಷ್ಟಿಕ ಆಹಾರ ವಿತರಣೆಗಾಗಿ ಕೇಂದ್ರ ಸರ್ಕಾರ ಮಿಲೆಟ್ಸ್ ಖರೀದಿಯನ್ನು ಹೆಚ್ಚಿಸಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮೂರನೇ ಅವಧಿ ಆಡಳಿತದಲ್ಲಿ ಹಿಂದೆಂದಿಗಿಂತ ಅಧಿಕ ಮಿಲೆಟ್ಸ್ ಖರೀದಿ ಮಾಡುತ್ತಿದೆ ಎಂದಿದ್ದಾರೆ. 12.49 ಲಕ್ಷ ಮೆಟ್ರಿಕ್ ಟನ್ ಖರೀದಿ: 2023-24ರ ಮುಂಗಾರು ಮಾರುಕಟ್ಟೆ ಋತುವಿನಲ್ಲಿ ಕೇಂದ್ರ ಸರ್ಕಾರ 12.49 ಲಕ್ಷ ಮೆಟ್ರಿಕ್ ಟನ್ ಮಿಲೆಟ್ಸ್ ಖರೀದಿ ಮಾಡಿದೆ ಎಂದು ತಿಳಿಸಿದ್ದಾರೆ. ಮೋದಿ ಸರ್ಕಾರವು ತನ್ನ ಮೂರನೇ ಕಾರ್ಯಾವಧಿಯ ಮೊದಲ 100 ದಿನಗಳಲ್ಲಿ ಸಾರ್ವಜನಿಕ ವಿತರಣಾ ವ್ಯವಸ್ಥೆ ಮತ್ತು ಇತರ ಕಲ್ಯಾಣ ಯೋಜನೆಗಳ ಫಲಾನುಭವಿಗಳ ಪೌಷ್ಟಿಕಾಂಶದ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಹಲವಾರು ಕ್ರಮಗಳನ್ನು ಕೈಗೊಂಡಿದೆ. ಅವುಗಳಲ್ಲಿ ಪ್ರಧಾನವಾದದ್ದು ಮಿಲೆಟ್ಸ್ ಖರೀದಿಯಲ್ಲಿನ ಹೆಚ್ಚಳ.

ಪುಟ 2

# ದರ್ಶನ್‌ಗೆ ಸಂಕಷ್ಟ

## ಪ್ರೊಡ್ಯೂಸರ್‌ಗೆ ಬೆದರಿಕೆ ಕೇಸ್‌ಗೆ ಮರುಜೀವ



**ಬೆಂಗಳೂರು:** ಬಳ್ಳಾರಿ ಜೈಲಿನಲ್ಲಿರುವ ದರ್ಶನ್‌ಗೆ ಇದೀಗ ಮತ್ತೊಂದು ಸಂಕಷ್ಟ ಎದುರಾಗಿದ್ದು, ಬೆದರಿಕೆ ಚಾರವಾಗಿ ನಿರ್ಮಾಪಕ ದಾಖಲಿಸಿದ್ದ ಕೇಸ್ ಇದೀಗ ಮರುಜೀವ ಪಡೆದುಕೊಂಡಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದ ಹಿನ್ನೆಲೆ ಬಳ್ಳಾರಿ ಸೆಂಟ್ರಲ್ ಜೈಲಿನಲ್ಲಿರುವ ಆರೋಪಿ ದರ್ಶನ್‌ಗೆ ಇದೀಗ ಇನ್ನೊಂದು ಸಂಕಷ್ಟ ಎದುರಾಗಿದೆ. ಕೊಲೆ ಕೇಸ್‌ನಲ್ಲಿ ಜೈಲಿನಲ್ಲಿದ್ದರೂ ಆಪತ್ತು ತಪ್ಪದಂತೆ ಆಗಿದೆ.

ಈ ಹಿಂದೆ 'ಭಗವಾನ್ ಶ್ರೀ ಕೃಷ್ಣಾ' ಎಂಬ ಭರತ್ ನಿರ್ಮಾಣದ ಸಿನಿಮಾದಲ್ಲಿ ಧ್ರುವನ್ ನಾಯಕನಾಗಿ ನಟಿಸುತ್ತಿದ್ದ. 2020ರಲ್ಲಿ ನಿರ್ಮಾಪಕ ಭರತ್ ಸಿನಿಮಾದ ಶೂಟಿಂಗ್ ಶುರು ಮಾಡಿದ್ದ. ಆದರೆ ಕೋಡ್ ಕಾರಣದಿಂದಾಗಿ ಅರ್ಧಕ್ಕೆ ಸಿನಿಮಾ ನಿಂತುಹೋಗಿತ್ತು. ಈ ಚಾರವಾಗಿ ನಟ ಧ್ರುವನ್, ದರ್ಶನ್ ಬಳಿ ಹೋಗಿದ್ದ. ಈ ವೇಳೆ ದರ್ಶನ್‌ನಿಂದ ಭರತ್‌ಗೆ ಕರೆ ಮಾಡಿಸಿದ್ದ. ಆಗ ದರ್ಶನ್ 'ನೀನೆ ಇರೋದಿಲ್ಲ' ಎಂದು ಭರತ್‌ಗೆ ಬೆದರಿಕೆ ಹಾಕಿದ್ದರು.

ಕೆಂಗೇರಿ ಪೊಲೀಸ್ ಠಾಣೆಯಲ್ಲಿ ಸಿನಿಮಾ ಚಾರವಾಗಿ ಧ್ರುವನ್, ನಟ ದರ್ಶನ್ ಬಳಿ ಹೋಗಿ ಬೆದರಿಕೆ ಹಾಕಿಸಿದ್ದಾನೆ ಎಂದು ನಿರ್ಮಾಪಕ ಭರತ್ ದೂರು ದಾಖಲಿಸಿದ್ದರು. 2022ರ ಆ.5 ರಂದು ಧ್ರುವನ್ ಮೇಲೆ ಎನ್‌ಸಿಆರ್ ದಾಖಲಾಗಿತ್ತು. ಆ ವೇಳೆ ಬೆದರಿಕೆ ಹಾಕಿದ್ದ ಚಾರವಾಗಿ ದರ್ಶನ್ ರುದ್ಧ ದೊಡ್ಡ ಮಟ್ಟದಲ್ಲಿ ಸುದ್ದಿಯಾಗಿತ್ತು. ಆದರೆ ದರ್ಶನ್ ಮತ್ತು ಧ್ರುವನ್ ಮೇಲೆ ಕೆಂಗೇರಿ ಪೊಲೀಸರು ಯಾವುದೇ ಕ್ರಮ ಕೈಗೊಂಡಿರಲಿಲ್ಲ ಹಾಗೂ ನೋಟಿಸ್ ಕೂಡ ಕೊಟ್ಟಿರಲಿಲ್ಲ.

### ಮುಡಾ ಹಗರಣ

# ಎಲ್ಲ ಸೈಟ್‌ಗಳ ವಾಪಸ್‌ಗೆ ಕಾಂಗ್ರೆಸ್ ಪಟ್ಟು




**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾ ಹಗರಣ ಸಂಬಂಧ ತೀವ್ರ ಮುಜುಗರಕ್ಕೊಳಗಾಗಿರುವ ಕಾಂಗ್ರೆಸ್ ಇದೀಗ ಅದೇ ಅಸ್ತ್ರವನ್ನು ಮುಂದಿಟ್ಟುಕೊಂಡು ಪ್ರತಿಪಕ್ಷಗಳ ನಾಯಕರಿಗೂ ಬಿಸಿ ಮುಟ್ಟಿಸಲು ಮುಂದಾಗಿದೆ. ಮುಡಾದಿಂದ ಹಂಚಿಕೆಯಾಗಿರುವ 14 ಸೈಟ್‌ಗಳನ್ನು ಸಿಎಂ ಸಿದ್ದರಾಮಯ್ಯ ಪತ್ನಿ ಪಾವರ್ತಿ ವಾಪಸ್ ನೀಡಿರುವ ಬೆನ್ನಲ್ಲೇ, 50:50 ಅನುಪಾತದಲ್ಲಿ ಮುಡಾ ನೀಡಿದ ಎಲ್ಲಾ ನಿವೇಶನಗಳ ವಾಪಸಾಗಿಗೆ ಕಾಂಗ್ರೆಸ್ ನಾಯಕರು ಪಟ್ಟುಡಿದಿದ್ದಾರೆ. ಕಾಂಗ್ರೆಸ್ ನಾಯಕರ ಈ ನಿಲುವು, ಜೆಡಿಎಸ್ ಹಾಗೂ ಬಿಜೆಪಿ ನಾಯಕರ ಮೇಲೆ ಸೇಡು ತೀರಿಸಿಕೊಳ್ಳಲು ಕಾಂಗ್ರೆಸ್ ಮುಂದಾಗಿದೆಯೇ ಎಂಬ ಅನುಮಾನ ಹುಟ್ಟುಹಾಕಿದೆ.

ಪುಟ 2

# ನಟ ಸಲ್ಮಾನ್ ಖಾನ್‌ಗೆ ಮತ್ತೆ ಬೆದರಿಕೆ

» **ಬಿಷ್ಣೋಯ್ ಜೊತೆಗಿನ ದ್ವೇಷ ಕೊನೆಗೊಳಿಸಲು 5 ಕೋಟಿಗೆ ಬೇಡಿಕೆ**

**ಮುಂಬೈ:** ಬಾಲಿವುಡ್ ನಟ ಸಲ್ಮಾನ್ ಖಾನ್ ಅವರಿಗೆ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಕೊಲೆ ಬೆದರಿಕೆ ಹಾಕಿದ್ದು, ದ್ವೇಷವನ್ನು ಕೊನೆಗಾಣಿಸಲು 5 ಕೋಟಿಗೆ ಬೇಡಿಕೆ ಇಟ್ಟಿದೆ ಎನ್ನಲಾಗಿದೆ. ಮುಂಬೈ ಟ್ರಾಫಿಕ್ ಪೊಲೀಸರಿಗೆ ಕಳುಸಲಾದ ವಾಟ್ಸಾಪ್ ಸಂದೇಶದಲ್ಲಿ, ಹಣವನ್ನು ನೀಡದಿದ್ದರೆ ನಟನ ಭಷ್ಯವು ಇತ್ತೀಚೆಗೆ ಬಿಷ್ಣೋಯ್ ಗ್ಯಾಂಗ್ ಸದಸ್ಯರಿಂದ ಹತ್ಯೆಗೀಡಾದ ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕಿಗಿಂತ ಕೆಟ್ಟದಾಗಿರುತ್ತದೆ ಎಂದು ಎಚ್ಚರಿಸಿದೆ.

ಪುಟ 2



### ದೇವದುರ್ಗ ತಾಲೂಕು ಆಸ್ಪತ್ರೆಯಲ್ಲಿ ಕಳ್ಳರ ಕೈ ಚಳಕ

# ಆಸ್ಪತ್ರೆಯಲ್ಲಿ ಯಂತ್ರೋಪಕರಣ ಕಳವು

**ರಾಯಚೂರು:** ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿರುವಾಗಲೇ ಲಕ್ಷಾಂತರ ರೂ. ಮೌಲ್ಯದ ಯಂತ್ರೋಪಕರಣಗಳನ್ನು ಕಳ್ಳತನ ಮಾಡಿರುವ ಘಟನೆ ಜಿಲ್ಲೆಯ ದೇವದುರ್ಗ ತಾಲೂಕು ಆಸ್ಪತ್ರೆಯಲ್ಲಿ ನಡೆದಿದೆ.

24X7 ಕಾರ್ಯನಿರ್ವಹಿಸುವ ತಾಲೂಕು ಆಸ್ಪತ್ರೆಯಲ್ಲಿ ಲಕ್ಷಾಂತರ ರೂ. ಮೌಲ್ಯದ ಯಂತ್ರೋಪಕರಣಗಳು ಕಳ್ಳತನವಾಗಿದ್ದು, ಸಿಬ್ಬಂದಿ ಕಾರ್ಯನಿರ್ವಹಿಸುತ್ತಿರುವಾಗಲೇ ಈ ಘಟನೆ ನಡೆದಿದೆ. ಸಿಸಿಟಿವಿ ಡಿವಿಆರ್ ಕೂಡ ಮಾಯವಾಗಿದೆ.

ಪ್ರಯೋಗಾಲಯದ ಬೀಗ ಹಾಕದೇ ಸಿಬ್ಬಂದಿ ಹಾಗೆ ಬಿಟ್ಟಿದ್ದರು. ಈ ವೇಳೆ ಹಿಮೋಗ್ಲೋಬಿನ್ ಲೆವೆಲ್, ಆಕ್ಸಿಜನ್ ಲೆವೆಲ್ ಚೆಕ್ ಮಾಡುವ ಮಷಿನ್ ಹಾಗೂ ಎಲೆಕ್ಟ್ರೋಲೈಟ್ ತಪಾಸಣೆ ಸೇರಿದಂತೆ ವಿವಿಧ ರಕ್ತ ಪರೀಕ್ಷೆಗಳನ್ನು ಮಾಡಲು ಬಳಸುತ್ತಿದ್ದ ಮೂರು ದೊಡ್ಡ ಯಂತ್ರಗಳನ್ನು ಕಳ್ಳತನ ಮಾಡಿದ್ದಾರೆ. ಸುಮಾರು 10 ರಿಂದ 15 ಲಕ್ಷ ರೂ. ಮೌಲ್ಯದ ಯಂತ್ರೋಪಕರಣಗಳು ಕಳ್ಳತನವಾಗಿದ್ದು, ಸಿಸಿಟಿವಿ ಡಿವಿಆರ್ ನ್ನು ಕೂಡ ಕದ್ದುಕೊಂಡು ಹೋಗಿದ್ದಾರೆ.

ಅ.12, 13ರ ನಡುವೆ ಘಟನೆ ನಡೆದಿದ್ದು, ಮುಖ್ಯ ವೈದ್ಯಾಧಿಕಾರಿ ಡಾ.ಶಿವಾನಂದ ತಡವಾಗಿ ಅ.16 ರಂದು ದೇವದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಒಂದೊಂದು ಯಂತ್ರೋಪಕರಣಗಳನ್ನು ಹೊತ್ತೊಯ್ಯಲು ಕನಿಷ್ಠ ನಾಲ್ಕು ಜನ ಬೇಕಿದ್ದು, ಈ ಕಳ್ಳತನದ ಹಿಂದೆ ನಾನಾ ಅನುಮಾನಗಳು ಹುಟ್ಟಿಕೊಂಡಿವೆ.

ಒಂದೆಡೆ ಆಸ್ಪತ್ರೆಯ ಒಳಗಿನವರ ಸಹಾಯದಿಂದ ಕಳ್ಳತನ ನಡೆದಿರುವ ಶಂಕೆ ವ್ಯಕ್ತವಾಗಿದೆ. ಇನ್ನೊಂದೆಡೆ ಖಾಸಗಿ ಪ್ರಯೋಗಾಲಯಗಳ ಕೈವಾಡದ ಬಗ್ಗೆಯೂ ಶಂಕೆ ವ್ಯಕ್ತವಾಗಿದೆ. ಆದರೆ ಹಿಂದುಳಿದ ಪ್ರದೇಶದಲ್ಲಿನ ಆಸ್ಪತ್ರೆಯಲ್ಲಿ ಕಳ್ಳತನ ನಡೆದಿರುವುದಕ್ಕೆ ಬಡ ರೋಗಿಗಳ ಕಡೆಯವರು, ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.





# ಮಾಜಿ ಸಚಿವರ ಪತ್ನಿ ಭವಾನಿ ರೇವಣ್ಣಗೆ ಬಿಗ್ ರಿಲೀಫ್

## ಜಾಮೀನು ಅರ್ಜಿ ವಜಾ ಮಾಡಲು ನಿರಾಕರಿಸಿದ ಸುಪ್ರೀಂ

**ನವದೆಹಲಿ:** ಅತ್ಯಾಚಾರ ಸಂತ್ರಸ್ತೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಭವಾನಿ ರೇವಣ್ಣಗೆ ರಿಲೀಫ್ ಸಿಕ್ಕಿದೆ. ಭವಾನಿ ಅವರ ಜಾಮೀನು ಅರ್ಜಿ ವಜಾ ಮಾಡಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಸಂತ್ರಸ್ತೆ ಕಿಡ್ನ್ಯಾಪ್ ಕೇಸ್‌ನಲ್ಲಿ ಭವಾನಿ ರೇವಣ್ಣಗೆ ಹೈಕೋರ್ಟ್ ನಿರೀಕ್ಷಣಾ ಜಾಮೀನು ಮಂಜೂರು ಮಾಡಿತ್ತು. ಇದನ್ನು ಪ್ರಶ್ನಿಸಿ, ಎಸ್‌ಐಟಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು. ಅರ್ಜಿ ವಿಚಾರಣೆ ನಡೆಸಿದ ನ್ಯಾ. ಸೂರ್ಯಕಾಂತ್ ನೇತೃತ್ವದ ಪೀಠ, ಜಾಮೀನು ಅರ್ಜಿ ವಜಾ ಮಾಡಲು ನಿರಾಕರಿಸಿದೆ.

ಈಗಾಗಲೇ ಚಾರ್ಜ್‌ಶೀಟ್ ಫೈಲ್ ಆಗಿದೆ. ರಾಜಕೀಯ ಕುಟುಂಬ ಎನ್ನುವ ಕಾರಣಕ್ಕೆ ಜಾಮೀನು ನಿರಾಕರಿಸಲು ಸಾಧ್ಯವಿಲ್ಲ. ಕೆಲವು ರಾಜಕಾರಣಿಗಳು ಅಧಿಕಾರ ದುರ್ಬಳಕೆ ಮಾಡಿಕೊಳ್ಳಬಹುದು. ಈ ಪ್ರಕರಣದಲ್ಲಿ ತನಿಖೆ ದಾರಿ ತಪ್ಪಿದ್ದಿಯೇ? ತಪ್ಪಿದ್ದರೆ ನಾವು ನಿಮ್ಮ ನೆರವಿಗೆ ಬರಬಹುದು. ಆದರೆ ಇಲ್ಲಿ ಯಾವುದು ಆ ರೀತಿ ಕಾಣ್ತಿಲ್ಲ ಎಂದು ಕೋರ್ಟ್ ತಿಳಿಸಿದೆ.

# ಮಹಾಕಾವ್ಯ ರಚಿಸಿದ ವಾಲ್ಮೀಕಿ ವಿಶ್ವಮಾನ್ಯ



**ಹುಳಿಯಾರು:** ವಾಲ್ಮೀಕಿ ಪ್ರಪಂಚವೇ ಮೆಚ್ಚುವ ರಾಮಯಣ ಮಹಾಕಾವ್ಯ ರಚನೆ ಮಾಡಿ ವಿಶ್ವಮಾನ್ಯರಾಗಿದ್ದಾರೆ ಎಂದು ಹುಳಿಯಾರು ಪಟ್ಟಣ ಪಂಚಾಯ್ತಿ ಅಧ್ಯಕ್ಷೆ ರತ್ನಮ್ಮ ಅಭಿಪ್ರಾಯಪಟ್ಟರು.

ಹುಳಿಯಾರು ಪಟ್ಟಣ ಪಂಚಾಯ್ತಿ ವತಿಯಿಂದ ಏರ್ಪಡಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ಅವರು ಮಾತನಾಡಿ ವಾಲ್ಮೀಕಿ ಅವರು ಮಹಾಕಾವ್ಯ ರಚನೆ ಮಾಡಿದ ರೀತಿ ನಿಜಕ್ಕೂ ಇಂದಿನ ಯುವ ಸಮೂಹಕ್ಕೆ ದಾರಿದೀಪ. ಇಂದಿನ ಯುವ ಸಮೂಹ ವಾಲ್ಮೀಕಿ ಜೀವನದ ಆದರ್ಶ ಹಾಗೂ ರಾಮಾಯಣದ ವಿಚಾರಧಾರೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಪಟ್ಟಣ ಪಂಚಾಯ್ತಿ ಉಪಾಧ್ಯಕ್ಷೆ ಕಾವ್ಯರಾಣಿ ಅವರು ಮಾತನಾಡಿ ಮಹರ್ಷಿ ಶ್ರೀ ವಾಲ್ಮೀಕಿಯ ಮಹಾಕಾವ್ಯ ರಾಮಾಯಣವು ಮಾನವ ಕುಲವನ್ನು ಉದ್ಧಾರ ಮಾಡಲಿಕ್ಕೆ ಹುಟ್ಟಿದ ಮಹಾಗ್ರಂಥ. ಇದರಲ್ಲಿ ಕೌಟುಂಬಿಕ ಮೌಲ್ಯಗಳು, ದೇಶ ಪ್ರೇಮ, ಸಮಾಜ ಸುಧಾರಣೆಯ ಚಿಂತನೆಗಳು ಅಡಕವಾಗಿದ್ದು, ಅವರ ಜೀವನ ಸಂದೇಶಗಳು ಇಂದಿಗೂ ಪ್ರಸ್ತುತ ಎಂದು ಹೇಳಿದರು. ಪ್ರಭಾರ ಮುಖ್ಯಾಧಿಕಾರಿ ಮಂಜುನಾಥ್, ಪಪಂ ಸದಸ್ಯರುಗಳಾದ ಹೇಮಂತ್‌ಕುಮಾರ್, ಜಹೀರ್ ಸಾಬ್, ಎಸ್‌ಆರ್‌ಎಸ್ ದಯಾನಂದ್, ದಸ್ತುಗಿರಿಸಾಬ್, ಮಂಜನಾಯ್ಕ, ಮಾಜಿ ಸದಸ್ಯ ರಾಘವೇಂದ್ರ, ಮತ್ತಿತರರು ಇದ್ದರು.

# ರಾಮಾಯಣದ ತತ್ವಾದರ್ಶ ಅಳವಡಿಸಿಕೊಳ್ಳಿ

**ಹುಳಿಯಾರು:** ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣವನ್ನು ಪ್ರತಿಯೊಬ್ಬರೂ ಓದಿ, ಅದರಲ್ಲಿನ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ದೊಡ್ಡಎಣ್ಣೇಗೆರೆ ಗ್ರಾಪಂ ಪಿಡಿಒ ರಾಘವೇಂದ್ರ ಹೇಳಿದರು. ಹುಳಿಯಾರು ಸಮೀಪದ ದೊಡ್ಡಎಣ್ಣೇಗೆರೆ ಗ್ರಾಪಂ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ವಾಲ್ಮೀಕಿ ಜಯಂತಿಯಲ್ಲಿ ಅವರು ಮಾತನಾಡಿದರು. ರಾಮಾಯಣದಲ್ಲಿ ಅಣ್ಣ-ತಮ್ಮ, ಗಂಡ-ಹೆಂಡತಿಯ ಸಂಬಂಧಗಳ ಕುರಿತು ಉಲ್ಲೇಖಿಸಲಾಗಿದ್ದು ಇದನ್ನು ಅರಿತು ನಾವು ಜೀವನ ನಡೆಸಬೇಕು. ರಾಜ ತನ್ನ ಸಾಮ್ರಾಜ್ಯದ ಪ್ರಜೆಗಳ ಜೊತೆ ಯಾವ ರೀತಿ ಸಂಬಂಧಗಳನ್ನು ಹೊಂದಿರಬೇಕು ಎಂಬುದನ ಅರಿತುಕೊಳ್ಳಬೇಕು ಎಂದರು.

ಮಹಾತ್ಮ ಗಾಂಧೀಜಿ ಅವರು ಕೂಡ ರಾಮಾಯಣದಿಂದ ಪ್ರಭಾವಿತರಾಗಿ ರಾಮ ರಾಜ್ಯದ ಕನಸು ಕಂಡಿದ್ದರು. ಆಧುನಿಕ ಯುಗದಲ್ಲಿ ವಿದ್ಯೆಗೆ ಪ್ರಾಮುಖ್ಯತೆ ನೀಡಬೇಕು. ವಿದ್ಯೆಯಿಂದ ಸಮಾಜದಲ್ಲಿನ ಅಸಮಾನತೆ ದೂರ ಮಾಡಬಹುದು. ಸರ್ಕಾರಗಳು ಇಂದು ಪರಿಶಿಷ್ಟರ ಅಭಿವೃದ್ಧಿಗಾಗಿ ಅನೇಕ ಯೋಜನೆ ಜಾರಿಗೊಳಿಸಿದ್ದು ಪ್ರತಿಯೊಬ್ಬರೂ ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗೇರಬೇಕು ಎಂದರು. ಗ್ರಾಮ ಪಂಚಾಯತ್ ಅಧ್ಯಕ್ಷರಾದ ತಾಯಮ್ಮ, ಉಪಾಧ್ಯಕ್ಷರಾದ ಅನಿತಾ, ಪಿಡಿಒ ರಾಘವೇಂದ್ರ ಸಿಬ್ಬಂದಿ ವರ್ಗದವರಾದ ಮಧು, ಮೂರ್ತಿ, ಮತ್ತಿತರರು ಇದ್ದರು.



# ನಾಳೆ ಹಿರಿಯ ವಿದ್ಯಾರ್ಥಿಗಳ ಸಭೆ

**ವಿಜಯಪುರ:** ಅಕ್ಟೋಬರ್ 19ರ ಶನಿವಾರ ಬೆಳಗ್ಗೆ 11 ಗಂಟೆಗೆ ವಿಜಯಪುರ ಪಟ್ಟಣದ ಹೊರವಲಯವಾದ ಮೇಲೂರು ರಸ್ತೆಯ ಅಂಕತಟ್ಟಿ ಗೇಟ್ ಬಳಿಯ ವಿದ್ಯಾದ್ರಿ ಕಾಲೇಜ್ ಹತ್ತಿರ ಎಸ್ ಎನ್ ಕಾಂಪ್ಲೆಕ್ಸ್ ನ ಹಿಂಭಾಗದಲ್ಲಿರುವ, ಎಸ್ ಎನ್ ಫಾರ್ಮ್ ಹೌಸ್ ನಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ಹಿರಿಯ ವಿದ್ಯಾರ್ಥಿಗಳ ಸಭೆ ನಡೆಸಲು ತೀರ್ಮಾನಿಸಲಾಗಿದ್ದು ಹಳೆಯ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಅಧ್ಯಕ್ಷರಾದ ಡಿಎಸ್ ವೆಂಕಟಚಲಪತಿ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವರು. ಹಿರಿಯ ವಿದ್ಯಾರ್ಥಿಗಳ ಸಂಘಕ್ಕೆ ನವಂಬರ್ ಮಾಹೆಯಲ್ಲಿ ಚುನಾವಣೆ ನಡೆಸುವ ಉದ್ದೇಶ ಹೊಂದಿದ್ದು ಅದರಲ್ಲಿ ಸ್ಪರ್ಧಿಸಲು ಹಾಗೂ ಮತದಾನ ನಡೆಸಲು ಸಂಘದ ಸದಸ್ಯತ್ವವನ್ನು ಎಲ್ಲರೂ ಪಡೆಯಬೇಕಾಗಿದ್ದು, ಅಕ್ಟೋಬರ್ 31ರ ಒಳಗಾಗಿ ಸದಸ್ಯತ್ವವನ್ನು ನೋಂದಾಯಿಸಬೇಕೆಂದು ಇದರ ಬಗ್ಗೆ ವಿಸ್ತೃತವಾಗಿ ಚರ್ಚಿಸಲು ಅಕ್ಟೋಬರ್ 19ರ ಶನಿವಾರದಂದು ಸಭೆ ಕರೆಯಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ವಿದ್ಯಾರ್ಥಿಗಳು ಭಾಗವಹಿಸಬೇಕೆಂದು ತಿಳಿಸಿರುವರು.

# ಧ್ವನಿ ಬದಲಾದರೆ ಬದುಕೇ ಬದಲು

**ಶ್ರೀರಂಭಾಪುರಿ ಪೀಠ(ಬಾಳೆಹೊನ್ನೂರು):** ಬದುಕಿನಲ್ಲಿ ಬರುವ ಬಹಳಷ್ಟು ಸಮಸ್ಯೆಗಳು ಸೃಷ್ಠಿಯಾಗುವುದು ನಮ್ಮ ಮಾತಿನ ಧ್ವನಿಯಿಂದ. ಏನು ಹೇಳುತ್ತೇವೆ ಎನ್ನುವುದಕ್ಕಿಂತಲೂ ಹೇಗೆ ಹೇಳುತ್ತೇವೆ ಎಂಬುದೇ ಮುಖ್ಯ. ಧ್ವನಿ ಬದಲಾದರೆ ಬದುಕೇ ಬದಲಾಗುತ್ತದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಹುಣ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಕತ್ತಲನ್ನು ದೂಷಿಸುವುದರ ಬದಲಾಗಿ ದೀಪ ಬೆಳಗಿದರೆ ಕತ್ತಲು ತಾನಾಗಿ ಹೊರಟು ಹೋಗುತ್ತದೆ. ಗೆದ್ದವರು ಸಂತೋಷದಿಂದ ಇದ್ದರೆ ಸೋತವರು ಯೋಚಿಸುತ್ತಾ ಇರುತ್ತಾರೆ. ಇವೆರಡೂ ಶಾಶ್ವತವಲ್ಲ ಎಂದು ತಿಳಿದವರು ಪ್ರತಿ ದಿನವನ್ನು ಹೊಸತನದೊಂದಿಗೆ ಕಳೆಯುತ್ತಾರೆ. ಬದುಕು ನಾವು ಬದುಕಲಿಕ್ಕೆ ಹೊರತು ಪರರನ್ನು ಮೆಚ್ಚಿಸಲಿಕ್ಕೆ ಅಲ್ಲ. ಎತ್ತರಕ್ಕೆ ಏರಬಯಸುವ ವ್ಯಕ್ತಿ ಏಣಿ ಕಟ್ಟುವ ಕಾರ್ಯದಲ್ಲಿ ನಿರತನಾಗಿರುತ್ತಾನೆ ಹೊರತು ಇನ್ನೊಬ್ಬರ ಏಳ್ಗೆಗೆ ಕಲ್ಲು ಹಾಕುವುದಿಲ್ಲ. ಶ್ರಮ ಅನ್ನುವುದು ಯಾರನ್ನೂ ಕೊಲ್ಲುವುದಿಲ್ಲ. ಆದರೆ ಚಿಂತೆ ಅನ್ನುವುದು ಬಹಳಷ್ಟು ಜನರನ್ನು ಜೀವಂತವಾಗಿ ಕೊಲ್ಲುತ್ತದೆ. ಸಮಯ ಸ್ನೇಹ ಮತ್ತು ಆರೋಗ್ಯ ಮೊದಲಾದವುಗಳಿಗೆ ಬೆಲೆ ಕಟ್ಟಲಾಗದು. ಕಳೆದುಕೊಂಡಾಗಲಷ್ಟೇ ಅವುಗಳ ನಿಜವಾದ ಬೆಲೆ ತಿಳಿಯುತ್ತದೆ. ಪ್ರಪಂಚದಲ್ಲಿ ಎರಡಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ತಾಯಿಯ ಪ್ರೀತಿ ತಂದೆಯ ಜವಾಬ್ದಾರಿ ಎಂಬುದನ್ನು ಮರೆಯುವಂತಿಲ್ಲ. ವೀರಶೈವ ಧರ್ಮ ಸಂವಿಧಾನದಲ್ಲಿ ಜೀವನ ವಿಕಾಸಕ್ಕೆ ಹಾಗೂ ಸುಖ ಶಾಂತಿ ಬದುಕಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ವಿಚಾರ ಧಾರೆಗಳು ಸರ್ವ ಕಾಲಕ್ಕೂ ಅನ್ವಯಿಸುತ್ತವೆ ಎಂದರು.

ಇದೇ ಸಂದರ್ಭದಲ್ಲಿ ಹೂಲಿ ಶ್ರೀ ಗುರು ಸಿದ್ಧನಂಜೇಶ ವಿರಚಿತ ''ಅದ್ಭುತ ಕಾಲಜ್ಞಾನ'' ಕೃತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು. ಈ ಪವಿತ್ರ ಸಮಾರಂಭದಲ್ಲಿ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು, ಮಳಲಿಮಠದ ಡಾ|| ನಾಗಭೂಷಣ ಶಿವಾಚಾರ್ಯರು, ಕರ್ಪುರವಳ್ಳಿ ಜಂಗಮ ಮಠದ ಚಂದ್ರಶೇಖರ ಶಿವಾಚಾರ್ಯರು, ಹಾಸನ ತಣ್ಣೀರಹಳ್ಳಿಮಠದ ವಿಜಯಕುಮಾರ ಸ್ವಾಮೀಜಿ, ಮುಳವಾಡ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯರು, ಕುಂಟೋಜಿ ಕರವೀರೇಶ್ವರ ಹಿರೇಮಠದ ರುದ್ರಮುನಿ ದೇವರು, ಅರಸೀಕೆರೆ ಕೆ.ವಿ.ನಿರ್ವಾಣಸ್ವಾಮಿ, ಜಿ.ಎನ್.ಷಡಕ್ಷರಿ, ಮುರುಂಡಿ ಶಿವಯ್ಯ, ಹಾಸನದ ಶಿವಕುಮಾರ್ ಕಟ್ಟಾಯ್ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

# ಚನ್ನಪಟ್ಟಣ ಉಪಚುನಾವಣೆ: ಮಾದರಿ ನೀತಿ ಸಂಹಿತೆಜಾರಿ

**ರಾಮನಗರ:** ಭಾರತಚುನಾವಣಾಆಯೋಗವು 185-ಚನ್ನಪಟ್ಟಣ ವಿಧಾನಸಭಾಕ್ಷೇತ್ರಕ್ಕೆ ಉಪ ಚುನಾವಣೆಘೋಷಣೆ ಮಾಡಿದ್ದು, ತಕ್ಷಣದಿಂದಲೇ 185-ಚನ್ನಪಟ್ಟಣ ವಿಧಾನಸಭಾಕ್ಷೇತ್ರದ ವ್ಯಾಪ್ತಿಯಲ್ಲಿ ಮಾದರಿ ನೀತಿ ಸಂಹಿತೆಜಾರಿಯಲ್ಲಿರುವುದರಿಂದ 185-ಚನ್ನಪಟ್ಟಣ ವಿಧಾನಸಭಾಕ್ಷೇತ್ರದ ವ್ಯಾಪ್ತಿಯಎಲ್ಲಾ ಸರ್ಕಾರಿ ಕಟ್ಟಡಗಳ ಗೋಡೆ ಮೇಲಿನ ಬರಹಗಳು, ಸರ್ಕಾರಿಕಟ್ಟಡದಆವರಣದಲ್ಲಿ, ಕಾಂಪೌಂಡ್ ಮೇಲೆ ಬರೆದಿರುವಗೋಡೆ ಬರಹಗಳು, ಪೋಸ್ಟರ್‌ಗಳು, ಕಟೌಟ್ ಗಳು, ಬ್ಯಾನರ್ಸ್‌ಗಳು, ಬಾವುಟಗಳು ಇತ್ಯಾದಿಗಳನ್ನು ಚುನಾವಣೆಘೋಷಣೆಯಾದ 24 ಗಂಟೆಯೊಳಿಗೆ ತೆರವುಗೊಳಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 185-ಚನ್ನಪಟ್ಟಣ ವಿಧಾನಸಭಾಕ್ಷೇತ್ರದ ವ್ಯಾಪ್ತಿಯ ಸಾರ್ವಜನಿಕ ಸ್ವತ್ತು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಂದರೆರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ರೈಲ್ವೆ ಮೇಲು ಸೇತುವೆಗಳು, ಹೆದ್ದಾರಿಗಳು, ಸರ್ಕಾರಿ ಬಸ್‌ಗಳು, ಎಲೆಕ್ಟ್ರಿಕ್/ಟೆಲಿಫೋನ್ ಕಂಬಗಳ ಮೇಲೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಎಲ್ಲಾಗ್ರಾಮಪಂಚಾಯ್ತಿ ಕಟ್ಟಡ ಇತ್ಯಾದಿಗಳ ಮೇಲೆ ಅನಧಿಕೃತವಾಗಿ ಹಾಕಲಾಗಿರುವರಾಜಕೀಯ ಪಕ್ಷಗಳ ಜಾಹೀರಾತುಗಳು, ಪೋಸ್ಟರ್‌ಗಳು, ಕಟೌಟ್‌ಗಳು, ಬ್ಯಾನರ್ ಸ್‌ಗಳು, ಬಾವುಟಗಳು ಇತ್ಯಾದಿಗಳನ್ನು 48 ಗಂಟೆಯೊಳಗೆ ತೆರವುಗೊಳಿಸಬೇಕು. ರಾಮನಗರಜಿಲ್ಲಾ ವ್ಯಾಪ್ತಿಯ ಖಾಸಗಿ ಕಟ್ಟಡಗಳು/ಖಾಸಗಿ ಸ್ವತ್ತುಗಳ ಆವರಣಗಳಲ್ಲಿರುವ ಅನಧಿಕೃತರಾಜಕೀಯ ಪಕ್ಷಗಳ ಜಾಹೀರಾತಿನಬ್ಯಾನರ್ ಸ್‌ಗಳು, ಪೋಸ್ಟರ್‌ಗಳು, ಪೇಪರ್ ಕಟೌಟ್‌ಗಳು, ಬಾವುಟಗಳು ಇತ್ಯಾದಿಗಳನ್ನು ಸ್ಥಳೀಯ ಕಾನೂನು ಮತ್ತು ನ್ಯಾಯಾಲಯಗಳ ನಿರ್ದೇಶನದನ್ವಯಚುನಾವಣೆಘೋಷಣೆಯಾದ 72 ಗಂಟೆಯೊಳಗೆ ತೆರವುಗೊಳಿಸಬೇಕು.

# ಮಹರ್ಷಿ ವಾಲ್ಮೀಕಿ ಮಾಡಿದ ಸಾಧನೆ ಶ್ರೇಷ್ಟವಾದದ್ದು

**ವಿಜಯಪುರ:** ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಗುರುವಾರ ಮಹರ್ಷಿ ವಾಲ್ಮೀಕಿ ಜಯಂತಿ ಆಯೋಜನೆ ಮಾಡಲಾಗಿತ್ತು. ವಾಲ್ಮೀಕಿ ಭಾವಚಿತ್ರವನ್ನು ಇಟ್ಟು ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡಿ ಸಿಹಿ ಹಂಚಿಕೆ ಮಾಡಿದರು.

ಪುರಸಭೆ ಮುಖ್ಯಾಧಿಕಾರಿ ಜಿ.ಆರ್.ಸಂತೋಷ್ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ಲೌಕಿಕವಾದ ಚಿಂತನೆಗಳನ್ನು ತ್ಯಜಿಸಿ, ಆತ್ಮಸಾಕ್ಷಾತ್ಕಾರಕ್ಕಾಗಿ ತನ್ನನ್ನೆ ದೇವರಿಗೆ ಅರ್ಪಣೆ ಮಾಡಿಕೊಂಡು ಪಡೆದುಕೊಂಡ ವಿಶೇಷ ಜ್ಞಾನದಿಂದ ರಚಿಸಿದ ರಾಮಾಯಣ ಕಾವ್ಯವು ಇಡೀ ಜಗತ್ತಿಗೆ ಮಾದರಿಯಾಗಿದೆ. ಅವರು ಮಾಡಿದ ಸಾಧನೆ ಶ್ರೇಷ್ಟವಾದದ್ದು, ಅವರ ಹಿಂದಿನ ಬದುಕಿಗಿಂತ ಅವರು ಬದಲಾಗುವುದಕ್ಕಾಗಿ ತನ್ನನ್ನು ಸಿದ್ಧಪಡಿಸಿಕೊಂಡ ರೀತಿ ಅಮೋಘವಾದದ್ದು ಎಂದರು.

ನಾಯಕ ಸಮುದಾಯದ ಹಿರಿಯ ಮುಖಂಡ ಎಲೆ ಮುನಿರಾಜು ಮಾತನಾಡಿ, ದರೋಡೆಕೋರನಾಗಿದ್ದ ಎಂದು ಹೇಳಲಾಗುವ ರತ್ನಾಕರ ವಾಲ್ಮೀಕಿಯಾಗಿ ಬದಲಾಗುವುದಕ್ಕೆ ಗುರುವಿನ ಸಾಕ್ಷ್ಯಾತ್ಕಾರವನ್ನು ಪಡೆದುಕೊಂಡು ಗುರುವಿನ ಮಾರ್ಗದರ್ಶನದಲ್ಲಿ ಸಾಗಿದ್ದರಿಂದ ಅವರು ವಾಲ್ಮೀಕಿಯಾಗಿ ಬದಲಾಗುವುದಕ್ಕೆ ಸಾಧ್ಯವಾಯಿತು. ಪ್ರತಿಯೊಬ್ಬ ಮಾನವ ತನ್ನ ಗುರುವಿನ ಮಾರ್ಗದರ್ಶನವನ್ನು ಪಡೆಯಬೇಕು. ತನ್ನಲ್ಲಿರುವ ಲೌಕಿಕವಾದ ಗುಣಗಳನ್ನು ತ್ಯಜಿಸಿದಾಗ ಮಾತ್ರ ಉತ್ತಮ ವ್ಯಕ್ತಿಯಾಗಿ ರೂಪುಗೊಳ್ಳುತ್ತಾನೆ ಎಂದರು.

ಪುರಸಭೆ ಸದಸ್ಯ ವಿ.ನಂದಕುಮಾರ್ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು, ದೇಶಕ್ಕೆ ಮಾತ್ರವಲ್ಲದೆ, ಇಡೀ ವಿಶ್ವಕ್ಕೆ ಮಾದರಿಯಾಗಿದ್ದಾರೆ. ಅವರು ಬರೆದಿರುವ ಮಹಾಕಾವ್ಯ ರಾಮಾಯಣವು ಇಡೀ ಕುಟುಂಬ ವ್ಯವಸ್ಥೆ ಮತ್ತು ಪಿತೃವಾಕ್ಯ ಪರಿಪಾಲನೆ, ಸಹೋದರರ ಬಾಂಧವ್ಯ, ಜೀವನದಲ್ಲಿ ಎದುರಾಗುವಂತಹ ಎಲ್ಲಾ ರೀತಿಯ ಸಮಸ್ಯೆಗಳನ್ನು ಹೇಗೆ ಎದುರಿಸಬೇಕೆನ್ನುವ ಕುರಿತು ಉತ್ತಮ ಸಂದೇಶವನ್ನು ಒಳಗೊಂಡಿದೆ. ವಾಲ್ಮೀಕಿ ಜಯಂತಿ ಆಚರಣೆ ಮಾಡಿದರೆ ಸಾಲದು, ಅವರಲ್ಲಿದ್ದ ಒಳ್ಳೆಯ ಗುಣಗಳನ್ನು ಅಳವಡಿಸಿಕೊಂಡು ಆಚರಣೆಗೆ ತರಬೇಕು ಎಂದರು. ಪುರಸಭೆ ಸದಸ್ಯರಾದ ಎ.ಆರ್.ಹನೀಪುಲ್ಲಾ, ಬೈರೇಗೌಡ, ಸಿ.ಎಂ.ರಾಮು, ಮಾತನಾಡಿದರು.

ಸದಸ್ಯರಾದ ಶ್ರೀರಾಮ್, ಎಂ.ನಾರಾಯಣಸ್ವಾಮಿ, ಕವಿತಾ, ಕಂದಾಯ ನಿರೀಕ್ಷಕ ತ್ಯಾಗರಾಜ್, ಶಿವನಾಗೇಗೌಡ, ಆರೋಗ್ಯ ನಿರೀಕ್ಷಕಿ ಲಾವಣ್ಯ, ಅನಿಲ್, ಫಹದ್, ಪೃಥ್ವಿ, ಜನಾರ್ಧನ, ಪೂರ್ಣಿಮಾ, ಹೇಮಾವತಿ, ಸಹನಾ, ಮಹರ್ಷಿ ವಾಲ್ಮೀಕಿ ಸಂಘದ ಅಧ್ಯಕ್ಷ ಶ್ರೀರಾಮ್, ರಮೇಶ್, ಕೃಷ್ಣಪ್ಪ, ಕೆ.ಎಚ್.ಚಂದ್ರಶೇಖರ್, ಮುಂತಾದವರು ಹಾಜರಿದ್ದರು.



# ವಾಲ್ಮೀಕಿ ಒಂದು ವರ್ಗಕ್ಕೆ ಸೀಮಿತವಲ್ಲ, ಬದಲಿಗೆ ಇಡೀ ಸಮಾಜಕ್ಕೆ ಆದರ್ಶ

**ಕೋಲಾರ:** ವಾಲ್ಮೀಕಿ ಯಾವುದೇ ಒಂದು ವರ್ಗಕ್ಕೆ ಸೀಮಿತವಾಗಿಲ್ಲ ಎಲ್ಲಾ ಸಮುದಾಯಗಳು ಪೂಜಿಸಲ್ಪಡುವ ಮಹಾನ್ ಚೇತನವಾಗಿದ್ದು ಅವರು ಬರೆದ ರಾಮಾಯಣ ಇಡೀ ದೇಶಕ್ಕೆ ನೀಡಿದ ಅತ್ಯಮೂಲ್ಯ ಕೊಡುಗೆ ಎಂದು ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬಿ. ಎಸ್.ಸುರೇಶ್ ತಿಳಿಸಿದರು.

ನಗರದ ಹೊರವಲಯದ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ವಾಲ್ಮೀಕಿ ಸಮಾಜ ಸಂಘಟನೆಗಳ ನೇತೃತ್ವದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿರವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು ವಾಲ್ಮೀಕಿ ಬರೆದ ರಾಮಾಯಣ ಮತ್ತು ಅಂಬೇಡ್ಕರ್ ಅವರ ಸಂವಿಧಾನವು ಅಣ್ಣತಮ್ಮಂದಿರ ರೀತಿಯಲ್ಲಿ ಒಗ್ಗಟ್ಟಿನಿಂದ ಬದುಕುವಂತೆ ಮಾಡಿದೆ ದೇಶವು ವೈವಿಧ್ಯತೆಯಲ್ಲಿ ಏಕತೆಯನ್ನು ಕಾಣುವಂತಾಗಿದ್ದು ಇಂತಹ ಮಹನೀಯರ ಹಾದಿಯಲ್ಲಿ ದೇಶವು ಅಭಿವೃದ್ಧಿಯ ಕಡೆಗೆ ಹೋಗಬೇಕಾಗಿದೆ ಎಂದರು.

ದೇಶವನ್ನು ಒಡೆದು ಆಳುವ ಸರಕಾರದ ಬಗ್ಗೆ ಎಚ್ಚರಿಕೆಯಿಂದ ಇರಬೇಕು ಜಾತಿ ಜಾತಿಗಳ ಮಧ್ಯೆ ಜಗಳ ತಂದು ರಾಜಕಾರಣ ಮಾಡಲಿದ್ದಾರೆ ಅವರನ್ನು ದೂರವಿಡಿ ಬಡವರ ಪರವಾದ ನಮ್ಮ ಸರಕಾರವು ಎಸ್ಸಿ ಎಸ್ಟಿ ಸಮುದಾಯದ ಅಭಿವೃದ್ಧಿಗೆ 36 ಸಾವಿರ ಕೋಟಿ ಅನುದಾನವನ್ನು ಮೀಸಲಿಟ್ಟಿದೆ ವಿರೋಧ ಪಕ್ಷಗಳು ಆಡಳಿತ ಪಕ್ಷದ ವೈಖರಿಯನ್ನು ಸಹಿಸಿಕೊಳ್ಳದೇ ವಿನಾಕಾರಣ ಆರೋಪಗಳನ್ನು ಮಾಡಲು ಹೊರಟಿದ್ದಾರೆ ಇದಕ್ಕೆ ಕಿವಿ ಕೊಡಬಾರದು ಬಲಹೀನ ಸಮುದಾಯಗಳ ಅಭಿವೃದ್ಧಿಗೆ ಕಾಂಗ್ರೆಸ್ ಸರಕಾರ ಬದ್ಧವಾಗಿದೆ ಎಂದರು.



ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಹಾಗೂ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಮಾತನಾಡಿ ಅಂಬೇಡ್ಕರ್ ಅವರ ದಾರಿಯಲ್ಲಿ ಕಾಂಗ್ರೆಸ್ ಸರಕಾರವು ನಡೆಯುತ್ತಿದೆ ರಾಜ್ಯದಲ್ಲಿ ಹಿಂದುಳಿದ ವರ್ಗದ ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿದ್ದಾರೆ ಎಂದು ಸಹಿಸದ ಕೆಲವರು ಅವರನ್ನು ಅಧಿಕಾರದಿಂದ ಕೆಳಗಿಸಬೇಕು ಎಂದು ಸಂಚು ನಡೆಯುತ್ತಿದೆ ಇದರ ವಿರುದ್ಧ ಒಗ್ಗಟ್ಟಿನಿಂದ ಎಚ್ಚರಿಕೆ ವಹಿಸಿ ನಾವು ಎಲ್ಲರೂ ಒಗ್ಗಟ್ಟಿನಿಂದ ಹೋಗಬೇಕಾಗಿದೆ ಎಂದರು.

ಶಾಸಕ ಕೊತ್ತೂರು ಜಿ.ಮಂಜುನಾಥ್ ಮಾತನಾಡಿ ನಂಬಿಕೆಗೆ ಅರ್ಹವಾದ ವಾಲ್ಮೀಕಿ ಸಮುದಾಯವು ಎಲ್ಲಾ ಸಮುದಾಯಗಳನ್ನು ಜೊತೆಗೆ ಕರೆದುಕೊಂಡು ಹೋಗಿದ್ದಾರೆ. ಸರ್ಕಾರವು ವಾಲ್ಮೀಕಿ ಮಹರ್ಷಿ ಜಯಂತಿಯನ್ನು ಸಾರ್ವಜನಿಕ ರಜೆಯನ್ನಾಗಿ ಘೋಷಿಸಿದೆ. ಮಹರ್ಷಿ ಬರೆದ ಮಹಾಕಾವ್ಯದಲ್ಲಿ ಇರುವ ಎಲ್ಲ ಅಂಶಗಳು ಅನುಕರಣೀಯವಾಗಿವೆ ಸಮಾಜದಲ್ಲಿ ರಾಮಾಯಣದಿಂದ ಕಲಿಯಬೇಕಾದ್ದು ಬಹಳಷ್ಟಿದೆ ಎಂದರು.

ಇದೇ ವೇಳೆ ವೇದಿಕೆ ಮೇಲೆ ಜಿಲ್ಲೆಯ ಅತ್ಯುತ್ತಮ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಅಕ್ರಂ ಪಾಷ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್, ನಗರಸಭೆ ಅಧ್ಯಕ್ಷೆ ಲಕ್ಷ್ಮೀದೇವಮ್ಮ, ಉಪಾಧ್ಯಕ್ಷೆ ಸಂಗೀತ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವೈ.ಶಿವಕುಮಾರ್ , ಅಪರ ಜಿಲ್ಲಾಧಿಕಾರಿ ಮಂಗಳ, ಕೋಲಾರ ಉಪವಿಭಾಗಾಧಿಕಾರಿ ಡಾ. ಮೈತ್ರಿ, ಕೋಲಾರ ತಹಶಿಲ್ದಾರ್ ನಯನ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸನ್, ವಾಲ್ಮೀಕಿ ಸಮಾಜದ ಮುಖಂಡರಾದ ಎನ್ ಅಂಬರೀಷ್, ಬಾಲಗೋವಿಂದ್, ಮಾಲೂರು ವೆಂಕಟರಾಮ್, ಕುಡುವನಹಳ್ಳಿ ಆನಂದ್, ಕೋಟೆ ಶ್ರೀನಿವಾಸ್, ಡಿಪಿಎಸ್ ಮುನಿರಾಜು, ಟಿ.ವಿಜಿಕುಮಾರ್, ಪಂಡಿತ್ ಮುನಿವೆಂಕಟಪ್ಪ, ಸೀಸಂದ್ರ ಗೋಪಾಲಗೌಡ, ಮೈಲಾಂಡಹಳ್ಳಿ ಮುರಳಿ, ನುಕ್ಕನಹಳ್ಳಿ ಶ್ರೀನಿವಾಸ್ ಸೇರಿದಂತೆ ಮತ್ತಿತರರು ಇದ್ದರು.

# ಪೊಲೀಸ್ ಸರ್ಪಗಾವಲಿನಲ್ಲಿ ಆಚರಣೆ

**ಚಾಮರಾಜನಗರ:** ನಗರದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಪೊಲೀಸ್ ಸರ್ಪಗಾವಲಿನಲ್ಲಿ ಆಚರಣೆ ಮಾಡಲಾಯಿತು. ನಗರದ ಜಿಲ್ಲಾಡಳಿತ ಭವನದ ಮುಂಭಾಗ ವಾಲ್ಮೀಕಿ ಪುತ್ಥಳಿ ನಿರ್ಮಾಣಕ್ಕೆ ಭೂಮಿಪೂಜೆ ಮಾಡಲು ನಾಯಕ ಜನಾಂಗದವರು ಮುಂದಾಗುವ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಜಿಲ್ಲಾಡಳಿತ ಭವನದ ಮುಖ್ಯ ಗೇಟ್ ಬಳಿ, ಡಾ.ರಾಜ್ ಕುಮಾರ್ ರಂಗಮಂದಿರದ ಬಳಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗಿತ್ತು. ಜಿಲ್ಲಾಡಳಿತ ಭವನ ಹಾಗೂ ವಾಲ್ಮೀಕಿ ಜಯಂತಿ ಕಾರ್ಯಕ್ರಮಕ್ಕೆ ತೆರಳುವ ಪ್ರತಿಯೊಬ್ಬರನ್ನು ಚೆಕ್ ಮಾಡಿ ಕಳುಹಿಸುತ್ತಿದ್ದ ದೃಶ್ಯ ಕಂಡುಬಂದಿತು. ಅಲ್ಲದೇ ಡಾ.ರಾಜ್ಕುಮಾರ್ ರಂಗಮಂದಿರದಲ್ಲಿ ಆಯೋಜಿಸಿದ್ದ ವಾಲ್ಮೀಕಿ ಜಯಂತಿ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಆಗಮಿಸಿದ್ದ ಹಿನ್ನೆಲೆಯಲ್ಲಿ ರಂಗಮಂದಿರದ ಒಳಗೆ ಹಾಗೂ ಹೊರಗೆ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಹದ್ದಿನ ಕಣ್ಣು ಇಡಲಾಗಿತ್ತು.

**ನಾಯಕ ಜನಾಂಗದ ಮುಖಂಡರು ಗೈರು:** ಅ.17ರವರೆಗೆ ಜಿಲ್ಲಾಡಳಿತ ಭವನದ ಮುಂಭಾಗ ಜಿಲ್ಲಾಡಳಿತವೇ ವಾಲ್ಮೀಕಿ ಪುತ್ಥಳಿ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸದಿದ್ದರೆ ಅಂದು ನಡೆಯುವ ಸರ್ಕಾರಿ ಕಾರ್ಯಕ್ರಮ ಬಹಿಷ್ಕರಿಸಿ ನಾವೇ ಭೂಮಿಪೂಜೆ ನೆರವೇರಿಸುತ್ತೇವೆ ಎಂದು ಕೆಲ ದಿನಗಳ ಹಿಂದೆಯೇ ಜನಾಂಗದ ಮುಖಂಡರು ಹೇಳಿಕೆ ನೀಡಿದ್ದರು. ಆದರೆ, ಜಿಲ್ಲಾಡಳಿತ ಭೂಮಿಪೂಜೆ ನೆರವೇರಿಸದ ಹಿನ್ನೆಲೆಯಲ್ಲಿ ಕಾರ್ಯಕ್ರಮವನ್ನು ಬಹಿಷ್ಕರಿಸಿದ್ದರು. ಇದರಿಂದ ಕಾರ್ಯಕ್ರಮದಲ್ಲಿ ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳ ಮುಖಂಡರು ಮಾತ್ರ ಭಾಗವಹಿಸಿದ್ದರು.

# ರಾಮಾಯಣ ಅತಿದೊಡ್ಡ ಮಹಾಕಾವ್ಯ

**ವಿಜಯಪುರ:** ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ದೇಶದ ಅತಿದೊಡ್ಡ ಮಹಾಕಾವ್ಯ ವಾಗಿದೆ. ಈ ಮಹಾಕಾವ್ಯದಲ್ಲಿ ಭಾರತ ದೇಶದ ಜೀವನ ಚರಿತ್ರೆ, ಸಂಸ್ಕೃತಿ ಅಡಗಿದೆ ಎಂದು ಮಹರ್ಷಿ ವಾಲ್ಮೀಕಿ ಸಂಘದ ಮುಖಂಡರಾದ ರವೀಶ್, ತಿಳಿಸಿದರು.

ಗುರುವಾರದಂದು ಇವರು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯ ಕ್ರಮದಲ್ಲಿ ಮಹರ್ಷಿ ವಾಲ್ಮೀಕಿ ಸಂಘದ ವತಿಯಿಂದ ಆಯೋಜಿಸಿದ್ದ ಪಟ್ಟಣದ ಮಂಡಿಬೆಲೆ ರಸ್ತೆಯಲ್ಲಿನ ಶ್ರೀ ಮಹರ್ಷಿ ವಾಲ್ಮೀಕಿ ಉದ್ಯಾನವನದಲ್ಲಿನ ಶ್ರೀಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಕಾರ್ಯದರ್ಶಿ ಪಾಂಡು, ಮಾತನಾಡಿ ಮಹಾಕಾವ್ಯ ರಾಮಾಯಣ ಇತಿಹಾಸವು ಇಂದಿಗೂ ಪಾಶ್ಚಾತ್ಯರ ದೃಷ್ಟಿಯಲ್ಲಿ ಆದರ್ಶ ಕಾವ್ಯವಾಗಿದೆ. ಪ್ರಪಂಚದಲ್ಲಿರುವ ಅನೇಕ ಭಾಷೆಗಳಲ್ಲಿ ರಾಮಾಯಣ ಗ್ರಂಥ ಹೊರಬಂದಿದೆ ಹಾಗೂ ರಾಮಾಯಣವು ಭರತಖಂಡದಲ್ಲಿ ಜನ್ಮತಾಳಿದರೂ, ವಿಶ್ವಮಾನ್ಯತೆ ಪಡೆದಿದೆ ಎಂದರು. ಗೌರವಾಧ್ಯಕ್ಷರಾದ ನಿವೃತ್ತ ಕೆಎಸ್ ಆರ್‌ಟಿಸಿ ನೌಕರರಾದ ನಾರಾಯಣಸ್ವಾಮಿ ಮಾತನಾಡಿ, ಹಿಂದೂ ಧರ್ಮದ ಪವಿತ್ರ ಗ್ರಂಥಗಳು ರಾಮಾಯಣ ಮತ್ತು ಮಹಾಭಾರತ, ಇಂತಹ ಪವಿತ್ರ ಗ್ರಂಥಗಳನ್ನು ಬರೆದ ಮಹಾನ್ ಪುರುಷರ ಜಯಂತಿಗಳನ್ನು ಎಲ್ಲಾ ಸಮಾಜದ ಜನಾಂಗದವರು ಆಚರಿಸುವಂತಗಬೇಕು ಸಮಾಜದ ಪ್ರತಿಯೊಬ್ಬರೂ ಪಾಲ್ಗೊಂಡಾಗ ಮಾತ್ರ ಜಯಂತಿಗೆ ಅರ್ಥ ಬರುತ್ತದೆ ಎಂದರು.



ವಾಲ್ಮೀಕಿ ರಚಿಸಿದ ರಾಮಾಯಣ ಮಹಾಕಾವ್ಯವು ಧರ್ಮ ಮಾರ್ಗದಲ್ಲಿ ಧಾರ್ಮಿಕ, ಸಾಮಾಜೀಕ ಸದ್ಗುಣಗಳನ್ನು ಪ್ರತಿಪಾದಿಸುವ ದಾರಿ ದೀಪವಾಗಿ, ಜ್ಞಾನದ ದಾರಿ ತೋರಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಸಂತೋಷ್, ಸದಸ್ಯರುಗಳಾದ ಸಿ.ಎಂ. ರಾಮು,ನಂದಕುಮಾರ್,ಹನೀಪುಲ್ಲಾ, ಕವಿತಾ, ಎಂ.ನಾರಾಯಣಸ್ವಾಮಿ,ವಾಲ್ಮಿಕಿ ಸಂಘದ ಟೌನ್ ಅಧ್ಯಕ್ಷರಾದ ಶ್ರೀರಾಮಪ್ಪ,ಎಲೆ ಮುನಿರಾಜು,ಕೆ.ಹೆಚ್ ,ಚಂದ್ರಶೇಖರ್, ಓಂ ಶಕ್ತಿ ಮುನಿಕೃಷ್ಣಪ್ಪ, ತಾಲೂಕು ಸಂಘದ ಅಧ್ಯಕ್ಷರಾದ ನಾಗೇಶ್, ಜೆ.ಡಿ.ಎಸ್ ಎಸ್.ಟಿ ವಿಭಾಗದ ಅಧ್ಯಕ್ಷರಾದ ಮಾಳಿಗೇನಹಳ್ಳಿ ವೆಂಕಟೇಶ್ ಮೂರ್ತಿ, ಹನುಮಂತಪ್ಪ, ದೊಡ್ಡಚಿಮ್ಮನಹಳ್ಳಿ ದೇವರಾಜ್, ಮಹಂತಿನ ಮಠದ ಕಾರ್ಯದರ್ಶಿ ವಿ.ವಿಶ್ವನಾಥ್, ಹಾಗೂ ಎಲ್ಲಾ ಪುರಸಭೆ ಸಿಬ್ಬಂದಿ ವರ್ಗ ಹಾಜರಿದ್ದರು.

# ಧರ್ಮವೀರ ಪ್ರಶಸ್ತಿ ಪ್ರದಾನ

**ಕೋಲಾರ:** ಶ್ರೀಮಧ್ವಾಚಾರ್ಯರ ಸಾಕ್ಷಾತ್ ಶಿಷ್ಯರ ಪೈಕಿ ಒಬ್ಬರಾದ ಕೋಲಾರ ಜಿಲ್ಲೆ ತಂಬಿಹಳ್ಳಿಯ ಶ್ರೀಮನ್ಮಾಧವತೀರ್ಥ ಮೂಲ ಮಹಾ ಸಂಸ್ಥಾನದ ಯತಿಗಳಾದ ಶ್ರೀವಿದ್ಯಾಸಾಗರ ಮಾಧವತೀರ್ಥರು ಮತ್ತು ಶ್ರೀವಿದ್ಯಾವಲ್ಲಭ ಮಾಧವತೀರ್ಥ ಸ್ವಾಮಿಜಿಗಳ ಚಾತುರ್ಮಾಸ್ಯ ಸಮಾರೋಪ ಸಮಾರಂಭವು ಬೆಂಗಳೂರಿನ ವಿದ್ಯಾಪೀಠದಲ್ಲಿ ನಡೆಯಿತು. ಬೆಂಗಳೂರಿನ ಕತ್ರಿಗುಪ್ಪೆಯ ವಾತ್ಸಲ್ಯ ಫೌಂಡೇಷನ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶ್ರೀವಿದ್ಯಾಸಾಗರ ಮಾಧವತೀರ್ಥ ಸ್ವಾಮಿಜಿ ಅವರ 93ನೇ ವರ್ಧಂತ್ಯೋತ್ಸವದ ಅಂಗವಾಗಿ ಶ್ರೀವೀರರಾಮಚಂದ್ರದೇವರ ತುಲಾ ಭಾರವನ್ನೂ ನೆರವೇರಿಸಲಾಯಿತು. ಬೆಂಗಳೂರಿನ ತಮ್ಮ ಮನೆಯಲ್ಲಿ ಮೂರು ತಿಂಗಳ ಕಾಲ ಇಬ್ಬರೂ ಯತಿಗಳಿಗೆ ಚಾತುರ್ಮಾಸ್ಯ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿದ್ದ ಬೆಂಗಳೂರು ಚಾರ್ಟರ್ಡ್ ಅಕೌಂಟೆಂಟ್ ಸಿ.ಆರ್. ಮುರಳಿಧರ್ ಮತ್ತು ಪ್ರೇಮಾ ದಂಪತಿಗೆ ಚಿನ್ನದ ಕಡಗದ ಸಮೇತ 'ಧರ್ಮವೀರ' ಪ್ರಶಸ್ತಿಯನ್ನು ಶ್ರೀಮಾಧವತೀರ್ಥ ಸಂಸ್ಥಾನದಿಂದ ಪ್ರದಾನ ಮಾಡಲಾಯಿತು. ಪೇಜಾವರ ಮಠದ ಶ್ರೀವಿಶ್ವಪ್ರಸನ್ನತೀರ್ಥ ಸ್ವಾಮಿಜಿ, ಮುಳಬಾಗಿಲು ಶ್ರೀ ಶ್ರೀಪಾದರಾಜರ ಮಠದ ಸುಜಯನಿಧಿತೀರ್ಥ ಶ್ರೀ, ಶ್ರೀಭೀಮನಕಟ್ಟೆಮಠದ ರಘುವರೇಂದ್ರ ತೀರ್ಥ ನ್ಯಾಯಮೂರ್ತಿ ಶ್ರೀಶಾನಂದ ಇದ್ದರು.

# ಶರಣರ ಕಾಯಕ ದಾಸೋಹದ ಪರಿಕಲ್ಪನೆ ಶ್ರೇಷ್ಠ

**ಮಂಡ್ಯ:** ಹನ್ನೆರಡನೇ ಶತಮಾನದಲ್ಲೇ ಮಹಿಳೆ ಮತ್ತು ಪುರುಷರು ಎಂಬ ಭೇದ ಭಾವ ಬದಿಗೊತ್ತಿ ಪ್ರತಿಯೊಬ್ಬರು ಕಾಯಕ ಮಾಡಿ, ಜೀವನ ನಡೆಸಬೇಕು ಎನ್ನುವ ಬಸವಣ್ಣನವರ ಕಾಯಕ ಮತ್ತು ದಾಸೋಹದ ಪರಿಕಲ್ಪನೆ ಶ್ರೇಷ್ಠವಾಗಿದೆ ಎಂದು ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ತಿಳಿಸಿದರು.

ನಗರದ ಸ್ವರ್ಣಸಂದ್ರ ಬಡಾವಣೆಯಲ್ಲಿರುವ ಕರ್ನಾಟಕರತ್ನ, ತ್ರಿವಿಧದಾಸೋಹಿ ಪರಮಪೂಜ್ಯ ಡಾ.ಶ್ರೀಶ್ರೀ ಶಿವಕುಮಾರಸ್ವಾಮೀಜಿಯವರ ಉದ್ಯಾನವನದಲ್ಲಿ ಕಾಯಕಯೋಗಿ ಫೌಂಡೇಶನ್ ಹಾಗೂ ಸಿದ್ದಗಂಗಾಶ್ರೀ ಸೇವಾ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ 'ದಾಸೋಹಹುಣ್ಣಿಮೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

900 ವರ್ಷಗಳ ಹಿಂದೆ ತಾಂಡವವಾಡುತ್ತಿದ್ದ ಸಾಮಾಜಿಕ ಅಸಮಾನತೆ, ಮೌಢ್ಯ, ಕಂದಾಚಾರಗಳನ್ನು ಕಿತ್ತೊಗೆಯುವ ನಿಟ್ಟಿನಲ್ಲಿ ಬಸವಣ್ಣನವರ ಸಾರಥ್ಯದಲ್ಲಿ ಶರಣರು ಮಾಡಿದ ಸಾಮಾಜಿಕ ಕ್ರಾಂತಿ ಅದ್ಭುತ. ಪ್ರತಿಯೊಬ್ಬರು ತಾವು ದುಡಿದು ಇತರರಿಗೂ ನೀಡಬೇಕು ಎಂಬುದು ಬಸವಣ್ಣನವರ ಕನಸಾಗಿತ್ತು. ದುಡಿದು ತಿನ್ನುವ ಕಾಯಕ ಹಾಗೂ ಹಂಚಿ ಬದುಕುವ ದಾಸೋಹದ ಪರಿಕಲ್ಪನೆಯ ಕುರಿತು ಜಾಗೃತಿ ಮೂಡಿಸಿದ ಶರಣರ ಆದರ್ಶ ಅನುಕರಣೀಯ ಎಂದರು.

ಪ್ರತಿತಿಂಗಳ ಹುಣ್ಣಿಮೆಯಂದು ಉದ್ಯಾನವನದಲ್ಲಿ 'ದಾಸೋಹ ಹುಣ್ಣಿಮೆ' ಮೂಲಕ ಶರಣರ ಆಶಯಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದ್ದು, ಸಿದ್ದಗಂಗಾಶ್ರೀಗಳ ಆಶಯದಂತೆ ಹಸಿದು ಬಂದವರಿಗೆ ಅನ್ನ ನೀಡುವುದೇ ಧರ್ಮ ಎಂಬ ತತ್ವದಡಿಯಲ್ಲಿ ಪ್ರತಿಯೊಬ್ಬರೂ ಮಾನವೀಯತೆಯನ್ನು ಮೈಗೂಡಿಸಿಕೊಳ್ಳಬೇಕೆಂದರು.



ನಗರಸಭೆ ಸದಸ್ಯ ಸುಮನ್ ಕ್ರಿಸ್ಟೋಫರ್ ಮಾತನಾಡಿ, ಅನ್ನ, ಅರಿವು, ಆಸರೆ ಪ್ರತಿಯೊಬ್ಬರ ಹಕ್ಕು ಎಂಬುದನ್ನು ವಿಶ್ವಕ್ಕೆ ಸಾರಿ ತಮ್ಮ 111ವರ್ಷಗಳ ಸುದೀರ್ಘ ಕಾಲ ಬಡಮಕ್ಕಳ ಸೇವೆಯನ್ನು ಮಾಡಿದ ಮಹಾನ್ ಸಂತ ಸಿದ್ದಗಂಗಾಶ್ರೀಗಳಿಗೆ ಕೇಂದ್ರ ಸರ್ಕಾರ ಭಾರತರತ್ನ ಪ್ರಶಸ್ತಿ ನೀಡಿ ಅವರ ಸೇವೆಯನ್ನು ಗೌರವಿಸಬೇಕೆಂದು ಆಗ್ರಹಿಸಿದರು.

ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್ ಬೆಟ್ಟಹಳ್ಳಿ ಮಾತನಾಡಿ, ಲಿಂಗಾಯತ ಧರ್ಮದ ಸಂಸ್ಥಾಪಕರಾದ ಬಸವಣ್ಣನವರು 12 ನೇ ಶತಮಾನದಲ್ಲೇ ಸಾಮಾಜಿಕ ಅಸಮಾನತೆ, ಜಾತೀಯತೆ ಹೋಗಲಾಡಿಸಲು ಮುಂದಾದ ಒಬ್ಬ ಮಹಾನ್ ಮಾನವತಾವಾದಿ. ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಬಸವಣ್ಣ ಬೋಧಿಸಿದ ಸಮಾನತೆಯ ಅಂಶಗಳನ್ನು ಸಂವಿಧಾನದಲ್ಲಿ ಅಳವಡಿಸಿದ್ದಾರೆ. ಎಲ್ಲರೂ ಸಮಾನರು ಎಂದು ಬೋಧಿಸಿದ ಬಸವಣ್ಣನವರ ಆದರ್ಶ ಪಾಲನೆ ಇಂದಿನ ಅಗತ್ಯವಾಗಿದೆ ಎಂದರು.

ಯೋಗಶಿಕ್ಷಕರಾದ ಶಿವರುದ್ರಸ್ವಾಮಿ ಮಾತನಾಡಿ, ಬಸವಣ್ಣನವರು ಎಲ್ಲರೂ ಒಟ್ಟಾಗಿ ಬಾಳುವ ಕನಸುಕಂಡಿದ್ದರು. ಸ್ವಾತಂತ್ರ್ಯ, ಪ್ರಜಾಪ್ರಭುತ್ವ ಜಾರಿಗೆ ಬಂದು ಇಷ್ಟುವರ್ಷಗಳಾದರೂ ಅವರ ಕನಸು ಸಾಕಾರಗೊಳ್ಳದಿರುವುದು ದುರಂತ. ಬಸವಣ್ಣ ಸ್ಥಾಪನೆ ಮಾಡಿದ ಅನುಭವಮಂಟಪದಲ್ಲಿ ಶೇ. 90 ಮಂದಿ ಕೆಳವರ್ಗದ ಶರಣರೇ ಇದ್ದರು. ಲಿಂಗಭೇದ,ಅಸಮಾನತೆ, ಆಸ್ತಿಯ ಅಸಮಾನಹಂಚಿಕೆಯ ವಿರುದ್ಧವೇ ಅಂದು ಬಸವಣ್ಣ ಧ್ವನಿ ಎತ್ತಿದ ವಿಶ್ವಗುರು ಎಂದು ಬಣ್ಣಿಸಿದರು.

ನಗರಸಭೆ ಸದಸ್ಯೆ ಕೆ.ವಿದ್ಯಾಮಂಜುನಾಥ್ ಮಾತನಾಡಿ, ಪ್ರತಿ ತಿಂಗಳ ಹುಣ್ಣಿಮೆಯ ದಿನದಂದು ನೂರಾರು ಮಂದಿಗೆ 'ದಾಸೋಹ' ಸೇವೆ ಮಾಡುವ ಮೂಲಕ ಕೋಟ್ಯಾಂತರ ಭಕ್ತರ ಭಾವಕೋಶದಲ್ಲಿ ನೆಲೆಯಾಗಿರುವ ಮಹಾದಾಸೋಹಿ ಸಿದ್ದಗಂಗಾಶ್ರೀಗಳ ಸ್ಮರಣೆ ಮಾಡಿಕೊಳ್ಳುತ್ತಿರುವುದು ನಮ್ಮೆಲ್ಲರ ಪುಣ್ಯದ ಕೆಲಸವಾಗಿದೆ. ಇಂತಹ ಕಾಯಕದಲ್ಲಿ ನಿರತವಾಗಿರುವ ಕಾಯಕಯೋಗಿ ಫೌಂಡೇಶನ್ ಸಂಸ್ಥೆಯ ಸಮಾಜಮುಖಿ ಕೆಲಸ ಶ್ಲಾಘನೀಯ ಎಂದರು.

ಸಿದ್ದಗಂಗಾಶ್ರೀ ಸೇವಾ ಸಮಿತಿ ಅಧ್ಯಕ್ಷ ಎಂ.ಆರ್.ಮಂಜುನಾಥ್, ಕಾಂಗ್ರೆಸ್ ಮುಖಂಡ ಸೋಮಶೇಖರ್, ಸಮಾಜಸೇವಕ ರವಿತೇಜ್, ಬಿಜೆಪಿ ಮುಖಂಡ ಜಗದೀಶ್, ಆಟೋ ರಾಜಣ್ಣ, ಬೆಳ್ಳಪ್ಪ, ಬಸವಲಿಂಗು ಅವ್ವೇರಹಳ್ಳಿ, ತಬ್ರೈಸ್ಖಾನ್ ಮತ್ತಿತರರು ಉಪಸ್ಥಿತರಿದ್ದರು.




**ಚಾಮರಾಜನಗರ:** ಕರ್ನಾಟಕ ತಮಿಳುನಾಡಿನ ಗಡಿಹಂಚಿನಲ್ಲಿರುವ ಜೀವನದಿ ಕಾವೇರಿ ನದಿಯಲ್ಲಿ ಸಾಲೂರು ಬೃಹನ್ ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿ ರವರು ವಿಶೇಷ ಆರತಿ ಬೆಳಗಿದರು. ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದ ಪ್ರಸಿದ್ಧ ಪ್ರಖ್ಯಾತಿ ಇತಿಹಾಸ ಹೊಂದಿರುವ ಶ್ರೀ ಸಾಲೂರು ಬೃಹನ್ಮಠದ ಶ್ರೀ ಗಳಾದ ಡಾ. ಶಾಂತ ಮಲ್ಲಿಕಾರ್ಜುನಸ್ವಾಮೀಜಿ ಅವರು ಗಡಿ ಭಾಗದಲ್ಲಿ ಬರುವ ಮೆಟ್ಟೂರು ಡ್ಯಾಂ ಹಿನ್ನಿರಿನ ದಡದಲ್ಲಿ ಮತ್ತು ಪಾಲಾರ್ ನದಿಯ ದಡದಲ್ಲಿ ಕಾವೇರಿ ಆರತಿ, ಗಣಪತಿ ಪೂಜೆ, ಪುಣ್ಯ ಗಣ ಹೋಮ, ರುದ್ರ, ಹೋಮ ವಿವಿಧ ಬಗೆಯ ವಿಶೇಷ ಪೂಜೆಗಳು ಹಮ್ಮಿಕೊಳ್ಳುವ ಮೂಲಕ ಅರ್ಚಕರ ಸಾನಿಧ್ಯದಲ್ಲಿ ಕಳಸ ಆರಾಧನೆ ಪೂಜಾ ಕಾರ್ಯಕ್ರಮವನ್ನು ವಿಧಿ ವಿಧಾನಗಳೊಂದಿಗೆ ಹಾಗೂ ಗಂಗಾ ಆರತಿ ಪೂಜೆಯನ್ನು ನೆರವೇರಿಸಿದರು.

## ಅಭಿವೃದ್ಧಿ ಸಮನ್ವಯ, ಉಸ್ತುವಾರಿ ಸಮಿತಿ ಪರಿಶೀಲನಾ ಸಭೆ 21ಕ್ಕೆ

**ಚಾಮರಾಜನಗರ:** ಜಿಲ್ಲಾಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ ಪರಿಶೀಲನಾ ಸಭೆಯನ್ನು ಲೋಕಸಭಾ ಸದಸ್ಯರಾದ ಸುನಿಲ್ ಬೋಸ್ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 21ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಲ್ಮೀಕಿ ಭಾವಚಿತ್ರ ಮೆರವಣಿಗೆ

**ಚಾಮರಾಜನಗರ:** ನಗರದ ಜಿಲ್ಲಾಡಳಿತ ಭವನದ ಮುಂಭಾಗ ವಾಲ್ಮೀಕಿ ಪುತ್ಥಳಿ ನಿರ್ಮಾಣಕ್ಕೆ ಜಿಲ್ಲಾಡಳಿತ ಮುಂದಾಗದ ಹಿನ್ನೆಲೆಯಲ್ಲಿ ಜಿಲ್ಲೆಯ ನಾಯಕ ಸಮುದಾಯದವರು ಜಿಲ್ಲಾಡಳಿತದ ವತಿಯಿಂದ ನಡೆದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಗೈರಾಗುವ ಮೂಲಕ ತಾವೇ ನಗರದಲ್ಲಿ ವಾಲ್ಮೀಕಿ ಭಾವಚಿತ್ರ ಮೆರವಣಿಗೆಯನ್ನು ಅದ್ದೂರಿಯಾಗಿ ಮಾಡಿದರು. ನಗರದ ಪ್ರವಾಸಿಮಂದಿರದ ಬಳಿ ಜಮಾಯಿಸಿದ ಜಿಲ್ಲೆಯ ವಿವಿಧೆಡೆಗಳಿಂದ ಆಗಮಿಸಿದ್ದ ಸಾವಿರಾರು ಮಂದಿ ನಾಯಕ ಜನಾಂಗದವರು ಟ್ರ್ಯಾಕ್ಟರ್‌ನಲ್ಲಿ ವಾಲ್ಮೀಕಿ ಮಹರ್ಷಿ ಭಾವಚಿತ್ರ ಇರಿಸಿ ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆಯು ಗುಂಡ್ಲುಪೇಟೆ ವೃತ್ತ, ದೊಡ್ಡಂಗಡಿ, ಚಿಕ್ಕಂಗಡಿ ಬೀದಿ, ಸಂತೇಮರಹಳ್ಳಿ ವೃತ್ತ, ಡಿವಿಯೇಷನ್ ರಸ್ತೆ, ಪಚ್ಚಪ್ಪ ಸರ್ಕಲ್, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ತಾಲೂಕು ಕಚೇರಿ ಬಳಿ ಇರುವ ನಾಯಕ ಜನಾಂಗದ ವಿದ್ಯಾರ್ಥಿನಿಲಯದಲ್ಲಿ ಅಂತ್ಯಗೊಂಡಿತು. ಬಳಿಕ ಅಲ್ಲಿಯೇ ಸಮಾವೇಶ ನಡೆಸಿದರು. ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿಯಲ್ಲಿ ಹೆಚ್ಚು ಅಂಕ ಪಡೆದ ಆರ್.ಚೇತನಾ ಎಂಬ ವಿದ್ಯಾರ್ಥಿನಿಗೆ ಮುಂದಿನ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 1 ಲಕ್ಷ ರೂ. ಗಳ ಸಹಾಯಧನದ ಚೆಕ್ ಅನ್ನು ಗಣ್ಯರು ವಿತರಣೆ ಮಾಡಿದರು. ಕಾರ್ಯಕ್ರಮದಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ.ಚಂದ್ರು, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಜಿಲ್ಲಾಧಿಕಾರಿ ಶಿಲ್ಪನಾಗ್, ಜಿಪಂ ಸಿಇಒ ಮೋನಾ ರೋತ್, ಎಸ್ಪಿ ಡಾ.ಬಿ.ಟಿ.ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಪಂ ಉಪ ಕಾರ್ಯದರ್ಶಿ ಲಕ್ಷ್ಮೀ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಿಂದ್ಯಾ ಸೇರಿದಂತೆ ಇತರರಿದ್ದರು.

## ವೆಂಕಟರವಣಸ್ವಾಮಿಗೆ ಪವಿತ್ರಾರೋಹಣ ಪೂಜಾ ಮೆರುಗು

**ಕೋಲಾರ:** ಮುಳಬಾಗಲು ತಾಲೂಕಿನ ದೊಡ್ಡಗುರ್ಕಿ ಗ್ರಾಮದ ವೆಂಕಟರವಣಸ್ವಾಮಿ ದೇವಾಲಯದಲ್ಲಿ ಗುರುವಾರ ಪವಿತ್ರಾರೋಹಣ ಧಾರ್ಮಿಕ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಮುಳಬಾಗಲಿನ ನೀಲಾಸೋಮಶೇಖರ್ ರವರ ಸಾರಥ್ಯದಲ್ಲಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಉತ್ಸವ ಮೂರ್ತಿ ಪಲ್ಲಕ್ಕಿ ಮುಂದೆ ಭಜನೆ ಮಂಡಳಿ ಸದಸ್ಯನಿಯರು ಕೋಲಾಟ, ಭಜನೆ ಹಾಕುವ ಮೂಲಕ ನರ್ತನ ಮಾಡಿ ಗೋವಿಂದ ಸ್ಮರಣೆ ಮಾಡಿದರು. ಈ ಸಂದರ್ಭದಲ್ಲಿ ದೇಗುಲದಲ್ಲಿ ವಿಶೇಷ ಹೋಮಹವನಗಳಾದವು. ಅಂತಿಮವಾಗಿ ದೇಗುಲದಲ್ಲಿ ನಡೆದ ವಿಶೇಷ ಅಲಂಕಾರ, ಪೂಜೆ ನಂತರ ಮಹಾ ಮಂಗಳಾರತಿಯಾಗಿ ಪ್ರಸಾದ, ಅನ್ನದಾನ ನಡೆಯಿತು. ಗ್ರಾಮದಲ್ಲಿ ನಡೆದ ಉತ್ಸವ ತಿರುಪತಿ ತಿಮ್ಮಪ್ಪನ ದರ್ಶನವನ್ನು ನೆನಪಿಸುವಂತಿದೆ ಎಂದು ಭಕ್ತರು ಕೊಂಡಾಡಿ ದೇವರನ್ನು ಕಣ್ತುಂಬಿಸಿಕೊಂಡರು.

## ಪೊಲೀಸ್ ಪೇದೆ ಮನೆಯಲ್ಲಿನ 93 ಗ್ರಾಂ ಚಿನ್ನ, 1.3 ಕೆಜಿ ಬೆಳ್ಳಿ ಸಹಿತ 40 ಸಾವಿರ ರೂ ನಗದು ಕಳವು

**ಚಾಮರಾಜನಗರ:** ಪಟ್ಟಣದಲ್ಲಿ ವಾಸವಾಗಿದ್ದ ಪೊಲೀಸ್ ಪೇದೆಯೊಬ್ಬರ ಮನೆಹೊಳಗೆ ಹೊಕ್ಕ ಕಳ್ಳರು ಮನೆಯಲ್ಲಿದ್ದ 93 ಗ್ರಾಂ ಚಿನ್ನಾಭರಣ, 1ಕೆಜಿ 300 ಗ್ರಾಂ ಬೆಳ್ಳಿ ಪದಾರ್ಥ ಹಾಗೂ 40 ಸಾವಿರ ರೂ ನಗದನ್ನು ದೋಚಿ ಪರಾರಿಯಾಗಿರುವ ಘಟನೆ ನಡೆದಿದೆ. ಚಾಮರಾಜನಗರದ ಸೇವಾಭಾರತಿ ಶಾಲೆಯ ಮುಂಭಾಗದಲ್ಲಿ ವಾಸವಿರುವ ಪಟ್ಟಣ ಪೊಲೀಸ್ ಠಾಣೆಯ ಕಾನ್ಸ್ಟಬಲ್ ಮನುಕುಮಾರ್ ಎಂಬುವರ ಮನೆಯಲ್ಲಿ 93 ಗ್ರಾಂ ಚಿನ್ನಾಭರಣ, 1 ಕೆ.ಜಿ 300 ಗ್ರಾಂ ಬೆಳ್ಳಿ ಹಾಗೂ 40 ಸಾವಿರ ನಗದು ಕಳವು ಮಾಡಿದ್ದಾರೆ. ಬಾಗಿಲು ನುಗ್ಗಿ ಒಳ ನುಗ್ಗಿರುವ ಕಳ್ಳರು ಮನೆಯ ಬೀರುವಿನಲ್ಲಿ ಚಿನ್ನಾಭರಣವನ್ನು ಕಳವು ಮಾಡಿದ್ದಾರೆ.ಪೊಲೀಸ್ ಪೇದೆ ಮನುಕುಮಾರ್ ಮನೆಗೆ ಬೀಗ ಹಾಕಿಕೊಂಡು ಕುಟುಂಬ ಸದಸ್ಯರೊಂದಿಗೆ ಮಹದೇಶ್ವರ ಬೆಟ್ಟಕ್ಕೆ ಹೋಗಿದ್ದ ಸಂದರ್ಭದಲ್ಲಿ ಕಳವು ಮಾಡಲಾಗಿದೆ. ಪೊಲೀಸರ ಮನೆಯಲ್ಲಿಯೇ ಕಳವು ನಡೆದಿರುವುದು ಸಾರ್ವಜನಿಕರಲ್ಲಿ ಭೀತಿ ಹೆಚ್ಚಿಸಿದೆ. ಕಳವು ನಡೆದ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಟಿ.ಕವಿತಾ, ಇನ್ಸ್ಪೆಕ್ಟರ್ ರಾಜೇಶ್ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಶ್ವಾನದಳ ಹಾಗೂ ಬೆರಳಚ್ಚು ತಜ್ಞರು ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



## ಜಿಲ್ಲಾಡಳಿತದ ಮುಂಭಾಗ ಶೀಘ್ರದಲ್ಲೇ, ವಾಲ್ಮೀಕಿ, ಭಗೀರಥ, ಕನಕರ ಪುತ್ಥಳಿ



**ಯಳಂದೂರು:** ಚಾಮರಾಜನಗರದ ಜಿಲ್ಲಾಡಳಿತದ ಮುಂಭಾಗ ಶೀಘ್ರದಲ್ಲೇ ಮಹರ್ಷಿ ವಾಲ್ಮೀಕಿ, ಭಗೀರಥ ಮಹರ್ಷಿ ಹಾಗೂ ಕನಕದಾಸರ ಪುತ್ಥಳಿ ನಿರ್ಮಾಣಕ್ಕೆ ಮುಖ್ಯಮಂತ್ರಿ ಒಪ್ಪಿಗೆ ಸೂಚಿಸಿದ್ದು ಶೀಘ್ರದಲ್ಲೇ ಇದರ ಭೂಮಿಪೂಜೆ ನೆರವೇರಿಸಲಾಗುವುದು ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಮಾಹಿತಿ ನೀಡಿದರು.

ಅವರು ಗುರುವಾರ ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ತಾಲೂಕು ಆಡಳಿತ, ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಮ್ಮಿಕೊಂಡಿದ್ದ ವಾಲ್ಮೀಕಿ ಜಯಂತಿಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ವಾಲ್ಮೀಕಿ ಪುತ್ಥಳಿ ನಿರ್ಮಿಸುವಂತೆ ಅನೇಕ ವರ್ಷಗಳ ಬೇಡಿಕೆಯಾಗಿತ್ತು. ಜಿಲ್ಲೆಯಲ್ಲಿ ನಾಯಕ ಜನಾಂಗದವರು ಸರ್ಕಾರ ನಡೆಸುವ ಕಾರ್ಯಕ್ರಮವನ್ನು ಬಹಿಷ್ಕರಿಸಿದ್ದಾರೆ. ಇದರ ನಿರ್ಮಾಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಸಮಾಜ ಕಲ್ಯಾಣ ಸಚಿವರು, ಗುಂಡ್ಲುಪೇಟೆ, ಚಾಮರಾಜನಗರದ ಶಾಸಕರು ಹಾಗೂ ನಾನು ಖುದ್ದು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದೇವೆ. ಸರ್ಕಾರದ ನಿಯಮಾನುಸಾರ ಇದರ ನಿರ್ಮಾಣಕ್ಕೆ ಕಾಲಾವಕಾಶದ ಅವಶ್ಯಕತೆ ಇದ್ದು ವಾಲ್ಮೀಕಿ ಮಹರ್ಷಿ ಜೊತೆಗೆ ಜಿಲ್ಲಾಡಳಿತದ ಮುಂಭಾಗ ಭಗೀರಥ ಮಹರ್ಷಿ ಹಾಗೂ ಭಕ್ತಕನಕದಾಸರ ಪುತ್ಥಳಿ ನಿರ್ಮಾಣವನ್ನೂ ಮಾಡಲಾಗುವುದು ಎಂದರು.

ಮುಖ್ಯ ಭಾಷಣಕಾರ ರೇಚಣ್ಣ ಮಾತನಾಡಿ, ಆದಿಕವಿ ವಾಲ್ಮೀಕಿ ಮಹರ್ಷಿ ಭರತಖಂಡದ ಒಬ್ಬ ಅದ್ಭುತ ಕವಿಯಾಗಿದ್ದು ಇವರು ರಚಿಸಿದ ರಾಮಾಯಣ ಕಥಾನಕದ ಚರಿತ್ರೆಯೇ ಅದ್ಭುತವಾಗಿದೆ. ಇದರಲ್ಲಿ ಬರುವ ಪ್ರತಿ ಪಾತ್ರಗಳು ಒಂದೊಂದು ವ್ಯಕ್ತಿತ್ವದ ಉದಾಹರಣೆಯಾಗಿ ನಿಲ್ಲುತ್ತದೆ. ಇದರ ಆಧಾರ ಮೇಲೆ ಅನೇಕ ರಾಮಾಯಣದ ಕೃತಿಗಳು ರಚಿತವಾಗಿವೆ. ಇವರು ಎಂದೆಂದಿಗೂ ಆದರ್ಶಪ್ರಾಯರಾಗಿದ್ದಾರೆ ಎಂದರು.

ಕಳೆಗುಂದಿದ ಕಾರ್ಯಕ್ರಮ: ವಾಲ್ಮೀಕಿ ಪುತ್ಥಳಿಯನ್ನು ಜಿಲ್ಲಾಡಳಿತದ ಮುಂಭಾಗ ನಿರ್ಮಾಣ ಮಾಡಬೇಕು. ಇದಕ್ಕೆ ಅ. 17 ರ ವಾಲ್ಮೀಕಿ ಜಯಂತಿಯ ದಿನವೇ ಭೂಮಿಪೂಜೆ ನೆರವೇರಿಸಬೇಕೆಂದು ನಾಯಕ ಸಂಘಟನೆಗಳು ಸರ್ಕಾರದ ವತಿಯಿಂದ ಆಚರಿಸುವ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಬಹಿಷ್ಕರಿಸಿದ್ದರಿಂದ ಕಾರ್ಯಕ್ರಮ ಕಳೆಗುಂದಿತು. ಕೇವಲ ತಹಶೀಲ್ದಾರ್ ಸಭಾಂಗಣಕ್ಕೆ ಕಾರ್ಯಕ್ರಮ ಸೀಮಿತವಾಗಿತ್ತು. ನಾಯಕ ಜನಾಂಗದ ಚುನಾಯಿತ ಜನಪ್ರತಿನಿಧಿಗಳೂ ಕೂಡ ಕಾರ್ಯಕ್ರಮಕ್ಕೆ ಗೈರಾಗಿದ್ದರು. ಕಂದಾಯ ಇಲಾಖೆ, ಪಪಂ, ಸಮಾಜ ಕಲ್ಯಾಣ ಇಲಾಖೆ ಸೇರಿ ಕೆಲ ಅಧಿಕಾರಿಗಳು ಹಾಗೂ ಕೆಲವು ಪ್ರಗತಿಪರ ಸಂಘಟನೆಗಳ ಸದಸ್ಯರು ಮಾತ್ರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರಿಂದ ಜನರಿಲ್ಲದೆ ಕಾರ್ಯಕ್ರಮ ಸೊರಗಿತ್ತು. ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎಚ್.ವಿ. ಚಂದ್ರು, ಪಪಂ ಅಧ್ಯಕ್ಷೆ ಲಕ್ಷ್ಮಿಮಲ್ಲು ಸದಸ್ಯೆ ಸುಶೀಲಾಪ್ರಕಾಶ್ ನಾಮ ನಿರ್ದೇಶಿತ ಸದಸ್ಯರಾದ ಲಿಂಗರಾಜಮೂರ್ತಿ, ಮುನವ್ವರ್‌ಬೇಗ್, ಶ್ರೀಕಂಠಸ್ವಾಮಿ ತಹಶೀಲ್ದಾರ್ ಜಯಪ್ರಕಾಶ್, ಸಮಾಜಕಲ್ಯಾಣ ಇಲಾಖೆಯ ಕೇಶವಮೂರ್ತಿ, ಪಪಂ ಮುಖ್ಯಾಧಿಕಾರಿ ಮಹೇಶ್ ಕುಮಾರ್, ಸಿಡಿಪಿಒ ಸಕಲೇಶ್ವರ್, ವಡಗೆರೆದಾಸ್, ದಸಂಸ ಜಿಲ್ಲಾ ಸಂಚಾಲಕ ರಾಜಣ್ಣ, ಚಾಮುಲ್ ನಿರ್ದೇಶಕ ರೇವಣ್ಣ, ಕಸಾಪ ಅಧ್ಯಕ್ಷ ಯರಿಯೂರು ನಾಗೇಂದ್ರ, ಕರವೇ ಜಿಲ್ಲಾ ಉಪಾಧ್ಯಕ್ಷ ವೈ.ಕೆ.ಮೋಳೆ ನಾಗರಾಜು ಇದ್ದರು.

# ನಾಗಮಲೆ ಚಾರಣಕ್ಕೆ ಇನ್ನು ಮುಂದೆ ಆನ್ ಲೈನ್ ಬುಕ್ಕಿಂಗ್

**ಚಾಮರಾಜನಗರ:** ಕರ್ನಾಟಕ ತಮಿಳುನಾಡು ಗಡಿ ಚಾಮರಾಜನಗರ ಜಿಲ್ಲೆಯಲ್ಲಿನ ಮಹದೇಶ್ವರ ಬೆಟ್ಟದ ಸಮೀಪ ಇರುವ ನಾಗಮಲೆಗೆ ಚಾರಣ ಮಾಡುವ ಪ್ರವಾಸಿಗರು ಮತ್ತು ಭಕ್ತರು ಇನ್ನು ಮುಂದೆ ಆನ್ ಲೈನ್ ಮೂಲಕ ದಿನಾಂಕ ನಿಗಧಿಪಡಿಸಿಕೊಂಡು ಶುಲ್ಕ ಪಾವತಿಸಿ ತೆರಳಬೇಕಾಗಿದೆ.

ಚಾಮರಾಜನಗರ ಜಿಲ್ಲೆಯ ಹನೂರು ಮಹದೇಶ್ವರಬೆಟ್ಟ ಸಮೀಪದ ದಟ್ಟಕಾನನದ ನಡುವೆ ಇರುವ ನಾಗಮಲೆ ಕ್ಷೇತ್ರಕ್ಕೆ ಚಾರಣಕ್ಕೆ ತೆರಳುವ ಮಾದಪ್ಪನ ಭಕ್ತರಿಗೆ ಆನ್ ಲೈನ್ ಬುಕ್ಕಿಂಗ್ ನಂತರವಷ್ಟೆ ತೆರಳಲು ಸರ್ಕಾರ ಆದೇಶವನ್ನು ಮಾಡಿದೆ.

ಮಲೆಮಹದೇಶ್ವರ ವನ್ಯಜೀವಿ ವಿಭಾಗ ಮತ್ತು ಕಾವೇರಿ ವನ್ಯಜೀವಿ ವಿಭಾಗದ ಅರಣ್ಯದ ತಪ್ಪಲಿನಲ್ಲಿರುವ ನಾಗಮಲೆ ಕ್ಷೇತ್ರದಲ್ಲಿ ಕಲ್ಲಿನ ಲಿಂಗದ ರೂಪದಲ್ಲಿ ಶ್ರೀಮಹದೇಶ್ವರ ಸ್ವಾಮಿ ನೆಲೆಸಿದ್ದು ಈ ಪವಿತ್ರ ಸ್ಥಳಕ್ಕೆ ತೆರಳಲು ಮಹದೇಶ್ವರ ಬೆಟ್ಟದಿಂದ ಸುಮಾರು 14 ಕಿ.ಮೀ ಅಂತರವಿದೆ. ದಟ್ಟ ಅರಣ್ಯದ ಮಧ್ಯದಲ್ಲಿರುವ ಈ ಪವಿತ್ರ ಸ್ಥಳಕ್ಕೆ ರಾಜ್ಯದ ನಾನಾ ಕಡೆಯಿಂದ ಪ್ರತಿ ವರ್ಷ ಸಾವಿರಾರು ಸಂಖ್ಯೆಯ ಭಕ್ತಾದಿಗಳು ಭೇಟಿ ನೀಡುತ್ತಿದ್ದು, ಈ ಮಾರ್ಗವು ದಟ್ಟವಾದ ಅರಣ್ಯ ಪ್ರದೇಶದಲ್ಲಿ ಹುಲಿ, ಆನೆ, ಚಿರತೆ, ಕರಡಿ ಮುಂತಾದ ವನ್ಯ ಪ್ರಾಣಿಗಳ ಚಲನವಲನ ಕಂಡುಬರುತ್ತಿರುವುರಿಂದ ಅರಣ್ಯ ಇಲಾಖೆಯು ಭಕ್ತಾದಿಗಳಿಗೆ ಅನುಕೂಲವಾಗುವಂತೆ ಪಾಲಾರ್ ವನ್ಯಜೀವಿ ವಲಯ ವ್ಯಾಪ್ತಿಗೆ ಬರುವ ತುಳಸಿಕೆರೆ ಪರಿಸರ ಅಭಿವೃದ್ಧಿ ಸಮಿತಿಯವತಿಯಿಂದ 2018-19 ರಲ್ಲಿ ಸ್ಥಳೀಯ ವಾಹನಗಳಲ್ಲಿ ಭಕ್ತಾದಿಗಳನ್ನು ಇಂಡಿಗನತ್ತ ಗ್ರಾಮಕ್ಕೆ ಹೋಗುವವರೆಗೂ ಪ್ರವೇಶ ಶುಲ್ಕ ಸಂಗ್ರಹಿಸಿ ಬಿಡಲಾಗುತಿತ್ತು.

ನಂತರ ಅಲ್ಲಿಂದ ಭಕ್ತಾಧಿಗಳು ಕಾಲ್ನಡಿಗೆಯಲ್ಲಿ ಹೋಗಿ ಸ್ವಾಮಿಯ ದರ್ಶನ ಪಡೆದು ವಾಪಸ್ ಆಗುತ್ತಿದ್ದರು. ಆದರೆ, ಅರಣ್ಯ ಹಾಗೂ ವನ್ಯಜೀವಿಗಳ ಹಿತದೃಷ್ಟಿಯಿಂದ ಕಳೆದ ವರ್ಷ ಸರ್ಕಾರ ಚಾರಣಕ್ಕೆ ತೆರಳದಂತೆ ತಾತ್ಕಾಲಿಕ ತಡೆವೊಡ್ಡಿತ್ತು. ಪ್ರಸ್ತುತ ಆನ್ಲೈನ್ ಬುಕ್ಕಿಂಗ್ ನಂತರವಷ್ಟೆ ನಾಗಮಲೆ ಕ್ಷೇತ್ರಕ್ಕೆ ತೆರಳಲು ಭಕ್ತರಿಗೆ ಅವಕಾಶ ಕಲ್ಪಿಸಿದೆ. ಹಳೆಯೂರು ಗೇಟ್ನಿಂದ ಚಾರಣ ಪ್ರಾರಂಭ:ಭಕ್ತಾದಿಗಳು 24 ಗಂಟೆಗಳಲ್ಲಿ ಸಹ ಸ್ವಾಮಿಯ ದರ್ಶನ ಪಡೆದು ರಾತ್ರಿ, ವೇಳೆಯಲ್ಲಿ ವಾಪಸ್ ಆಗುತ್ತಿದ್ದ ಸಂದರ್ಭದಲ್ಲಿ ಕಾಡು ಪ್ರಾಣಿಗಳು ದಾಳಿ ನಡೆಸಿರುವ ಘಟನೆಗಳು ಹಿಂದೆ ನಡೆದಿರುವುದರಿಂದ ಹಾಗೂ ಪ್ಲಾಸ್ಟಿಕ್ ತ್ಯಾಜ್ಯದ ನಿರ್ವಹಣೆ ಅರಣ್ಯ ಇಲಾಖೆಗೆ ಕಷ್ಟಕರವಾಗಿ ಪರಿಣಮಿಸಿರುತ್ತದೆ. ಈಮಾರ್ಗದಲ್ಲಿ ಭಕ್ತಾದಿಗಳನ್ನು ಕರೆದೊಯ್ಯುವವಾಹನಗಳ ವಿಮೆ, ಫಿಟ್ನೆಸ್ ಇಲ್ಲದೇ ವಾಹನಗಳು ಸಂಚರಿಸುತ್ತಿದ್ದರಿಂದ ನಿಯಮ ಮೀರಿ ಭಕ್ತಾದಿಗಳನ್ನು ವಾಹನಗಳಲ್ಲಿ ಹೆಚ್ಚಾಗಿ ಕರದೊಯ್ಯುತ್ತಿದ್ದರಿಂದದಿ.5.2.2024 ರಂದು ಸದರಿ ವಾಹನಗಳ ಸಂಚಾರ ನಿಲ್ಲಿಸಿ ಅರಣ್ಯ ಸಚಿವರ ಆದೇಶದ ಮೇರೆಗೆ ಆನ್ಲೈನ್ ಮುಖಾಂತರ ನಾಗಮಲೆಗೆ ಭಕ್ತಾದಿಗಳು ತೆರಳಲು ಅವಕಾಶ ಕಲ್ಪಿಸಿಕೊಡಬೇಕೆಂದು ಸೂಚಿಸಿದ ಮೇರೆಗೆ ಭಕ್ತಾದಿಗಳು ನಾಗಮಲೆಗೆ ತೆರಳಲು ತಾತ್ಕಾಲಿಕ ನಿರ್ಬಂಧ ವಿಧಿಸಲಾಗಿತ್ತು.

ಪ್ರಸ್ತುತ ಸರ್ಕಾರದ ಆದೇಶದ ಅನ್ವಯ ಎಲ್ಲಾ ಚಾರಣ ಸ್ಥಳಗಳಿಗೆ ವ್ಯವಸ್ಥಿತ ಮತ್ತು ಚಾರಣಿಕರಿಗೆ ಮತ್ತು ಪರಿಸರ ಸಂರಕ್ಷಣೆಯ ಹಿತ ದೃಷ್ಟಿಯಿಂದ ಅರಣ್ಯ ಇಲಾಖೆ ವೆಬ್ ಸೈಟ್ ನಲ್ಲಿ ಚಾರಣಕ್ಕೆ ಅವಕಾಶ ಕಲ್ಪಿಸಲಾಗಿದ್ದು, ನಾಗಮಲೆ ಪುಣ್ಯ ಹನೂರು ತಾಲೂಕಿನ ಮಹದೇಶ್ವರಬೆಟ್ಟ ಸಮೀಪದ ದಟ್ಟಕಾನನದ ನಡುವೆ ಇರುವ ನಾಗಮಲೆ ಕ್ಷೇತ್ರ. ಕ್ಷೇತ್ರಕ್ಕೆ ಆನ್ಲೈನ್ ಮೂಲಕ ಕಾಯ್ದಿರಿಸಿ ಕಾಲುನಡಿಗೆಯ ಮುಖಾಂತರ ಹೋಗಬಹುದಾಗಿದೆ. ಹಳೆಯೂರು ಗೇಟ್ನಿಂದ ಬುಕ್ಕಿಂಗ್ ವಿವರ: ಕಾಲ್ನಡಿಗೆಯಲ್ಲಿ ಚಾರಣ ಕೈಗೊಳ್ಳುವ ಭಕ್ತಾದಿಗಳು ಕರ್ನಾಟಕ ಅರಣ್ಯ ಇಲಾಖೆಯ ವೆಬ್ಸೈಟ್ www.aranyavihaara.karnataka.gov.inನಲ್ಲಿ ದಿನಾಂಕ ನಮೂದಿಸಿ ಸ್ಲಾಟ್ನ್ನು ಆಯ್ಕೆ ಮಾಡಿಕೊಳ್ಳಬಹುದು. ಭಕ್ತಾದಿಗಳಿಗೆ/ ಚಾರಣಿಕರಿಗೆ ಬೆಳ್ಳಗೆ 6 ರಿಂದ 10 ಗಂಟೆಯ ಸ್ಲಾಟ್ನ್ನು ಬುಕ್ಕಿಂಗ್ ಅವಕಾಶನೀಡಿದ್ದು, ಚಾರಣ ಪಥವು ಒಟ್ಟು ದೂರ 14 ಕಿ.ಮೀ ಗಳಿದ್ದು ಹಳೆಯೂರು ಗೇಟ್ ಪ್ರಾರಂಭಿಸಿ ನಾಗಮಲೆ ತಲುಪಿ ಮತ್ತು ವಾಪಾಸ್ ಹಳೆಯೂರು ಗೇಟ್ನಲ್ಲಿ ಚಾರಣ ಮುಕ್ತಾಯಗೊಳ್ಳುತ್ತದೆ ಚಾರಣಿಕರ ಜೊತೆಗೆ ಅರಣ್ಯ ಇಲಾಖೆಯ ಗೈಡ್ ಒಬ್ಬರು ಜೊತೆ ಇದ್ದು ಮಾಹಿತಿ ಒದಗಿಸಿರುತ್ತಾರೆ. ಅರಣ್ಯ ಇಲಾಖೆಯು ಪ್ರಾಯೋಗಿಕವಾಗಿ ಒಂದು ದಿನಕ್ಕೆ 200 ಜನರಿಗೆ ಚಾರಣಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನು ಹೆಚ್ಚು ಜನರಿಗೆ ಅವಕಾಶ ಮಾಡಿಕೊಡಲಾಗುವುದು ಹಾಗೂ ಚಾರಣಕ್ಕೆ ಬರುವ ಭಕ್ತಾದಿಗಳು ಅರಣ್ಯ ಸಚಿವರ ನಿರ್ದೇಶನದ ಮೇರೆಗೆ ಏಕ ಬಳಕೆಯ ಪ್ಲಾಸ್ಟಿಕ್ನ್ನು ವನ್ಯಧಾಮದಲ್ಲಿ ನಿಷೇಧಿಸಲಾಗಿದ್ದು ಭಕ್ತರು ಅರಣ್ಯ ಇಲಾಖೆಯೊಂದಿಗೆ ಸಹಕರಿಸುವಂತೆ ತಿಳಿಸಿದೆ. ಭಕ್ತಾದಿಗಳಿಗೆ/ಚಾರಣಿಕರಿಗೆ ನೋಂದಾಯಿಸಿಕೊಳ್ಳಲು ಯಾವುದೇ ತೊಡಕು ಉಂಟಾದರೆ ವಲಯ ಅರಣ್ಯಾಧಿಕಾರಿ ಮಹದೇಶ್ವರಬೆಟ್ಟ ವನ್ಯಜೀವಿ ವಲಯ ಕಚೇರಿ, ಮಹದೇಶ್ವರಬೆಟ್ಟ 9481995510, ಉಪ ವಲಯ ಅರಣ್ಯಾಧಿಕಾರಿ ಮಹದೇಶ್ವರ ಬೆಟ್ಟ 9481995527, ವಲಯ ಅರಣ್ಯಾಧಿಕಾರಿ ಪಾಲಾರ್ 9481995512, ಉಪ ವಲಯ ಅರಣ್ಯಾಧಿಕಾರಿ ಪಾಲಾರ್ 9481995531, ಗಸ್ತು ಅರಣ್ಯ ಪಾಲಕರು, ಇಂಡಿಗನತ್ತ ಗಸ್ತು 9481995597 ಸಂಪರ್ಕಿಸುವಂತೆ ಕೋರಲಾಗಿದೆ.

## ಮಳೆಗಾಲದಲ್ಲೂ ಸಹ ರಸ್ತೆ ರಿಪೇರಿ ಮಾಡಲಿ



**ಚಿತ್ರದುರ್ಗ:**ಮಳೆಗಾಲದಲ್ಲೂ ಸಹ ಗುಂಡಿ ಬಿದ್ದ ರಸ್ತೆಗಳನ್ನ ಸಿಮೆಂಟ್ ಹಾಕಿ, ಜಲ್ಲಿಹಾಕಿ ಮುಚ್ಚುವಂತ ತಂತ್ರಜ್ಞಾನ ಬರುವವರೆಗೂ ನಾವು ಈ ಗುಂಡಿಗಳನ್ನು ಸಹಿಸಿಕೊಂಡು ಸಂಚಾರ ಮಾಡಬೇಕಾಗುತ್ತದೆ. ಇಲ್ಲದಿದ್ದರೆ ಅಪಘಾತಗಳಾಗಿ, ಜೀವ ಹಾನಿ ಆಗುವ ಸಂಭವಗಳು ಹೆಚ್ಚಾಗುತ್ತದೆ, ಎಷ್ಟು ಸಾರಿ ಬರೆದರೂ ಸಹ, ಎಷ್ಟು ಸಾರಿ ವಿನಂತಿ ಮಾಡಿಕೊಂಡರು ಸಹ, ಮಳೆಗಾಲದಲ್ಲಿ ರಸ್ತೆ ರಿಪೇರಿ ಮಾಡುವುದು ಅಸಾಧ್ಯವೆಂಬ ಭಾವನೆಯನ್ನು ಅಧಿಕಾರಿಗಳು ಜನರಲ್ಲಿ ಬಿತ್ತಿ ತೋರಿಸುತ್ತಿದ್ದಾರೆ, ಅವುಗಳಿಗೆ ಸಾಕ್ಷಿಯಾಗಿ ಇಂತಹ ರೈಲ್ವೆ ಅಂಡರ್ ಪಾಸ್ ಗಳು ನಮಗೆ ದೊರೆಯುತ್ತವೆ ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ.ಎಚ್ ಕೆ ಎಸ್ ಸ್ವಾಮಿಯವರು ತಿಳಿಸಿದ್ದಾರೆ.

ಚಿತ್ರದುರ್ಗ ಮದೆಹಳ್ಳಿ ರಸ್ತೆ ಬಳಿ ಇರುವ ರೈಲ್ವೆ ಕೆಳ ಸೇತುವೆ ಬಳಿ ಮಳೆಗಾಲದಲ್ಲಿ ನೀರು ತುಂಬಿಕೊಂಡು, ರಸ್ತೆ ಗುಂಡಿ ಬಿದ್ದು, ಅದು ಇನ್ನೂ ಹೆಚ್ಚು ಆಳವಾಗುತ್ತಾ ಬಂದು, ಪೂರ್ಣ ರಸ್ತೆಯನ್ನೇ ಆವರಿಸಿಕೊಳ್ಳುತ್ತಿದ್ದರು ಸಹ, ರೈಲ್ವೆ ಇಲಾಖೆಗೆ ಆ ಗುಂಡಿಯನ್ನು ಮುಚ್ಚಿಸುವಷ್ಟು ತಂತ್ರಜ್ಞಾನವಿಲ್ಲದೆ, ಅದನ್ನ ಹಾಗೆ ಬಿಟ್ಟಿರುವುದರಿಂದ, ಜನರು ಸಂಕಷ್ಟಗಳನ್ನು ಎದುರಿಸುತ್ತಾ ದಿನನಿತ್ಯ ಗಾಡಿ ಚಲಾಯಿಸುತ್ತಿದ್ದಾರೆ, ಹಾಗೂ ಎಷ್ಟೇ ಮನವಿ ಮಾಡಿಕೊಂಡರು ಸಹ ಮಳೆಗಾಲ ಮುಗಿಯುವವರೆಗೂ ಗುಂಡಿ ಮುಚ್ಚುವುದು ಅಸಾಧ್ಯ ಎಂಬ ಸಂದೇಶವನ್ನು ರವಾನಿಸುತ್ತಿದ್ದಾರೆ. ಮಳೆಗಾಲದಲ್ಲಿ ದುರಸ್ತಿ ಪಡಿಸುವಂತ ತಂತ್ರಜ್ಞಾನ ನಮ್ಮಲ್ಲಿ ಇನ್ನು ಬಂದಿಲ್ಲ, ಸಮುದ್ರದಲ್ಲಿ ಬೇಕಿದ್ದರೂ ಮನುಷ್ಯ ಸೇತುವೆ ಕಟ್ಟುತ್ತಾನೆ, ಮನೆ ಕಟ್ಟುತ್ತಾನೆ, ಕೊಳವೆ ಬಾವಿಗಳನ್ನು ನಿರ್ಮಿಸುತ್ತಾನೆ, ಪೆಟ್ರೋಲ್ ತೆಗೆಯುತ್ತಾನೆ, ಆದರೆ ಮಳೆಗಾಲದಲ್ಲಿ ಗುಂಡಿ ಮುಚ್ಚುವಷ್ಟು ತಂತ್ರಜ್ಞಾನ ಮನುಷ್ಯನಿಗೆ ಸಿಕ್ಕಿಲ್ಲ, ಹಾಗಾಗಿ ಮನುಷ್ಯ ಯಾವುದರಲ್ಲೂ ಸಹ ಜಂಬ ಪಡದೆ ಜೀವನ ಮಾಡಬೇಕೆಂಬುದನ್ನ ಈ ಮಳೆಗಾಲ ನಮಗೆ ಪಾಠ ಕಲಿಸುತ್ತಿದೆ ಎಂದರು. ಬಹಳಷ್ಟು ಸಾರಿ ರಸ್ತೆಗಳು ವಾಹನದ ಒತ್ತಡಗಳಿಂದಲೂ ಸಹ ಗುಂಡಿಗಳು ಬೀಳುತ್ತಾ ಹೋಗುತ್ತವೆ, ಈಗ ರಸ್ತೆಗಳ ಮೇಲೆ ಹೆಚ್ಚಿನ ಒತ್ತಡ ಬೀಳುತ್ತಿದೆ, ಮದೆಹಳ್ಳಿ ರಸ್ತೆಯಲ್ಲಿ ಕಡಿಮೆ ಅಂದರೆ 50 ರಿಂದ 100 ಬಸ್ಸುಗಳು, ಲಾರಿಗಳು, ಭಾರಿ ತೂಕದ ಟ್ರಕ್ ಗಳು ಸಂಚರಿಸುತ್ತಿರುವುದರಿಂದ, ಯಾವ ಡಾಂಬರು, ಜಲ್ಲಿ ಸಹ ತಡೆದುಕೊಳ್ಳಲು ಸಾಧ್ಯವಾಗುವುದಿಲ್ಲ. ಮಳೆ ನೀರು ಬಂದಾರಂತೂ, ಇನ್ನು ಬೇಗನೆ ಅವುಗಳು ಹಾಳಾಗುತ್ತವೆ. ಅದನ್ನ ನಾವು ರಿಪೇರಿ ಮಾಡಿಸಿ ಎಂದು ಎಷ್ಟೇ ಬೇಡಿಕೆ ಇಟ್ಟರೂ ಸಹ, ರಿಪೇರಿ ಸಾಧ್ಯವಾಗದಂತಹ ಮಾತಾಗಿದೆ, ಬೇಸಿಗೆ ಕಾಲದವರೆಗೂ ನಾವು ಈ ರೀತಿ ಸಹಿಸಿಕೊಂಡ ಜೀವನ ಮಾಡಬೇಕಾಗಿದೆ ಎಂದರು.

## ವಾಲ್ಮೀಕಿ ಜಯಂತಿ ಆಚರಣೆ



**ಮಾಲೂರು:** ವಾಲ್ಮೀಕಿ ಮಹರ್ಷಿಗಳು ಕವಿಕುಲದ ಗುರುವಾಗಿ, ಹಲವಾರು ಕವಿಗಳಿಗೆ ಮತ್ತು ಸಾಹಿತಿಗಳಿಗೆ ಸ್ಫೂರ್ತಿಯ ಸೆಲೆಯಾಗಿದ್ದಾರೆ ಎಂದು ಗ್ರಾ.ಪಂ. ಮಾಜಿ ಅಧ್ಯಕ್ಷರಾದ ಮುನಿಯಪ್ಪ ರವರು ತಿಳಿಸಿದರು.

ಮಾಲೂರು ತಾಲ್ಲೂಕಿನ ತೊರ್ನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಹಮ್ಮಿಕೊಂಡಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಾಲ್ಮೀಕಿ ಮಹರ್ಷಿಗಳು ಹಿಂದೂ ಧರ್ಮದ ಪ್ರಮುಖ ಗ್ರಂಥಗಳಲ್ಲಿ ಒಂದಾದ ರಾಮಾಯಣ ಮಹಾಕಾವ್ಯವನ್ನು ಬರೆದಿದ್ದು, ಇಂದಿಗೂ ಸಹ ರಾಮಾಯಣ ಮಹಾಕಾವ್ಯವು ಜಗತ್ತಿನಲ್ಲಿ ಸತ್ವಯುತವಾದ ಮತ್ತು ಮೌಲ್ಯಯುತವಾದ ಸಾಹಿತ್ಯ ಸೃಷ್ಟಿಗೆ ಪ್ರೇರಣೆಯಾಗಿದೆ ಅಲ್ಲದೆ ಅವರ ಆದರ್ಶಗಳು ನಮಗೆ ದಾರಿದೀಪಯಿದ್ದಂತೆ ಎಂದರು.

ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಚಂಗಲರಾಯ ಗೌಡ, ಅಧ್ಯಕ್ಷರಾದ ಅಶ್ವತಮ್ಮ ಇಂಜಿನಿಯರ್ ರಾಮಯ್ಯ, ಮಾಜಿ ಅಧ್ಯಕ್ಷ ಮುನಿಯಪ್ಪ, ಉಪಾಧ್ಯಕ್ಷರಾದ ನಾಗರತ್ನಮ್ಮ ವೆಂಕಟರಮಣಪ್ಪ , ಗ್ರಾ.ಪಂ ಸದಸ್ಯರಾದ ಎ.ಮಂಜುನಾಥ್, ಸಿ.ವಿ.ವೆಂಕಟರಮಣಪ್ಪ, ಟಿ.ವಿ.ನಾರಾಯಣಸ್ವಾಮಿ, ಸುಮಿತ್ರಾ ಲೋಕೇಶ್, ತಿಮ್ಮರಾಯಪ್ಪ, ಶ್ರೀಮತಿ ನಾಗರತ್ನಮ್ಮ ಚಿಕ್ಕಣ್ಣ, ಸೊಣ್ಣನಾಯಕನಹಳ್ಳಿ ನಾಗರಾಜಪ್ಪ, ರೂಪ ಚಂದ್ರಶೇಖರ್, ನಾಗರತ್ನ, ಬಿಎಂಎನ್ ನಾಗರಾಜು, ಶಿಲ್ಪ ಸಂತೋಷ್ ಕುಮಾರ್, ಅಮರಾವತಿ ಸಂತೋಷ್ ಕುಮಾರ್, ಸುಜಾತಮ್ಮ ಬೆಳ್ಳೂರಪ್ಪ, ಹೆಡಗಿನಬೆಲೆ ಮುರಳಿ, ವೀರಭದ್ರ, ಬಿಲ್ ಕಲೆಕ್ಟರ್ ಎಂ.ನಾಗರಾಜ, ಟಿ.ಕೆ.ಮುನಿರಾಜ, ಪಾರ್ವತಮ್ಮ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು ಇದ್ದರು.

## ಶೃಂಗೇರಿ ಭಾರತೀತೀರ್ಥ ಸ್ವಾಮೀಜಿ ಸನ್ಯಾಸ ದೀಕ್ಷೆ ಸ್ವೀಕರಿಸಿ 50 ವರ್ಷ

**ಬೆಂಗಳೂರು:** ವೇದಾಂತಭಾರತಿಯ ಮಹಾಸಂರಕ್ಷಕರು, ಶೃಂಗೇರಿ ಜಗದ್ಗುರು ಶಂಕರಾಚಾರ್ಯ ಭಾರತೀತೀರ್ಥ ಮಹಾಸ್ವಾಮೀಜಿ ಅವರು ಸಂನ್ಯಾಸ ದೀಕ್ಷೆ ಸ್ವೀಕರಿಸಿ 50ನೇ ವರ್ಷದ ಸ್ಮರಣಾರ್ಥ ಈ ತಿಂಗಳ 26 ರಂದು ನಗರದ ಅರಮನೆ ಮೈದಾನದಲ್ಲಿ ಕಲ್ಯಾಣವೃಷ್ಟಿಸ್ತವ ಮಹಾಭಿಯಾನ ನಡೆಯಲಿದ್ದು, ಉಪರಾಷ್ಟ್ರಪತಿ ಜಗದೀಪ್ ಧನ್ ಕರ್ ಭಾಗವಹಿಸಲಿದ್ದಾರೆ.

ಉಪರಾಷ್ಟ್ರಪತಿಯವರು ವೇದಾಂತಭಾರತಿಯು ಗ್ರಂಥಮಾಲೆಯ ಪುಸ್ತಕವನ್ನು ಇದೇ ಸಂದರ್ಭದಲ್ಲಿ ಲೋಕಾರ್ಪಣೆ ಮಾಡಲಿದ್ದು, ಉಪಮುಖ್ಯಮಂತ್ರಿ ಮತ್ತು ಕಾರ್ಯಕ್ರಮದ ಸ್ವಾಗತಸಮಿತಿಯ ಅಧ್ಯಕ್ಷರೂ ಆದ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ ಹಾಗೂ ವಿ. ಸೋಮಣ್ಣ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಈ ಕುರಿತು ವೇದಾಂತ ಭಾರತಿ ಸಂಸ್ಥೆಯು ಹೇಳಿಕೆಯೊಂದನ್ನು ಬಿಡುಗಡೆ ಮಾಡಿದ್ದು, ಸುವರ್ಣಭಾರತೀ ಶೀರ್ಷಿಕೆಯಡಿ ಮಿಥಿಕ್ ಸೊಸೈಟಿ ಆಶ್ರಯದಲ್ಲಿ ವೇದಾಂತಭಾರತೀ, ಶಾಂಕರ ತತ್ತ್ವಪ್ರಸಾರಕ್ಕಾಗಿ ರಾಜ್ಯಾದ್ಯಂತ ಕಲ್ಯಾಣವೃಷ್ಟಿ ಅಭಿಯಾನವನ್ನು ಹಮ್ಮಿಕೊಂಡಿದೆ. ಶ್ರೀ ಶಂಕರಭಗವತ್ಪಾದರು ರಚಿಸಿದ ಕಲ್ಯಾಣವೃಷ್ಟಿಸ್ತವ, ಶಿವಪಂಚಾಕ್ಷರ, ನಕ್ಷತ್ರಮಾಲಾಸ್ತೋತ್ರ ಹಾಗೂ ಲಕ್ಷ್ಮೀನೃಸಿಂಹಕರುಣಾರಸಸ್ತೋತ್ರ ಎಂಬ ಮೂರು ಸ್ತೋತ್ರಗಳನ್ನು ಹೇಳಿಕೊಡಲಾಗುತ್ತಿದೆ. ವೇದಾಂತಭಾರತಿಯ ಸಂರಕ್ಷಕರಾದ ಶಂಕರಭಾರತೀ ಸ್ವಾಮೀಜಿಯವರ ಮಾರ್ಗದರ್ಶನದಲ್ಲಿ ಈಗಾಗಲೇ ಬೆಂಗಳೂರಿನ ಸಹಸ್ರಾರು ಪಾರಾಯಣಕೇಂದ್ರಗಳು ಹಾಗೂ ವಿದ್ಯಾಸಂಸ್ಥೆಗಳಲ್ಲಿ ಎರಡು ಲಕ್ಷಕ್ಕೂ ಹೆಚ್ಚಿನ ಜನರಿಗೆ ಈ ಸ್ತೋತ್ರಗಳನ್ನು ಅಭ್ಯಾಸ ಮಾಡಿಸಲಾಗಿದೆ ಎಂದು ತಿಳಿಸಿದೆ.

ಬೆಂಗಳೂರಿನಲ್ಲಿ ಈ ಕಲ್ಯಾಣವೃಷ್ಟಿಸ್ತವ ಮಹಾಭಿಯಾ ಶನಿವಾರ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಬೆಂಗಳೂರಿನ ಅರಮನೆ ಮೈದಾನದ ಕೃಷ್ಣವಿಹಾರದಲ್ಲಿ ಶೃಂಗೇರಿ ಜಗದ್ಗುರು ಶಂಕರಾಚಾರ್ಯ ವಿಧುಶೇಖರಭಾರತೀ ಸ್ವಾಮೀಜಿ ಸಮ್ಮುಖದಲ್ಲಿ ನಡೆಯಲಿದೆ. ಯಡತೊರೆ ಮಠದ ಶಂಕರಭಾರತೀ ಮಹಾಸ್ವಾಮೀಜಿ, ಬ್ರಹ್ಮಾನಂದಭಾರತೀ ಸ್ವಾಮೀಜಿ ಉಪಸ್ಥಿತಿಯಲ್ಲಿ ವಿದ್ಯಾರ್ಥಿಗಳು, ಪೌರ ಕಾರ್ಮಿಕರು, ದಿವ್ಯಾಂಗರು, ಹಿರಿಯ ನಾಗರಿಕರು ಹಾಗೂ ರಾಜ್ಯದ ಬೇರೆ ಬೇರೆ ಊರುಗಳಿಂದ ಆಗಮಿಸುವ ಪಾರಾಯಣಕರ್ತರು ಸೇರಿದಂತೆ ಎಲ್ಲಾ ಜನ ವರ್ಗ ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದೆ ಎಂದು ತಿಳಿಸಿದೆ.

## ಜನರು ಸಮಾಜಮುಖಿಯಾಗಲು ವಾಲ್ಮೀಕಿಯವರ ರಾಮಾಯಣ ನೆರವಾಗಿದೆ : ಸಚಿವ ಕೆ. ವೆಂಕಟೇಶ್

**ಚಾಮರಾಜನಗರ:** ಮಹರ್ಷಿ ವಾಲ್ಮೀಕಿಯವರು ರಚಿಸಿದ ರಾಮಾಯಣ ಮಹಾಕಾವ್ಯವು ಉತ್ಕೃಷ್ಟ ನೈತಿಕ ಮೌಲ್ಯಗಳಿಂದ ಜನರು ಸಮಾಜಮುಖಿಯಾಗಿ ಬೆಳೆಯಲು ನೆರವಾಗಿದೆ ಎಂದು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ತಿಳಿಸಿದರು.

ನಗರದ ವರನಟ ಡಾ. ರಾಜ್‌ಕುಮಾರ್ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆದಿಕವಿ ಮಹರ್ಷಿ ವಾಲ್ಮೀಕಿಯವರ ಜಯಂತಿ ಕಾರ್ಯಕ್ರಮವನ್ನು ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ರಾಮಾಯಣದ ನೈಜ ಪಾತ್ರಗಳು ನಮ್ಮೆಲ್ಲರ ಮೇಲೆ ಪ್ರಭಾವ ಬೀರಿದೆ. ವಾಲ್ಮೀಕಿ ರಾಮಾಯಣ ರಚನೆ ಮೂಲಕ ಎಲ್ಲರೂ ಸುಭಿಕ್ಷತೆಯಿಂದ ಬಾಳಿ ಬದುಕುವ ರಾಮರಾಜ್ಯದ ಕನಸು ಕಂಡಿದ್ದರು. ರಾಮಾಯಣ ಭಾರತಕ್ಕೆ ಮಾತ್ರ ಸೀಮಿತವಾಗಿರದೇ ವಿಶ್ವದ ಅನೇಕ ಭಾಷೆಗಳಿಗೆ ತರ್ಜುಮೆಯಾಗಿ ಜನರಿಗೆ ಉತ್ತಮ ಸಂದೇಶ ನೀಡಿದೆ ಎಂದು ಸಚಿವರು ತಿಳಿಸಿದರು.

ಮಹರ್ಷಿ ವಾಲ್ಮೀಕಿಯವರ ಪ್ರತಿಮೆ ನಿರ್ಮಾಣಕ್ಕೆ ಯಾವ ವಿರೋಧವು ಇಲ್ಲ. ಸರ್ಕಾರದ ಮಂಜೂರಾತಿ ಬೇಕಾಗಿದೆ. ಮುಖ್ಯಮಂತ್ರಿಯವರು ಹಾಗೂ ಸಂಬಂಧಪಟ್ಟ ಇತರೆ ಸಚಿವರೊಂದಿಗೆ ಈಗಾಗಲೇ ಪ್ರತಿಮೆ ನಿರ್ಮಾಣ ಕುರಿತು ಚರ್ಚಿಸಲಾಗಿದ್ದು, ಮುಖ್ಯಮಂತ್ರಿಯವರು ಒಪ್ಪಿಗೆ ನೀಡಿದ್ದಾರೆ. ಮಹರ್ಷಿ ವಾಲ್ಮೀಕಿಯವರ ಪ್ರತಿಮೆ ಜೊತೆಗೆ ಮಹರ್ಷಿ ಭಗೀರಥ ಹಾಗೂ ಭಕ್ತಶ್ರೇಷ್ಠ ಕನಕದಾಸರ ಪುತ್ಥಳಿ ನಿರ್ಮಾಣಕ್ಕೂ ಸರ್ಕಾರ ಒಪ್ಪಿದೆ. ಈ ಸಂಬಂಧ ಪ್ರತಿಮೆಗಳ ನಿರ್ಮಾಣಕ್ಕೆ ಅಗತ್ಯವಾದ ಅಂದಾಜುಪಟ್ಟಿ ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿ ಅನುಮೋದನೆ ಪಡೆಯುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಮೂವರು ಮಹನೀಯರ ಪ್ರತಿಮೆಗಳು ನಿರ್ಮಾಣವಾಗಲಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಹೇಳಿದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಬಂಗಾರವೇ ಬದುಕಲ್ಲ. ಬದುಕು ಬಂಗಾರದಂತಿರಬೇಕೆಂದು ನುಡಿದ ವಾಲ್ಮೀಕಿಯವರ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಮಹರ್ಷಿಗೆ ಎಲ್ಲರೂ ಸಂಸ್ಕಾರಪೂರ್ಣ ಗೌರವ ನೀಡಬೇಕಾಗಿದೆ. ಅನೇಕ ಸಂತರು, ದಾರ್ಶನಿಕರು ಜಗತ್ತನ್ನು ಉತ್ತಮ ದಿಕ್ಕಿನತ್ತ ಕೊಂಡೊಯ್ದಿದ್ದಾರೆ. ಅಂತಹ ಮಹಾಪುರುಷರಲ್ಲಿ ವಾಲ್ಮೀಕಿ ಸಹ ಒಬ್ಬರಾಗಿದ್ದಾರೆ ಎಂದರು.

ಮುಖ್ಯ ಭಾಷಣ ಮಾಡಿದ ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿವೃತ್ತ ಪ್ರಾಂಶುಪಾಲರಾದ ಬಂಗಾರ ನಾಯಕ ಅವರು ಮಹರ್ಷಿ ವಾಲ್ಮೀಕಿಯವರು ಇಡೀ ಜಗತ್ತಿಗೆ ರಾಮಾಯಣ ಮಹಾಕಾವ್ಯವನ್ನು ಕೊಡುಗೆಯಾಗಿ ನೀಡಿದ್ದಾರೆ. ರಾಮಾಯಣದ ಮೂಲ ಅಂಶ ಮನುಷ್ಯನ ನೈತಿಕತೆಯೇ ಆಗಿದೆ. ಇಂದಿನ ಮಕ್ಕಳಿಗೆ, ವಿದ್ಯಾರ್ಥಿಗಳಿಗೆ ವಾಲ್ಮೀಕಿಯವರು ಆದರ್ಶ ಹಾಗೂ ಅನುಕರಣೀಯರಾಗಿದ್ದಾರೆ. ರಾಮಾಯಣವನ್ನು ಅಧ್ಯಯನ ಮಾಡುವ ಮೂಲಕ ಅದರಲ್ಲಿನ ವಾಸ್ತವವನ್ನು ಎಲ್ಲರು ಅರಿಯಬೇಕು ಎಂದರು.

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಎಚ್.ವಿ. ಚಂದ್ರು ಅವರು ಮಾತನಾಡಿ ಒಬ್ಬ ಬೇಟೆಗಾರ, ದರೋಡೆಕೋರ ವ್ಯಕ್ತಿ ರಾಮಾಯಣ ಮಹಾಕಾವ್ಯ ರಚಿಸಿ ಆದಿಕವಿಯಾದ ವ್ಯಕ್ತಿತ್ವ ಮಹರ್ಷಿ ವಾಲ್ಮೀಕಿಯವರದ್ದು. ವ್ಯಕ್ತಿಗೆ ಶಿಕ್ಷಣದಷ್ಟೆ ಸಂಸ್ಕಾರವು ಮುಖ್ಯವಾಗಿದೆ. ಸಮಾಜದಲ್ಲಿ ಎಲ್ಲರೂ ಪ್ರಬುದ್ಧತೆಯಿಂದ ನಡೆದುಕೊಳ್ಳಬೇಕಾಗಿದೆ ಎಂದರು.

ಮೈಸೂರು ಸೇಲ್ಸ್ ಇಂಟರ್‌ನ್ಯಾ?ನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ್ ಅವರ ಅನುಪಸ್ಥಿತಿಯಲ್ಲಿ ಕಳುಹಿಸಲಾಗಿದ್ದ ಸಂದೇಶವನ್ನು ಕಾರ್ಯಕ್ರಮದಲ್ಲಿ ವಾಚನ ಮಾಡಲಾಯಿತು.

ಇದೇ ವೇಳೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಶ್ರೇಣಿ ಪಡೆದ ಸಮುದಾಯದ ವಿದ್ಯಾರ್ಥಿನಿ ಆರ್. ಚೇತನಾ ಅವರನ್ನು ಒಂದು ಲಕ್ಷ ರೂ, ನಗದು ಬಹುಮಾನದೊಂದಿಗೆ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ), ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಚ್.ಎಸ್, ಬಿಂದ್ಯಾ ಕಾರ್ಯುಕ್ರಮದಲ್ಲಿ ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

# ಕನ್ನಡ ಸೇನೆ ಮನವಿ

**ಕೋಲಾರ:** ಪ್ರತಿ ವರ್ಷದಂತೆ ಈ ವರ್ಷವೂ ತಾಲೂಕಿನ ನರಸಾಪುರದಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸುತ್ತಿದ್ದು, ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾದ ಸಿ.ಎಸ್.ವೆಂಕಟೇಶ್ ರವರು ನಿರ್ಮಾಣದ ಚಲನಚಿತ್ರ ಬಡುವ್ರು ಮಕ್ಳು ಬೆಳಿಬೇಕು ಕಂಡ್ರಯ್ಯ ಚಲನಚಿತ್ರದ ಟೀಸರ್ ಅಥವಾ ಆಡಿಯೋ ಲಾಂಚ್ ಅವಕಾಶವನ್ನು ನರಸಾಪುರದ ಕನ್ನಡ ಸೇನೆ ಘಟಕಕ್ಕೆ ನೀಡಬೇಕೆಂದು ಪದಾಧಿಕಾರಿಗಳು ಅವರಿಗೆ ಮನವಿ ಮಾಡಿದರು.

ಪ್ರತಿ ವರ್ಷದಂತೆ ಕನ್ನಡ ಸೇನೆ ಕರ್ನಾಟಕ ಸಂಘದ ವತಿಯಿಂದ ಆಚರಿಸುವ ಈ ಕಾರ್ಯಕ್ರಮದಲ್ಲಿ ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಕೋಲಾರದ ಸಿ.ಎಸ್. ವೆಂಕಟೇಶ್ ರವರು ಸಹಕಾರ ನೀಡುತ್ತಿದ್ದಾರೆ. ಅವರ ಕಾಳಜಿ ಬಗ್ಗೆ ವಿಶೇಷ ಗೌರವ ಹೊಂದಿದ್ದು, ಈ ಬಾರಿಯೂ ಅವರನ್ನು ಭೇಟಿ ಮಾಡಿ ಆಹ್ವಾನ ನೀಡಿರುವುದು ಸರಿ ಅಷ್ಟೇ. ಅವರ ನಿರ್ಮಾಣದ ಚಲನಚಿತ್ರ ಬಡುವ್ರು ಮಕ್ಳು ಬೆಳಿಬೇಕು ಕಂಡ್ರಯ್ಯ ಚಲನಚಿತ್ರದ ಟೀಸರ್ ಅಥವಾ ಆಡಿಯೋ ಬಿಡುಗಡೆ ಅವಕಾಶವನ್ನು ನರಸಾಪುರದ ಕನ್ನಡ ಸೇನೆಯ ಕರ್ನಾಟಕ ಘಟಕಕ್ಕೆ ನೀಡಬೇಕೆಂದು ಮನವಿ ಸಲ್ಲಿಸಿದರು.

ಕನ್ನಡ ಸೇನೆ ತಾಲೂಕು ಅಧ್ಯಕ್ಷರಾದ ಎನ್.ಸಿ. ಶಿವಚಂದ್ರಯ್ಯ, ನರಸಾಪುರ ಹೋಬಳಿ ಅಧ್ಯಕ್ಷರಾದ ಚಲ್ಲಹಳ್ಳಿ ನಾಗರಾಜ್, ಸಲಹಾ ಸಮಿತಿ ಅಧ್ಯಕ್ಷರಾದ ಯಲ್ಲಪ್ಪ, ಸಂಘಟನಾ ಕಾರ್ಯದರ್ಶಿಗಳಾದ ಜಾಲಿ ಶ್ರೀನಿವಾಸ್ ಮತ್ತು ವಿಜಯೇಂದ್ರ, ರವರು ಸಿ.ಎಸ್ ವೆಂಕಟೇಶ್ ರವರಲ್ಲಿ ಮನವಿ ಮಾಡಿದರು.

ಕಾರ್ಯಕ್ರಮ ಒಂದು ಗ್ರಾಮಕ್ಕೆ ಸೀಮಿತವಲ್ಲ ಇಡೀ ಜಿಲ್ಲೆಗೆ ಸೀಮಿತವಾಗಬೇಕು ಎಂದು ಕನ್ನಡ ಸೇನೆ ಕರ್ನಾಟಕ ಸಂಘದ ಪದಾಧಿಕಾರಿಗಳು ಮನವಿ ಮಾಡಿದರು.



# ಮಹರ್ಷಿ ವಾಲ್ಮೀಕಿ ಆದರ್ಶಗಳನ್ನು ಅಳಡಿಸಿಕೊಳ್ಳಲು ಕರೆ

**ರಾಮನಗರ:** ಆದಿಕವಿಮಹರ್ಷಿ ವಾಲ್ಮೀಕಿರವರ ವ್ಯಕ್ತಿತ್ವಹಾಗೂ ಜೀವನದ ಆದರ್ಶಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಸರ್ಕಾರಿ ಪ್ರಥಮದರ್ಜೆಕಾಲೇಜಿನ ಸಹಾಯಕ ಪ್ರಾಧ್ಯಪಕರಾದಡಾ.ಸುಧಾ ಬಿ.ಎಸ್‌ಅವರುಕರೆ ನೀಡಿದರು.

ಅವರು ಅ. 17ರ ಗುರುವಾರ ನಗರದಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಹಾಗೂ ಸಮಾಜಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಶ್ರೀಮಹರ್ಷಿ ವಾಲ್ಮೀಕಿಜಯಂತಿಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಾವಿರಾರುವರ್ಷಗಳ ಹಿಂದೆಇದ್ದಒಬ್ಬ ವ್ಯಕ್ತಿಯಜಯಂತಿಯನ್ನು ನಾವು ಇಂದುಆಚರಿಸಬೇಕಾದರೆ ಆ ವ್ಯಕ್ತಿಯಆದರ್ಶ ಮತ್ತು ಮೌಲ್ಯಗಳ ಬಗ್ಗೆ ತಿಳಿದುಕೊಳ್ಳುವುದು ಅವಶ್ಯಕ.12ನೇ ಶತಮಾನದಲ್ಲಿ ಬಸವಣ್ಣನವರು ಹೇಳಿದ ವಚನಗಳಾಗಿರಬಹುದು ಮತ್ತುಅಂಬೇಡ್ಕರ್‌ಅವರು ಹೇಳಿರುವ ಸಿದ್ಧಾಂತಗಳಾಗಿರಬಹುದುಇವೆಲ್ಲದರ ಮೂಲ ತತ್ವ ಶ್ರೀವಾಲ್ಮೀಕಿಅವರಲ್ಲಿ ಮೂಲವಾಗಿಅಡಕವಾಗಿರುವುದನ್ನು ನಾವು ಕಾಣಬಹುದುಎಂದರು.

ವಾಲ್ಮೀಕಿಯು ಈಗಲೂ ಪ್ರಸ್ತುತವಾಗುತ್ತಿರುವುದುಎರಡು ಕಾರಣಗಳಿಂದ ಒಂದುಅವರ ವ್ಯಕ್ತಿತ್ವದಿಂದ ಮತ್ತೊಂದ ುಅವರುಕಟ್ಟಿಕೊಟ್ಟಂತಹರಾಮಾಯಣ ಮತ್ತುಅದರಲ್ಲಿ ಬರುವರಾಮನ ವ್ಯಕ್ತಿತ್ವದಿಂದ.ನಾವು ಯಾವುದಾದರೂ ವ್ಯಕ್ತಿಯನ್ನುಆರಾಧನೆ ಮಾಡಬೇಕಾದರೆ ಕೇವಲ ವ್ಯಕ್ತಿಯನ್ನಾಗಿ ನಾವು ಆರಾಧಿಸುವುದಿಲ್ಲ. ಬುದ್ಧ, ಬಸವಣ್ಣ,ಗಾಂಧಿ, ಅಂಬೇಡ್ಕರ್‌ಅವರು ವ್ಯಕ್ತಿಯಾಚೆಗೆ ಮೀರುವಂತ ವ್ಯಕ್ತಿಗಳಾಗಿ ಬೆಳೆಯಲು ಕಾರಣಅವರು ಸಾಮಾಜಿಕ ನ್ಯಾಯವನ್ನು ಮತ್ತು ಮೌಲ್ಯಗಳನ್ನು ಎತ್ತಿ ಹಿಡಿಯುವುದರಿಂದ ಪೂಜ್ಯನೀಯರಾಗುತ್ತಾರೆ. ಹಾಗೆಯೇ ವಾಲ್ಮೀಕಿಯು ಸಹ ಅಂತಹ ವ್ಯಕ್ತಿತ್ವಗಳಲ್ಲಿ ಮೊದಲು ಬರುತ್ತಾರೆಎಂದು ಹೇಳಿದರು.

ಇವರು ಕೇವಲ ಆದಿಕವಿಯಾಗಿಅಷ್ಟೇ ಸೀಮಿತವಾಗಿರಲಿಲ್ಲ, ಮಹಾನ್ ಮಾನವತಾವಾದಿ ಹಾಗೂ ಮಹಾ



ಆದರ್ಶಾವಾದಿಯಾಗಿದ್ದರು ಹಾಗಾಗಿಯೇಅವರುಅಂದು ಬರೆದರಾಮಾಯಣವುಇಂದಿಗೂ ಸಹ ಉಳಿದುಕೊಂಡು ಲಕ್ಷಾಂತರ ರೂಪಾಂತರಗಳನ್ನು ಹೊಂದಿದೆಎಂದರು.

ರಾಮನು ಕೇವಲ ಒಂದು ಸಂಸ್ಕೃತಿಯ ನಾಯಕನಾಗದೆಇಡೀಭಾರತದ ಹಾಗೂ ವಿಶ್ವದ ನಾಯಕನಾಗಿ ಉಳಿದುಕೊಂಡಿದ್ದಾನೆ.ನಾವುವಾಲ್ಮೀಕಿ, ರಾಮ, ರಾಮಾಯಣ, ಈ ಮೂರು ವ್ಯಕ್ತಿತ್ವಗಳನ್ನು ವಿಭಿನ್ನರೀತಿಯಲ್ಲಿ ನೋಡಲು ಸಾಧ್ಯವಿಲ್ಲ, ಒಂದಕ್ಕೊಂದು ಬೆಸೆದುಕೊಂಡಿದೆ. ಇವರುಕಟ್ಟಿಕೊಟ್ಟಂತಹ ಪಾತ್ರಗಳು ಹಾಗೂ ಸಾಮಾಜಿಕ ಮೌಲ್ಯಗಳು ಕೇವಲ ಒಂದು ಸಮಾಜಕ್ಕೆ ಸೀಮಿತವಾದುದಲ್ಲ, ಅದು ಹಲವು ಸಮಾಜಗಳ ಹಾಗೂ ವ್ಯಕ್ತಿತ್ವಗಳದ್ದು ಎಂದು ನಾವು ಅರ್ಥ ಮಾಡಿಕೊಳ್ಳಬೇಕು ಎಂದರು. ಸಮಾಜದಲ್ಲಿ ರಾಮನನ್ನುಯಾರು ಬೇಕಾದರೂಆರಾಧಿಸಬಹುದು ಮತ್ತು ಒಪ್ಪಿಕೊಳ್ಳಬಹುದುಅಥವಾ ನಿರಾಕರಿಸಲು ಬಹುದು, ಪೂಜೆ ಮಾಡಬಹುದು.ರಾಮಾಯಣದಲ್ಲಿ ಬರುವ ಪ್ರತಿಯೊಂದು ಪಾತ್ರ, ಸನ್ನಿವೇಶಮತ್ತು ಘಟನೆಗಳು ಒಂದೊಂದುವ್ಯಕ್ತಿತ್ವವ ನ್ನುಕಟ್ಟಿಕೊಡುತ್ತದೆಎಮದು ತಿಳಿಸಿದರು.

ಇದೇ ಸಂದರ್ಭದಲ್ಲಿಅತಿ ಹೆಚ್ಚು ಅಂಕ ಪಡೆದಜಿಲ್ಲೆಯ ವಿದ್ಯಾರ್ಥಿಗಳಿಗೆ ಹಾಗೂ ಸಮುದಾಯದ ಮುಖಂಡರುಗಳಿಗೆ ಸನ್ಮಾನ ಮಾಡಲಾಯಿತು.

# ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ವಾಲ್ಮೀಕಿ ಗುಣಗಾನ



**ಚಾಮರಾಜನಗರ:** ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಏರ್ಪಡಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಕೊಳ್ಳೇಗಾಲ ಶಾಸಕ ಎ.ಆರ್ ,ಕೃಷ್ಣಮೂರ್ತಿ ಅವರುಪುಷ್ಪಾರ್ಚನೆ ನೆರವೇರಿಸಿದರು.

ನಂತರ ಮಾತನಾಡಿದಅವರು ವಿಶ್ವಕ್ಕೆ ರಾಮಾಯಣದಂತಹ ಸಾರ್ವಕಾಲಿಕ ಮೌಲ್ಯವನ್ನೊಳಗೊಂಡ ಮಹಾನ್ ಗ್ರಂಥವನ್ನು ಬರೆದ ದಾರ್ಶನಿಕ ಮಹರ್ಷಿ ವಾಲ್ಮೀಕಿ ಅವರಾಗಿದ್ದು ಅವರ ಜಯಂತಿಯನ್ನು ಆಚರಿಸುತ್ತಿರುವುದು ನಮ್ಮೆಲ್ಲರ ಪುಣ್ಯವಾದ ಕೆಲಸವಾಗಿದೆ,ವಾಲ್ಮೀಕಿ ರಾಮಾಯಣವೆಂದೇ ಪುರಾಣದಿಂದಲೂ ಪ್ರಸಿದ್ಧವಾಗಿರುವ ಈ ಗ್ರಂಥವನ್ನು ಪ್ರತಿಯೊಬ್ಬರು ಓದಿ ಅರ್ಥೈಸಿಕೊಂಡು ಆದರ್ಶಗಳನ್ನು ಪಾಲಿಸಿದ್ದೇ ಆದರೆ ಅದಕ್ಕೆ ಅರ್ಥ ಬರುತ್ತದೆ ಎಂದು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ, ಮರಿಸ್ವಾಮಿ ಮಾತನಾಡಿ ರಾಮಾಯಣದಲ್ಲಿ ಶ್ರೀರಾಮನ ಆದರ್ಶ ಗುಣಗಳು,ಸೀತೆಯ ಗುಣಗಳು ಸಮಾಜಕ್ಕೆ ಮಾದರಿಯಾಗಿದ್ದು,ವಾಲ್ಮೀಕಿ ರಾಮಾಯಣದ ಪ್ರತಿಯೊಂದು ಭಾಗದಲ್ಲೂ ಉತ್ತಮ ಮೌಲ್ಯಗಳನ್ನು ಒಳಗೊಂಡಿದೆ. ಭಾರತದ ಮಹಾನ್ ಆದರ್ಶ ಕಾವ್ಯಗಳಲ್ಲಿ ರಾಮಾಯಣ,ಮಹಾಭಾರತ ಮೊದಲ ಸಾಲಿನಲ್ಲಿ ನಿಲ್ಲುತ್ತದೆ ಎಂದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ,ಕೆ ರವಿಕುಮಾರ್, ಚೂಡಾ ಅಧ್ಯಕ್ಷ ಮಹಮದ್ ಅಸ್ಗರ್ ಮುನ್ನಾ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್ ,ಆರ್,ಮಹದೇವ, ಎಚ್,ವಿ ಚಂದ್ರು, ನಗರಸಭಸದಸ್ಯೆ ಚಿನ್ನಮ್ಮ,ಕಾಗಲವಾಡಿಚಂದ್ರು,ಮಹೇಶ್‌ಕುದರ್,ನಸ್ರುಲ್ ಖಾನ್, ಆಯಿಭ್‌ಖಾನ್, ಎ,ಪಿ,ಎಂ,ಸಿ ಅಧ್ಯಕ್ಷ ಸೂಮೇಶ್, ಜಿ,ಪಂ ಮಾಜಿ ಸದಸ್ಯ ರಮೇಶ್, ಅಸಂಘಟಿತ ಕಾಮೀಕ ಸಂಘದ ಅಧ್ಯಕ್ಷ ಸ್ವಾಮಿ, ಮಹದೇವಯ್ಯ, ಪುಟ್ಟಸ್ವಾಮಿ, ಮರಿಯಾಲದ ಹುಂಡಿ ಕುಮಾರ್,ವಕೀಲ ಪೃಥಿ, ಪರಿಶಿಷ್ಟತಾ,ಪಂ ಮಾಜಿ ಸದಸ್ಯ ಮಹಾಲಿಂಗು, ರಾಜು, ಪರಿಶಿಷ್ಟಜಾತಿ ವಿಭಾದ ಅಧ್ಯಕ್ಷಸೋಮಣ್ಣ,ಹೆಚ್,ಎಂ ,ಮಹದೇವಶೆಟ್ಟಿ,ಚಂಗುಮಣಿ,ರಾಜೇಶ್ ಎನ್,ಆರ್, ಪುರುಷೋತ್ತಮ್, ಮೋಹನ್‌ನಗು,ಮರಿಸ್ವಾಮಿ, ಉತ್ತವಳ್ಳಿ ಕಾಂತರಾಜು, ಪ್ರಶಾಂತ್, ಪಟೇಲ್ ಮಹದೇವಸ್ವಾಮಿ, ರವಿಗೌಡ, ಶಕುಂತಲಾ, ಗಣೇಶ್, ಪ್ರಸಾದ್, ನಾಗಬಸವಣ್ಣ, ಇದ್ದರು

## ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ

# ಪರಿಶಿಷ್ಟವರ್ಗದ ವಸತಿ ಶಾಲೆ, ರಾಯಚೂರು ವಿಶ್ವವಿದ್ಯಾಲಯಕ್ಕೆ ವಾಲ್ಮೀಕಿ ಹೆಸರು

**ಬೆಂಗಳೂರು:** ಎಲ್ಲಾ ಪರಿಶಿಷ್ಟ ವರ್ಗದ ವಸತಿ ಶಾಲೆಗಳಿಗೆ ಮತ್ತು ರಾಯಚೂರು ವಿಶ್ವ ವಿದ್ಯಾಲಯಕ್ಕೆ ಮಹರ್ಷಿ ವಾಲ್ಮೀಕಿ ಹೆಸರು ಇಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ ಮಾಡಿದರು.

ಇಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪ್ರಯುಕ್ತ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಹಾಗೂ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಅರ್ಪಿಸಿ ಮಾತನಾಡಿದ ಮುಖ್ಯಮಂತ್ರಿಗಳು, ತಳಸಮುದಾಯದಲ್ಲಿ ಹುಟ್ಟಿ ಸಂಸ್ಕೃತ ಕಲಿತು 24 ಸಾವಿರ ಶ್ಲೋಕಗಳು, 500 ಸಂಕಲನಗಳು ಹಾಗೂ 7 ಕಾವ್ಯಗಳನ್ನೊಳಗೊಂಡ ಜಗತ್ಪಸಿದ್ಧ ರಾಮಾಯಣ ಮಹಾಕಾವ್ಯ ಬರೆದ ಶ್ರೀ ಮಹರ್ಷಿ ವಾಲ್ಮೀಕಿ ಅವರು ವಿಶ್ವಮಾನವರಾಗಿದ್ದರು. ಇದು ಹೆಮ್ಮೆಯ ಮತ್ತು ಮಾದರಿ ಸಂಗತಿ ಎಂದರು.

ತಳ ಸಮುದಾಯಗಳು, ಶೂದ್ರರು ಶಿಕ್ಷಣ, ಸಂಸ್ಕೃತ ಕಲಿಯುವುದು ನಿಷಿದ್ಧವಾಗಿತ್ತು. ಇಂತಹ ಸಮಯದಲ್ಲಿ ರಾಮಾಯಣ ಬರೆದವರು ಮಹರ್ಷಿ ವಾಲ್ಮೀಕಿ ಸಮುದಾಯದವರು. ಶಾಕುಂತಲಾ ನಾಟಕ ಬರೆದ ಕಾಳಿದಾಸ ಕುರುಬ ಸಮುದಾಯದವರು. ಮಹಾಭಾರತ ಬರೆದ ವ್ಯಾಸರು ಬೆಸ್ತ ಸಮುದಾಯದವರು ಎಂದರು.

ಎಸ್‌ಸಿಎಸ್‌ಪಿ/ಟಿಎಸ್‌ಪಿ ಮೂಲಕ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ ಶೇ.24.1 ರಷ್ಟು ಹಣವನ್ನು ಮೀಸಲಿಡಬೇಕು ಎಂದು ಮೊಟ್ಟ ಮೊದಲ ಬಾರಿಗೆ ರಾಜ್ಯದಲ್ಲಿ ಕಾನೂನು ತಂದಿದ್ದು ನಮ್ಮ ಸರ್ಕಾರ. ಅಲ್ಲದೆ ಸಮುದಾಯಗಳಿಗೆ ವಸತಿ ಶಾಲೆಗಳನ್ನು ಮೊದಲು ಆರಂಭಿಸಿದ್ದು ನಮ್ಮ ಸರ್ಕಾರ. ಪ್ರತೀ ಹೋಬಳಿಗೂ ಒಂದು ವಸತಿ ಶಾಲೆಯನ್ನು ಮುಂದಿನ ವರ್ಷದೊಳಗೆ ಮಾಡಲಾಗುವುದು ಎಂದರು.

ಬರೀ ಬಾಯಿ ಮಾತಲ್ಲಿ ಸಮಾನತೆ ಬರಲ್ಲ. ಆರ್ಥಿಕ ಕಾರ್ಯಕ್ರಮಗಳನ್ನು ಜಾರಿಗೆ ತರಬೇಕು. ಆರ್ಥಿಕ ಮತ್ತು ಸಾಮಾಜಿಕ ಅಸಮಾನತೆ ಹೋಗದ ಹೊರತು ಸಮಾನತೆ ಬರುವುದಿಲ್ಲ ಎನ್ನುವ ಎಚ್ಚರಿಕೆಯನ್ನು ಬಾಬಾ ಸಾಹೇಬ್ ಅಂಬೇಡ್ಕರ್ ನೀಡಿದ್ದಾರೆ.

ನಮ್ಮ ಸರ್ಕಾರ ಎಲ್ಲಾ ಧರ್ಮ, ಎಲ್ಲಾ ಜಾತಿಯ ಬಡವರಿಗೆ ಆರ್ಥಿಕ ಶಕ್ತಿ ಕೊಡಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಬಡ್ತಿಯಲ್ಲಿ ಮೀಸಲಾತಿಯನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿಯಿತು. ಅದನ್ನು ಮೊದಲಿಗೆ ಜಾರಿಗೆ ತಂದಿದ್ದು ಹಾಗೂ ಗುತ್ತಿಗೆಯಲ್ಲಿ ಮೀಸಲಾತಿ ಮೊದಲಿಗೆ ತಂದಿದ್ದು ನಮ್ಮ ಸರ್ಕಾರ. ಇದನ್ನು ನಾಡಿನ ಜನತೆ ಅರ್ಥಮಾಡಿಕೊಳ್ಳಬೇಕು ಎಂದರು.

ನಾನು ಹೇಳಿದ್ದೀನಿ ಎನ್ನುವ ಕಾರಣಕ್ಕೆ ನೀವು ಇದನ್ನೆಲ್ಲಾ ನಂಬಬೇಡಿ. ಸತ್ಯ, ಸುಳ್ಳನ್ನು ಪರಾಮರ್ಷಿಸಿ, ವಿವೇಚಿಸಿ, ಸತ್ಯವನ್ನು ಧೈರ್ಯವಾಗಿ-ಬಹಿರಂಗವಾಗಿ ಮಾತಾಡುವ ಧೈರ್ಯವನ್ನು ಬಡವರು, ದಲಿತ, ಹಿಂದುಳಿದ, ಅಲ್ಪಸಂಖ್ಯಾತ ಸಮುದಾಯಗಳು ಬೆಳೆಸಿಕೊಳ್ಳುವುದರ ಜೊತೆಗೆ ಮಹರ್ಷಿಗಳ ತತ್ವ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಹರ್ಷಿ ವಾಲ್ಮೀಕಿ ಅವರಿಗೆ ನಾವು-ನೀವು ಸಲ್ಲಿಸುವ ಗೌರವ ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ, 2024 ನೇ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪುರಸ್ಕೃತರಾದ ಬೆಂಗಳೂರು ವಿಭಾಗದ ಕಿಲಾರಿ ಜೋಗಯ್ಯ, ಬಿನ್. ಕಿಲಾರಿ ಬೋರಯ್ಯ. ಮೈಸೂರು ವಿಭಾಗದ ಡಾ|| ರತ್ನಮ್ಮ ಎಸ್. ಬೆಳಗಾವಿ ವಿಭಾಗದ ರಾಜಶೇಖರ ತಳವಾರ. ಬೆಂಗಳೂರು ಕೇಂದ್ರದ ಕೆ.ಎಸ್. ಮೃತ್ಯುಂಜಯ. ಕಲಬುರಗಿ ವಿಭಾಗದ ಶ್ರೀಮತಿ ರತ್ನಮ್ಮ ಬಿ. ಸೋಗಿ ಇವರುಗಳಿಗೆ ಮುಖ್ಯಮಂತ್ರಿಗಳು ತಲಾ 20 ಗ್ರಾಂ ಬಂಗಾರದ ಪದಕ ಹಾಗೂ ರೂ. 5 ಲಕ್ಷ ನಗದನ್ನು ನೀಡಿ ಸನ್ಮಾನಿಸಿದರು.

ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಮಾತನಾಡಿ, ವಾಲ್ಮೀಕಿ ಸಮುದಾಯವರು ಶೈಕ್ಷಣಿಕವಾಗಿ, ಆರ್ಥಿಕವಾಗಿ ಸದೃಢರಾಗಲು ಸರ್ಕಾರ ಹಲವು ಕಾರ್ಯಕ್ರಮಗಳನ್ನು ರೂಪಿಸಿದ್ದು, ಸಮಾಜದ ಮುಖ್ಯವಾಹಿನಿಗೆ ತರಲು ವಿಶೇಷ ಕೊಡುಗೆ ನೀಡಿದೆ. ಸರ್ಕಾರ ಜಾರಿಗೊಳಿಸಿರುವ ಕಾರ್ಯಕ್ರಮಗಳನ್ನು ಸಮುದಾಯದವರು ಸದುಪಯೋಗ ಪಡೆದುಕೊಂಡು ಶೈಕ್ಷಣಿಕವಾಗಿ ಮುಂದುವರೆಯಬೇಕು. ಸರ್ಕಾರವು ಈ ನಿಟ್ಟಿನಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದರು.

ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಅವರು ಮಾತನಾಡಿ ಬಡವರು, ಹಿಂದುಳಿದವರು ಎಲ್ಲರೂ ವಿದ್ಯಾವಂತರಾಗಿ, ಸಂಘಟಿತರಾಬೇಕು. ಮಕ್ಕಳಿಗೆ ಉತ್ತಮವಾದ ವಿದ್ಯಾಭ್ಯಾಸ ನೀಡುವುದರ ಮೂಲಕ ಸಮಾಜದ ಆಸ್ತಿಯನ್ನಾಗಿ ಮಾಡಬೇಕು. ರಾಜಕೀಯವಾಗಿ ಅಧಿಕಾರಕ್ಕೆ ಬರಬೇಕು. ವಸತಿ ಶಾಲೆಗಳನ್ನು ಹೆಚ್ಚಿಸಲಾಗಿದ್ದು, ವಸತಿ ಶಾಲೆಯಲ್ಲಿ ಪ್ರವೇಶ ಸಂಖ್ಯೆಗಳು ಹೆಚ್ಚಾಗಿವೆ ಎಂದರು.

ಸಚಿವರಾದ ಕೆ.ಹೆಚ್. ಮುನಿಯಪ್ಪ ಮಾತನಾಡಿ, ಇಡೀ ರಾಜ್ಯದ ಉದ್ದಕ್ಕೂ ಪ್ರತಿ ಹೋಬಳಿಗೂ ವಸತಿ ಶಾಲೆಗಳನ್ನು ನೀಡುವುದರ ಮೂಲಕ ಶೋಷಿತ ವರ್ಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದು ಮುಖ್ಯಮಂತ್ರಿಗಳು ಮುಂದಾಗಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ನಾಲ್ಕು ವಾಲ್ಮೀಕಿ ಆಶ್ರಮ ಶಾಲೆಗಳನ್ನು ತೆರೆಯಲಾಗಿದ್ದು, ನಿಗಮದ ಸರ್ವತೋಮುಖ ಅಭಿವೃದ್ಧಿಗೆ ಹಾಗೂ ಭೂ ಒಡೆತನಕ್ಕೆ ಹೆಚ್ಚಿನ ಆದ್ಯತೆ ನೀಡಿ ಹೆಚ್ಚಿನ ಹಣ ಬಿಡುಗಡೆ ಮಾಡಬೇಕೆಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.



# ಮಹನೀಯರ ಸ್ಮರಣಾರ್ಥ 'ಕಥಾಕೀರ್ತನ ವೈಭವ'

**ಬೆಂಗಳೂರು:** ನಾಡೋಜ ಸಂತ ಭದ್ರಗಿರಿ ಅಚ್ಯುತದಾಸರ ಹೆಸರು, ಕಥಾಕೀರ್ತನ ಕ್ಷೇತ್ರದಲ್ಲಿ ಅಜರಾಮರವಾಗಿದೆ. ತಮ್ಮ ಸಂಪೂರ್ಣ ಜೀವನವನ್ನು ಕಥಾಕೀರ್ತನಕ್ಕಾಗಿ ಮುಡಿಪಾಗಿಟ್ಟ ಮೇರು ಕಲಾವಿದರು ಅವರಾಗಿದ್ದರು. ಅವರ ಕಥೆಗಳಿಂದ ಸಾವಿರಾರು ಜನರನ್ನು ಪ್ರಭಾವಿತರನ್ನಾಗಿಸಿದ್ದರು. ಕಥಾಕೀರ್ತನ ಕಲೆಯ ಏಳಿಗೆಗೆ ದುಡಿದ ಮಹಾಚೇತನ ಅಚ್ಯುತದಾಸರು. ಅವರ ಹಾಗೂ ಅವರ ಶಿಷ್ಯರೂ, ಹರಿಕಥಾ ಗುರುಗಳೂ, ವಿದ್ವಾಂಸರೂ ಆಗಿರುವ ಕೀರ್ತನಾಚಾರ್ಯ ಲಕ್ಷ್ಮಣದಾಸ ವೇಲಣಕರ್ ಸಂಸ್ಮರಣೆಯಲ್ಲಿ ಷಡ್ಜ ಕಲಾ ಕೇಂದ್ರ ಟ್ರಸ್ಟ್ ಬೆಂಗಳೂರು, ಕಥಾ ಕೀರ್ತನ ವೈಭವ ಎಂಬ ಕಾರ್ಯಕ್ರಮ ನಡೆಸುತ್ತಾ ಬಂದಿದೆ.

ಈ ಬಾರಿಯ ಕಥಾ ಕೀರ್ತನ ವೈಭವ ಕಾರ್ಯಕ್ರಮವನ್ನು ಇದೇ ಅಕ್ಟೋಬರ್ 20, ಭಾನುವಾರದಂದು ಆಯೋಜಿಸಲಾಗಿದ್ದು, ಈ ಸಂದರ್ಭದಲ್ಲಿ ಹರಿಕಥಾ ಕ್ಷೇತ್ರಕ್ಕೆ ಅತ್ಯಮುಲ್ಯ ಕೊಡುಗೆ ನೀಡಿದಂತಹ ಮಹನೀಯರಿಗೆ ಸಂತ ಭದ್ರಗಿರಿ ಅಚ್ಯುತದಾಸರ ಸ್ಮರಣೆಯಲ್ಲಿ 'ಕೀರ್ತನ ಸೇವಾ ರತ್ನ' ಹಾಗೂ ಉದಯೋನ್ಮುಖ, ಪ್ರತಿಭಾವಂತ ಯುವ ಕೀರ್ತನಕಾರರನ್ನು ಗುರುತಿಸಿ ಪ್ರೋತ್ಸಾಹಿಸುವ ಧ್ಯೇಯದೊಂದಿಗೆ ಕೀರ್ತನಾಚಾರ್ಯ ಲಕ್ಷ್ಮಣದಾಸ ವೇಲಣಕರ್ ಅವರ ಸ್ಮರಣೆಯಲ್ಲಿ 'ಯುವ ಪುರಸ್ಕಾರ' ಪ್ರದಾನ ಮಾಡಲಾಗುತ್ತಿದೆ.

ಈ ಬಾರಿಯ 'ಕೀರ್ತನ ಸೇವಾ ರತ್ನ' ಪುರಸ್ಕಾರವನ್ನು ವೃತ್ತಿಯಲ್ಲಿ ವಕೀಲರಾಗಿ ಪ್ರವೃತ್ತಿಯಲ್ಲಿ ಕೀರ್ತನಕಾರರಾಗಿ ಕಳೆದ 50 ವರ್ಷಗಳಿಂದ ಹರಿಕಥಾ ಕಲೆಯ ಪ್ರಚಾರ ಪ್ರಸಾರದಲ್ಲಿ ತೊಡಗಿರುವ ಮಂಗಳೂರಿನ ವಿದ್ವಾನ್ ಶ್ರೀ ಕೆ.ಮಹಾಬಲ ಶೆಟ್ಟಿ ಅವರಿಗೆ ನೀಡುತ್ತಿದ್ದೇವೆ.

ಇದೇ ವೇಳೆ ಯುವ ಹರಿಕಥಾ ಕಲಾವಿದೆ ಕುಮಾರಿ ಶ್ರದ್ಧಾ ಗುರುದಾಸ ಅವರಿಗೆ 'ಶ್ರೀ ಲಕ್ಷ್ಮಣದಾಸ ವೇಲಣಕರ್ ಸ್ಮರಣಾರ್ಥ ಯುವ ಪುರಸ್ಕಾರವನ್ನು ಪ್ರದಾನ ಮಾಡಲಾಗುವುದು.

ಪ್ರಶಸ್ತಿ ಪ್ರದಾನ ಕಾರ್ಯಕ್ರಮವು 2024, ಅಕ್ಟೋಬರ್ 20 ನೇ ತಾರೀಖು ಭಾನುವಾರ ಸಂಜೆ 4:00 ಗಂಟೆಯಿಂದ ಬೆಂಗಳೂರಿನ ಭಾರತೀಯ ವಿದ್ಯಾ ಭವನದ ಆವರಣದಲ್ಲಿರುವ ಕೆಆರ್‌ಜಿ ಸಭಾಂಗಣದಲ್ಲಿ ಬೆಂಗಳೂರು ರಾಮಕೃಷ್ಣ ಮಠದ ಪೂಜ್ಯ ಸ್ವಾಮಿ ಸೌಖ್ಯಾನಂದಜೀ ಅವರ ದಿವ್ಯ ಉಪಸ್ಥಿತಿಯಲ್ಲಿ ನಡೆಯಲಿದೆ.

ನಂತರ ಮಂಗಳೂರಿನ ಹರಿಕಥಾ ವಿದ್ವಾಂಸರಾದ ಡಾ.ಎಸ್ .ಪಿ.ಗುರುದಾಸ್ ಅವರು ಹರಿಕಥಾ ಕಾರ್ಯಕ್ರಮ ನಡೆಸಿಕೊಡಲಿದ್ದು, ಅವರಿಗೆ ತಬಲದಲ್ಲಿ ಶ್ರೀ ಯೋಗೀಶ್ ಭಟ್ ಮತ್ತು ಶ್ರೀ ಅಭಯ್ ದಾಮ್ಲೆ ಹಾಗೂ ಹಾರ್ಮೋನಿಯಂನಲ್ಲಿ ಶ್ರೀ ಸತ್ಯಜೀತ್ ಸಂಜು ಸಾಥ್ ನೀಡಲಿದ್ದಾರೆ. ಸಭಾ ಕಾರ್ಯಕ್ರಮದ ಮೊದಲು ಶ್ರೀಮತಿ ಪಾವನಿ ಭಾರದ್ವಾಜ್ ಅವರು ದೇವರನಾಮಗಳನ್ನು ಪ್ರಸ್ತುತಪಡಿಸಲಿದ್ದು, ಅವರಿಗೆ ತಬಲದಲ್ಲಿ ಶ್ರೀ ಯೋಗೀಶ್ ಭಟ್ ಹಾಗೂ ಹಾರ್ಮೋನಿಯಂನಲ್ಲಿ ಶ್ರೀ ಸತ್ಯಜೀತ್ ಸಂಜು ಸಾಥ್ ನೀಡಲಿದ್ದಾರೆ.

# ಜಂಬೂಸವಾರಿ ಮೆರವಣಿಗೆಯಲ್ಲಿ ಉತ್ತಮ ಪ್ರದರ್ಶನ ನೀಡಿದ ಕಲಾತಂಡಗಳಿಗೆ ಬಹುಮಾನ

**ಮೈಸೂರು:** 2024 ನೇ ಸಾಲಿನ ದಸರಾ ಮಹೋತ್ಸವದ ಅಂಗವಾಗಿ ಅಕ್ಟೋಬರ್ 12 ರಂದು ನಡೆದ ವಿಶ್ವವಿಖ್ಯಾತ ಜಂಬೂಸವಾರಿ ಮೆರವಣಿಗೆಯಲ್ಲಿ ಭಾಗವಹಿಸಿದ ತಂಡಗಳ ಪೈಕಿ ಕೆಳಕಂಡ ಕಲಾತಂಡಗಳು ಉತ್ತಮ ಪ್ರದರ್ಶನ ನೀಡಿರುವುದಾಗಿ ತೀರ್ಪುಗಾರರು ಆಯ್ಕೆ ಮಾಡಿರುತ್ತಾರೆ.



ಪ್ರಥಮ ಬಹುಮಾನವನ್ನು ಸತ್ತಿಗೆ ಕುಣಿತ ಕಲಾ ಪ್ರಾಕಾರದಲ್ಲಿ ವಿಜಯಪುರ ಜಿಲ್ಲೆಯ ತಿಕೋಟಾ ತಾಲ್ಲೂಕಿನ ಸಿದ್ದಾಪುರದ ಸಂಜೀವಿನಿ ಶಿ. ಕೋತ, ಶ್ರೀ ರೇವಣ ಸಿದ್ದೇಶ್ವರ ಯುವಕ ಕಲಾಸಂಘ (ಕಾರಿಕೊಳ್ಳ), ದ್ವಿತೀಯ ಬಹುಮಾನವನ್ನು ಲಂಬಾಣಿ ಕಲಾ ಪ್ರಾಕಾರದಲ್ಲಿ ಯಾದಗಿರಿ ಜಿಲ್ಲೆಯ ವಿಶ್ವಾಸಪುರ ತಾಂಡಾದ ಲಂಬಾಣಿ ನೃತ್ಯ ಕಲಾತಂಡದ ಮನೋಹರ ಖೇಮು ಪವಾರ, ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಕ್ಯಾತ ಘಟ್ಟದ ಪೂಜಾಕುಣಿತ ಕಲಾವಿದರಾದ ಕೀರ್ತಿನೆ ಮತ್ತು ಪ್ರಮೋದಿನಿ ಮತ್ತು ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಚಿಕ್ಕರಸಿನಕೆರೆಯ ಶ್ರೀ ಕಾಲಭೈರವೇಶ್ವರ ಯುವಕರ ಸಂಘದ ಚಿಕ್ಕಬೋರಯ್ಯ ಹಾಗೂ ತೃತಿಯ ಬಹುಮಾನವನ್ನು ಪುರವಂತಿಕೆ ಕಲಾ ಪ್ರಾಕಾರದಲ್ಲಿ ಹಾವೇರಿ ಜಿಲ್ಲೆಯ ಬಂಕಾಪುರದ ಶ್ರೀ ವೀರಭದ್ರೇಶ್ವರ ಪುರವಂತಿಕೆ ಕಲಾತಂಡದ ಓಂಪ್ರಕಾಶ್ ಅಂಗಡಿ ಮತ್ತು ಗಾರುಡಿ ಗೊಂಬೆ ಕಲಾ ಪ್ರಾಕಾರದಲ್ಲಿ ಕೋಲಾರ ಜಿಲ್ಲೆಯ ಸುಳದೇನಹಳ್ಳಿಯ ಮಾರುತಿ ಕಲಾವಿದರ ಸಂಘದ ಮುನಿ ರಾಜಪ್ಪ ಅವರು ಪಡೆದಿದ್ದು, ಎಲ್ಲಾ ತಂಡಗಳಿಗೂ ದಸರಾ ಉಪಸಮಿತಿ ವತಿಯಿಂದ ಸೂಕ್ತ ಬಹುಮಾನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ ಎಂದು ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಕೋಲಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಲು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಗಣ್ಯ ವ್ಯಕ್ತಿಗಳಿಂದ ಅರ್ಜಿಗಳನ್ನು ಸಲ್ಲಿಸಬಹುದು. ಸದರಿಯವರು ಅರ್ಜಿಗಳನ್ನು ನವೆಂಬರ್ 25 ರೊಳಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಯ ಸಮಯದಲ್ಲಿ ನೀಡಬಹುದುಯೆಂದು ಇಲಾಖೆಯ ಸಹಾಕಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕ ಇಲಾಖೆ ಕಾಯ್ದೆಗಳ ಬಗ್ಗೆ ಕಾರ್ಯಾಗಾರ

**ಕೋಲಾರ:** ತಾಲ್ಲೂಕು ಕಾನೂನು ಸೇವಾ ಸಮಿತಿ, ತಾಲ್ಲೂಕು ವಕೀಲರ ಸಂಘ ಹಾಗೂ ಕಾರ್ಮಿಕ ಇಲಾಖೆ, ತಾಲ್ಲೂಕು ಪಂಚಾಯತಿ ಮತ್ತು ತಾಲ್ಲೂಕು ಆಡಳಿತ, ಮುಳಬಾಗಿಲು ಇವರ ಸಹಯೋಗದೊಂದಿಗೆ ಅಕ್ಟೋಬರ್ 16 ರಂದು ಅಪರಾಹ್ನ 2-30ಕ್ಕೆ ಸರ್ಕಾರಿ ಪದವಿಪೂರ್ವ ಬಾಲಕಿಯರ ಶಾಲೆಯ ಆವರಣದಲ್ಲಿರುವ ಗುರುಭವನದಲ್ಲಿ ಉದ್ಯೋಗದಾತರು, ಅಸಂಘಟಿತ ಕಾರ್ಮಿಕರು ಹಾಗೂ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳಿಗೆ ಕಾರ್ಮಿಕ ಇಲಾಖೆಯ ಯೋಜನೆಗಳು ಹಾಗೂ ಕಾಯ್ದೆಗಳ ಬಗ್ಗೆ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆಂದು ಮುಳಬಾಗಿಲು ವೃತ್ತದ ಕಾರ್ಮಿಕ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 20ರಂದು ಸಾಧಕೋತ್ತಮರಿಗೆ ಶ್ರೀಮಧ್ವ ವಿಜಯ ಪ್ರಶಸ್ತಿ ಪ್ರದಾನ

**ಬೆಂಗಳೂರು:** ಶ್ರೀಮಧ್ವ ಜಯಂತಿ ಅಂಗವಾಗಿ ವ್ಯಾಸ-ದಾಸ ಸಾಹಿತ್ಯದಲ್ಲಿ ಅಪ್ರತಿಮ ಸೇವೆ ಸಲ್ಲಿಸುತ್ತಿರುವ ವಿದ್ವನ್ಮಣಿಗಳಿಗೆ ಬೆಂಗಳೂರು ಚಾಮರಾಜಪೇಟೆ ಶ್ರೀಮನ್ಮಾಧ್ವ ಸಂಘದಲ್ಲಿ 'ಶ್ರೀಮಧ್ವ ವಿಜಯ' ಪ್ರಶಸ್ತಿ ಪ್ರದಾನ ಸಮಾರಂಭವನ್ನು ಅ.20ರಂದು ಸಂಜೆ 6.00ಗಂಟೆಗೆ ವಿಶ್ವ ಮಧ್ವಮತ ವೆಲ್‌ಫೇರ್ ಅಸೋಸಿಯೇಷನ್ ಆಯೋಜಿಸಿದೆ. ಕನ್ನಡನಾಡಿನ ಹೆಮ್ಮೆಯ ಆಚಾರ್ಯರಾದ ವಿಶ್ವಗುರು ಮಧ್ವಾಚಾರ್ಯರ ಸಂದೇಶದ ಪ್ರಸಾರ ತನ್ಮೂಲಕ ಧಾರ್ಮಿಕ ಹಾಗೂ ಸಾಮಾಜಿಕ ಸೇವಾ ಕೈಂಕರ್ಯ ಮಾಡುತ್ತಿರುವ ವಿಎಂಡ್ಬ್ಲ್ಯುಎ ವತಿಯಿಂದ ಈ ಸಮಾರಂಭ ಏರ್ಪಡಿಸಿದ್ದು, ಅಂದು ಸಂಜೆ 3.00 ರಿಂದ 5.30 ರವರೆಗೆ ಗಾಂಧಿ ಬಜಾರ್ ಸೋಸಲೇ ವ್ಯಾಸರಾಜ ಮಠದಿಂದ ಚಾಮರಾಜಪೇಟೆ ಶ್ರೀಮನ್ಮಾಧ್ವ ಸಂಘದವರೆಗೆ ಬೃಹತ್ ಶೋಭಾಯಾತ್ರೆ ನಡೆಯಲಿದೆ. ಸಭಾ ಕಾರ್ಯಕ್ರಮದ ದಿವ್ಯಸಾನ್ನಿಧ್ಯವನ್ನು ಮುಳಬಾಗಿಲು ಶ್ರೀಪಾದರಾಜ ಮಠದ ಶ್ರೀಸುಜಯನಿಧಿ ತೀರ್ಥರು ವಹಿಸುವರು. ಬೆಂಗಳೂರು ದಕ್ಷಿಣ ಸಂಸದ ಎಲ್.ಎಸ್.ತೇಜಸ್ವಿ ಸೂರ್ಯ , ಬಸವನಗುಡಿ ಶಾಸಕ ಎಲ್.ಎ.ರವಿಸುಬ್ರಮಣ್ಯ, ಚಿಕ್ಕಪೇಟೆ ಶಾಸಕ ಉದಯಗರುಡಾಚಾರ್ , ಗರುಡಾ ಫೌಂಡೇಷನ್ ಮುಖ್ಯಸ್ಥೆ ಮೇದಿನಿ ಉದಯಗರುಡಾಚಾರ್, ಎಕೆಬಿಎಂಎಸ್ ನಿಕಟಪೂರ್ವ ಉಪಾಧ್ಯಕ್ಷ ಆರ್. ಲಕ್ಷ್ಮೀಕಾಂತ್, ಚಾಮರಾಜಪೇಟೆ ಶ್ರೀಮನ್ಮಾಧ್ವ ಸಂಘದ ಅಧ್ಯಕ್ಷ ನಾಗೇಶ್, ಸಂಸ್ಕೃತಿ ಚಿಂತಕ ಡಾ. ಗುರುರಾಜ ಪೋಶೆಟ್ಟಿಹಳ್ಳಿ ಮುಖ್ಯಅತಿಥಿಗಳಾಗಿ ಭಾಗವಹಿಸುವರು. ವ್ಯಾಸ-ದಾಸ ಸಾಹಿತ್ಯದಲ್ಲಿ ಅಪ್ರತಿಮ ಸೇವೆ ಸಲ್ಲಿಸುತ್ತಿರುವ ವಿದ್ವನ್ಮಣಿಗಳಾದ ಅಂತಾರಾಷ್ಟ್ರೀಯ ಖ್ಯಾತಿಯ ಹರಿದಾಸ ಸಾಹಿತ್ಯ ವಿದ್ವಾಂಸ ಡಾ.ಅರಳುಮಲ್ಲಿಗೆ ಪಾರ್ಥಸಾರಥಿ, ಟಿಟಿಡಿ ಆಡಳಿತ ಮಂಡಳಿಯ ನಿಕಟಪೂರ್ವ ಸದಸ್ಯ ಮತ್ತು ಎಸ್ ವಿಬಿಸಿ ನಿರ್ದೇಶಕ ಡಾ.ಡಿ.ಪಿ. ಅನಂತ , ಸಮಾಜ ಸೇವಕ ವಿದ್ವಾನ್ ಪ್ರಸನ್ನ ಹೆಬ್ಬಣಿ, ವಿಜಯಮಾಲಾ ಟ್ರಸ್ಟ್ ಸಂಸ್ಥಾಪಕಿ ಹರಿಣೀ ಪಗಡಾಲ ರವರುಗಳಿಗೆ ಮತ್ತು ಚಾಮರಾಜಪೇಟೆ 'ಶ್ರೀಮನ್ಮಾಧ್ವ ಸಂಘ'ಕ್ಕೆ 'ಶ್ರೀಮಧ್ವ ವಿಜಯ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ವಿಎಂಡ್ಬ್ಲ್ಯುಎ ಸಂಸ್ಥಾಪಕ ಅಧ್ಯಕ್ಷ ಬಿ.ಕೆ.ವೆಂಕೋಬ ರಾವ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ, ವಿವರಗಳಿಗೆ : 91138 53325.

# ಅಕ್ಷರ ಜಾತ್ರೆಗೆ ಕವನಗಳು, ಸಾಧಕರಿಂದ ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್, ಕನ್ನಂಬಾಡಿ ದಿನಪತ್ರಿಕೆ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡಹಬ್ಬ ಸಂಭ್ರಮ ಅಂಗವಾಗಿ ಅಖಿಲ ಭಾರತ ಸಾಹಿತ್ಯ ಸಮ್ಮೇಳನ ನಿಮಿತ್ತ ನವೆಂಬರ್ 17 ರಂದು ಭಾನುವಾರ ಮಂಡ್ಯ ನಗರ ಗಾಂಧಿಭವನದಲ್ಲಿ 9ನೇ ಕನ್ನಡ ಅಕ್ಷರ ಜಾತ್ರೆಯನ್ನು ಆಯೋಜಿಸಿದ್ದು, ಆಸಕ್ತರಿಂದ ಕವಿಗೋಷ್ಠಿಗೆ ಕವನವನ್ನು ಹಾಗೂ ಸಾಧಕರಿಂದ ವಿವಿಧ ಪ್ರಶಸ್ತಿಗೆ ಅರ್ಜಿಯನ್ನು ಆಹ್ವಾನಿಸಿದೆ. ಆಸಕ್ತರು 20 ಸಾಲಿನ ಎರಡು ಕವನಗಳು, ಕಿರು ಪರಿಚಯ, ಪೋಟೋ, ಮೊಬೈಲ್ ಸಂಖ್ಯೆ ಹಾಗೂ ವಿಳಾಸವನ್ನು ಅಕ್ಟೋಬರ್ 25ರೊಳಗೆ ಕಳುಹಿಸಬೇಕು. ವ್ಯಾಟ್ಸಪ್ ಮೂಲಕ ಕಳುಹಿಸಬೇಕು. ಕವನಗಳು ಯಾವುದಾದರೂ ವಿಷಯವನ್ನು ಒಳಗೊಂಡಿರಬಹುದು. ಆಯ್ಕೆಯಾದ ಕವಿತೆಗಳನ್ನು ಪುಸ್ತಕ ರೂಪದಲ್ಲಿ ಹೊರತರಲಾಗುವುದು. ಐವತ್ತು ಮಂದಿ ಕವಿಗಳಗೆ ಕವಿಗೋಷ್ಠಿಯಲ್ಲಿ ಅವಕಾಶ ಕಲ್ಪಿಸಲಾಗುವುದು. ಇಪ್ಪತ್ತು ಉತ್ತಮ ಕವನಗಳಿಗೆ 'ಕಾವ್ಯಶ್ರೀ', ಇಪ್ಪತ್ತು ಮಂದಿ ಸಾಧಕರಿಗೆ 'ಕನ್ನಡರತ್ನ', ಐದು ಮಂದಿಗೆ ಕರ್ನಾಟಕ ಸೇವಾರತ್ನ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರು ಸ್ವವಿವರದೊಂದಿಗೆ ಅರ್ಜಿ ವ್ಯಾಟ್ಸಪ್ ಮೂಲಕ ಕಳುಹಿಸಬೇಕು. ಜೀವಮಾನದಲ್ಲಿ ಅತ್ಯತ್ತಮ ಸಾಹಿತ್ಯ ಸೇವೆ ಮಾಡಿದ ಸಾಧಕರನ್ನು 9ನೇ ಕನ್ನಡ ಅಕ್ಷರ ಜಾತ್ರೆ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಗೌರವಿಸಲಾಗುವುದು. ಹೆಚ್ಚಿನ ವಿವರಕ್ಕಾಗಿ ಕವನಗಳು ಮತ್ತು ಪ್ರಶಸ್ತಿಗೆ ವಿವರಗಳನ್ನು ಎಸ್.ಕೃಷ್ಣಸ್ವರ್ಣಸಂದ್ರ, ವ್ಯಾಟ್ಸಾಪ್ ನಂ-9448424380ಗೆ ಕಳುಹಿಸಬೇಕಾಗಿ ಪ್ರಕಟಣೆಯಲ್ಲಿ ವಿನಂತಿಸಲಾಗಿದೆ.

# ದಿನೇ ದಿನೆ ಹೆಚ್ಚಾಗುತ್ತಿದೆ ವೈದ್ಯಕೀಯ ವೆಚ್ಚ

**ಚಿತ್ರದುರ್ಗ:** ದಿನೇ ದಿನೇ ರೋಗಗಳು ಹೆಚ್ಚಾಗುತ್ತಿದ್ದು, ಅವುಗಳ ನಿವಾರಣೆಗೂ ಸಹ ವೈದ್ಯಕೀಯ ವೆಚ್ಚ ಹೆಚ್ಚಾಗುತ್ತಿದೆ, ಇದು ಆತಂಕಕಾರಿ ವಿಚಾರವಾಗಿದೆ. ಬಡವರಿಗೆ ವೈದ್ಯಕೀಯ ವೆಚ್ಚ ಬರಿಸಲಾರದೆ, ಇದ್ದ ರೋಗವನ್ನು ಸಹಿಸಿಕೊಳ್ಳಲಾರದೆ, ಆತಂತ್ರ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ವೈದ್ಯಕೀಯ ವೆಚ್ಚವನ್ನು ಕಡಿಮೆಗೊಳಿಸುವುದರ ಬಗ್ಗೆ ಪ್ರಯತ್ನಿಸಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ ಎಚ್ ಕೆ ಎಸ್ ಸ್ವಾಮಿಯವರು ವಿನಂತಿಸಿಕೊಂಡಿದ್ದಾರೆ.

ಆಸ್ಪತ್ರೆಯ ಗುಣಮಟ್ಟವನ್ನ ಹೆಚ್ಚಿಸುವ ನೆಪದಲ್ಲಿ ವೈದ್ಯಕೀಯ ವೆಚ್ಚವನ್ನು ಸಹ ಏರಿಸಿಕೊಂಡು ಹೋಗುತ್ತಿರುವುದರಿಂದ, ಬಡವರಿಗೆ ಇತ್ತ ಸರ್ಕಾರಿ ಆಸ್ಪತ್ರೆಗಳಲ್ಲಿ ಸೌಲಭ್ಯಗಳಿಲ್ಲದೆ ವಂಚಿತರಾಗಿ, ಅತ್ತ ಖಾಸಗಿ ಆಸ್ಪತ್ರೆಗಳಲ್ಲಿ ಹೆಚ್ಚುತ್ತಿರುವ ವೈದ್ಯಕೀಯ ವೆಚ್ಚವನ್ನು ಭರಿಸಲಾರದೆ ಮಧ್ಯೆ ರೋಗಗಳೊಂದಿಗೆ ನರಳಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ದೊಡ್ಡ ದೊಡ್ಡ ನಗರಗಳಲ್ಲಿ ವೈದ್ಯಕೀಯ ಚಿಕಿತ್ಸೆ ಅತಿ ದುಬಾರಿಯಾಗುತ್ತಿದ್ದು, ಬಡವರಂತೂ ಅಂತಹ ಆಸ್ಪತ್ರೆಗಳ ಮೆಟ್ಟಿಲನ್ನು ಸಹ ಹತ್ತಲು ಸಾಧ್ಯವಾಗುವುದಿಲ್ಲ, ದಿನಕ್ಕೆ 800 ರಿಂದ 3 ಸಾವಿರದವರೆಗೂ ಕನಿಷ್ಠ ವೆಚ್ಚ ಬರುವಂತಹ ಆಸ್ಪತ್ರೆಗಳು ಜಿಲ್ಲಾಮಟ್ಟದಲ್ಲಿ ಕಾಣುತ್ತಿದೆ. ಅದೇ ರಾಜಧಾನಿಯ ದೊಡ್ಡ ಮಹಾನಗರಗಳಲ್ಲಂತೂ ಹತ್ತರಿಂದ ಇಪ್ಪತ್ತು ಸಾವಿರದವರೆಗೂ ಹಣ ಖರ್ಚು ಮಾಡಿ ಸಣ್ಣ ಚಿಕಿತ್ಸೆಗಳನ್ನು ಸಹ ಪಡೆಯಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಬಡವರಿಗೆ ಯಾವುದಾದರೂ ವಿಮೆ ಪದ್ದತಿಯಲ್ಲಿದ್ದರೆ ಮಾತ್ರ ಅವರು ಔಷಧಿ ಪಡೆಯಲು ಸಾಧ್ಯವಾಗುತ್ತದೆ. ಹಾಗೆ ಹೋಗಿ ಸ್ವಂತ ಹಣ ನೀಡಿ ಚಿಕಿತ್ಸೆ ಪಡೆಯಲು ದುಬಾರಿಯಾಗಿ ಪರಿಣಮಿಸುತ್ತಿದೆ. ಇದರ ಬಗ್ಗೆ ಯಾರು ಸಹ ಚಿಂತಿತರಾದಂತೆ ಕಾಣುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ.

ವೈದ್ಯಕೀಯ ಶಿಕ್ಷಣ, ನರ್ಸಿಂಗ್ ಶಿಕ್ಷಣ, ಫಾರ್ಮಸಿಸ್ಟ್ ಗಳ ಶಿಕ್ಷಣದ ವೆಚ್ಚ ಸಹ ಹೆಚ್ಚಾಗುತ್ತಿದ್ದು, ವಿದ್ಯಾರ್ಥಿಗಳು ಅವುಗಳನ್ನ ಕಲಿಯಲು ಸಾಲಾ ಸೋಲಾ ಮಾಡಿ, ಆಸ್ತಿ ಮಾರಿ ಇಂತಹ ಶಿಕ್ಷಣವನ್ನು ಪಡೆಯುವಂತಾಗಿದೆ. ಹಾಗಾಗಿ ಶಿಕ್ಷಣದ ವೆಚ್ಚವನ್ನು ಕಡಿಮೆಗೊಳಿಸಿ, ಜನರಿಗೆ ಉತ್ತಮ ಆರೋಗ್ಯ ಕಾರ್ಯಕರ್ತರನ್ನ, ಸೇವಕರನ್ನ, ವೈದ್ಯರನ್ನ ಸೃಷ್ಟಿ ಮಾಡಬೇಕಾಗಿದೆ. ಇಂತಹ ಶಿಕ್ಷಣ ಪಡೆದಂತಹ ವೈದ್ಯರು, ಶುಶ್ರೂಷಕರು, ಫಾರ್ಮಸಿಸ್ಟ್‌ಗಳು ಖಂಡಿತ ಸೇವಾ ಮನೋಭಾವನೆಯಿಂದ ಹೊರಬರಬೇಕಾಗುತ್ತದೆ. ಹೆಚ್ಚು ವೆಚ್ಚಮಾಡಿದ ವಿದ್ಯಾರ್ಥಿಯನ್ನು ಸೇವೆಗೆ ಬಳಸಿಕೊಳ್ಳುವುದು ಅಸಾಧ್ಯದ ಮಾತಾಗುತ್ತದೆ, ಹಾಗಾಗಿ ಶಿಕ್ಷಣವನ್ನು ಸಹ ನಾವು ಮಿತಿಯಲ್ಲಿರಿಸಿಕೊಂಡು, ವೈದ್ಯಕೀಯ ವೆಚ್ಚವನ್ನು ಕಡಿಮೆಗೊಳಿಸಿ, ಔಷಧಗಳ ವೆಚ್ಚವನ್ನು ಸಹ ಕಡಿಮೆಗೊಳಿಸಿ, ಬಡವರಿಗೆ ಬದುಕಲು ಅವಕಾಶ ನೀಡಬೇಕಾಗಿದೆ ಎಂದರು

ಬಡವರು ಸಹ ಹಣವಿಲ್ಲದಿದ್ದರೂ ಸಹ ಖಾಸಗಿ ಆಸ್ಪತ್ರೆಗಳಿಗೆ ಸೇರಿಕೊಂಡು, ಹೆಚ್ಚಿನ ಹಣ ನೀಡಿ, ಚಿಕಿತ್ಸೆ ಪಡೆಯುತ್ತಿರುವುದು ಚಿಂತಾ ಜನಕವಾಗಿದೆ. ಸಾಲ ಮಾಡಿ ಆದರು ಸಹ ತುಪ್ಪ ತಿನ್ನು ಎನ್ನುವಂತೆ, ಸಾಲ ಮಾಡಿದರೂ ಸಹ ಖಾಸಗಿ ಆಸ್ಪತ್ರೆಗಳ ಕಡೆ ಮುಖ ಮಾಡಿರುವುದರಿಂದ ಇನ್ನಷ್ಟು ಶೋಷಣೆ ಹೆಚ್ಚಾಗುತ್ತಿದೆ. ಶ್ರೀಮಂತರು, ವಿದ್ಯಾವಂತರು, ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು, ಅಲ್ಲಿರುವ ನ್ಯೂನ್ಯತೆಗಳನ್ನ ಸರಿಪಡಿಸಿ, ಕನಿಷ್ಠ ವೆಚ್ಚದಲ್ಲಿ ಜನರಿಗೆ ಆರೋಗ್ಯ ಕಲ್ಪಿಸುವಂತಹ ವ್ಯವಸ್ಥೆ ಮಾಡಿಕೊಡಬೇಕು, ಇಲ್ಲದಿದ್ದರೆ ವೈದ್ಯಕೀಯ ಶೋಷಣೆಗೂ ಸಹ ಬಡವರು ಸಿಕ್ಕಿಹಾಕಿಕೊಳ್ಳುತ್ತಾರೆ. ಕೆಲವು ವೈದ್ಯರಂತೂ ಆಸ್ಪತ್ರೆಗಳಲ್ಲಿ ಕೆಲಸ ಮಾಡುವುದಕ್ಕಿಂತ ಹೆಚ್ಚಾಗಿ ಖಾಸಗಿಯಾಗಿ ಹೆಚ್ಚು ಮುತುವರ್ಜಿಯಿಂದ ಕೆಲಸ ಮಾಡಿ, ರೋಗಿಗಳನ್ನ ಗಿರಾಕಿಗಳನ್ನಾಗಿ ಮಾಡಿಕೊಂಡು ಹಣ ಸಂಪಾದನೆಯನ್ನು ಉದ್ದೇಶವಾಗಿಟ್ಟುಕೊಂಡಿರುವ ಉದಾಹರಣೆಗಳು ಸಾಕಷ್ಟಿವೆ. ಮತ್ತೊಂದೆಡೆ ಕಡಿಮೆ ವೆಚ್ಚದಲ್ಲಿ ವೈದ್ಯಕೀಯ ಸೌಲಭ್ಯಗಳನ್ನು ನೀಡಿ, ಜನರ ಸೇವೆ ಮಾಡುವ ವೈದ್ಯರ ತಂಡವು ಸಹ ಇದೆ. ಇವೆರಡನ್ನ ಗುರುತಿಸಿ ನಾವು ಯಾವುದಕ್ಕೆ ಮಾನ್ಯತೆ ನೀಡಬೇಕು ಎಂಬುದನ್ನು ಕಂಡುಕೊಳ್ಳಬೇಕಾಗಿದೆ. ಜನರಲ್ಲಿ ಮಾನವೀಯತೆಯನ್ನು ಹೆಚ್ಚು ಮೂಡಿಸಿದರೆ ಮಾತ್ರ ವೈದ್ಯಕೀಯ ವೆಚ್ಚ ಕೆಳಗಿಳಿಸಲು ಸಾಧ್ಯ. ಹಣದ ಹಿಂದೆ ಓಡಿದರೆ ಖಂಡಿತ ವೈದ್ಯಕೀಯ ವೆಚ್ಚವನ್ನು ಕಡಿಮೆಗೊಳಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಭಾರತೀಯ ಸಂಸ್ಕೃತಿಯ ಪ್ರತಿಬಿಂಬ ರಾಮಾಯಣ ಮಹಾಕಾವ್ಯ



**ಮೈಸೂರು:** ಮೈಸೂರಿನ ಶಾರದಾವಿಲಾಸ ಪದವಿಪೂರ್ವಕಾಲೇಜಿನ ಆವರಣದಲ್ಲಿಇಂದು ಆದಿಕವಿ ಮಹರ್ಷಿ ವಾಲ್ಮೀಕಿರವರಜಯಂತಿಯ ನ್ನುಆಚರಿಸಲಾಯಿತು.ಕಾರ್ಯಕ್ರಮದಲ್ಲಿ ಮಾತನಾಡಿದಕಾಲೇಜಿನ ಪ್ರಾಂಶುಪಾಲರಾದಸಿ.ಕೆ.ಅಶೋಕ್ ಕುಮಾರ್‌ರವರು ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಭಾರತೀಯ ಸಂಸ್ಕೃತಿಯ ಪ್ರತಿಬಿಂಬ ರಾಮಾಯಣ ಮಹಾಕಾವ್ಯ. ಜೀವನದ ಮೌಲ್ಯಗಳೊಂದಿಗೆ ಪ್ರತಿಯೊಬ್ಬರು ಸ್ಫೂರ್ತಿ ಪಡೆಯುವಂತಹ ಮಹತ್ವದಗ್ರಂಥವಾಗಿದೆ.ವಾಲ್ಮೀಕಿಜೀವನದಕುರಿತಾಗಿ ಅನೇಕ ದಂತಕಥೆಗಳಿವೆ ಅದರಲ್ಲಿ ಒಂದು ಕಥೆಯ ಪ್ರಕಾರ ಬೇಡನಾಗಿ ನಂತರ ವಾಲ್ಮೀಕಿ ಋಷಿಯಾದ ಎಂಬುದು ಪ್ರತೀತಿ. ರಾಮಾಯಣದಲ್ಲಿ ಬರುವ 24 ಸಾವಿರ ಶ್ಲೋಕ್ಲಗಳುಅತ್ಯಂತಅರ್ಥಪೂರ್ಣವಾಗಿವೆ. ವಾಲೀಕಿಯನ್ನುಅಕ್ಷರ, ಶಿಕ್ಷಣ, ಜ್ಞಾನ, ಹೋರಾಟದ ಸಂಕೇತವಾಗಿ ಪರಿಭಾವಿಸಬೇಕಿದೆಎಂದರು.ಇಂತಹ ಮಹಾನ್‌ಚೇತನ ಮಹರ್ಷಿ ವಾಲ್ಮೀಕಿಯ ರಾಮಾಯಣಗ್ರಂಥವುಯುವಕರಿಗೆ ಸ್ಫೂರ್ತಿದಾಯಕ ಎಂದು ಅಭಿಪ್ರಾಯಿಸಿದರು.ಕಾರ್ಯಕ್ರಮದಲ್ಲಿಕಾಲೇಜಿನ ಉಪನ್ಯಾಸಕರಾದ ಜಿ.ವೆಂಕಟರಾಮು, ಸಯ್ಯದ್ ಮುಶೀರ್, ಡಾ.ಪೂಜಾ, ಡಾ.ಲಾವಣ್ಯ, ರಾಜೇಂದ್ರ ಪ್ರಸಾದ್ ಹೊನ್ನಲಗೆರೆ, ಡಾ.ಡಿ.ಸಿ.ಉಮೇಶ್, ಪ್ರವೀಣ್‌ಕುಮಾರ್, ಎಂ.ಕೆ.ರಶ್ಮಿ, ಮನೋಹರ್, ವಿಂದ್ಯಾಪ್ರಸಾದ್, ದಿವ್ಯ, ದೀಪಿಕಾ, ವಿ.ಧರ್ಮವೀರ್, ಮಂಜುನಾಥ್, ಪ್ರಕಾಶ್‌ಕೃಷ್ಣಮೂರ್ತಿ ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಸಂಭವ್ ಹ್ಯಾಕಥಾನ್ ಆರಂಭಿಸಿದ ಅಮೆಜಾನ್

ಇ-ಕಾಮರ್ಸ್ ನಲ್ಲಿ ಭಾರತದ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ (ಎಸ್ಎಂಬಿ) ಹೊಸ ತಲೆಮಾರಿನ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆ (ಎಐ) ಚಾಲಿತ ಆವಿಷ್ಕಾರಗಳನ್ನು ರೂಪಿಸಲು ರಾಷ್ಟ್ರವ್ಯಾಪಿ ಸ್ಪರ್ಧೆಯಾಗಿರುವ ಅಮೆಜಾನ್ ಸಂಭವ್ ಹ್ಯಾಕಥಾನ್ 2024 ಆರಂಭಿಸಿರುವುದಾಗಿ ಅಮೆಜಾನ್ ಇಂಡಿಯಾ ಪ್ರಕಟಿಸಿದೆ.

ಈ ಹ್ಯಾಕಥಾನ್, ಭಾರತದಲ್ಲಿನ ಕಂಪನಿಯ ಪ್ರಮುಖ ವಾರ್ಷಿಕ ಶೃಂಗಸಭೆಯ ಐದನೇ ಆವೃತ್ತಿಯಾಗಿರುವ ಅಮೆಜಾನ್ ಸಂಭವ್ 2024-ರ ಮುನ್ನಡೆಯ ಭಾಗವಾಗಿದೆ. ಭಾರತದ ಡಿಜಿಟಲ್ ಆರ್ಥಿಕತೆಯ ಬೆಳವಣಿಗೆಗೆ ಕೊಡುಗೆ ನೀಡಲು ಭಾರತದಾದ್ಯಂತ ನವೋದ್ಯಮಿಗಳಿಗೆ ಆಹ್ವಾನ ನೀಡಲಾಗುವುದು. ದೇಶದ ವಿವಿಧ ಭಾಗಗಳಲ್ಲಿ ಇರುವ ಅಗಾಧ ಪ್ರಮಾಣದ ನಾವೀನ್ಯಕಾರರ ಸಾಮರ್ಥ್ಯವನ್ನು ಬೆಂಬಲಿಸಲು ಸ್ಟಾರ್ಟ್‌ಅಪ್ ಇಂಡಿಯಾ, ಡಿಪಿಐಐಟಿ, ನ್ಯಾಷನಲ್ ಇನ್ನೋವೇಷನ್ ಫೌಂಡೇಷನ್ (ಎನ್ಐಎಫ್), ಎನ್‌ಐಎಫ್ ಇನ್ಕ್ಯುಬೇಷನ್ ಮತ್ತು ಎಂಟರ್ಪ್ರೆನ್ಯೂರ್‌ಶಿಪ್ ಕೌನ್ಸಿಲ್ (ಎನ್‌ಐಎಫ್‌ಎಂಟ್ರೆಸಿ) ಜೊತೆಗೆ ಅಮೆಜಾನ್ ಪಾಲುದಾರಿಕೆ ಹೊಂದಿದೆ. ವಿದ್ಯಾರ್ಥಿಗಳು, ಉದ್ಯಮಿಗಳು, ತಳಮಟ್ಟದ ನಾವೀನ್ಯಕಾರರು, ಸೇವಾ ಪೂರೈಕೆದಾರರು, ವೃತ್ತಿಪರರು, ಎಸ್‌ಎಂಬಿ-ಗಳು ಮತ್ತು ವಿಶಾಲ ಸ್ವರೂಪದ ಇ-ಕಾಮರ್ಸ್ ವ್ಯವಸ್ಥೆ ಸೇರಿದಂತೆ 18 ವರ್ಷಕ್ಕಿಂತ ಮೇಲ್ಪಟ್ಟ ಭಾರತದ ಎಲ್ಲ ನಾಗರಿಕರಿಗೆ ಈ ಹ್ಯಾಕಥಾನ್ ಮುಕ್ತವಾಗಿರಲಿದೆ. ಇ-ಕಾಮರ್ಸ್ ಕ್ಷೇತ್ರದಲ್ಲಿನ ಪ್ರಮುಖ ಸವಾಲುಗಳನ್ನು ಎದುರಿಸಲು ಭಾರತದಲ್ಲಿನ ನಾವೀನ್ಯತಾ ಉತ್ಸಾಹವನ್ನು ಬಳಸಿಕೊಳ್ಳಲು ಈ ಹ್ಯಾಕಥಾನ್ ಪ್ರಯತ್ನಿಸಲಿದೆ. ಭಾರಿ ಬದಲಾವಣೆಗೆ ಕಾರಣವಾಗುವ ಆಲೋಚನೆ ಹೊಂದಿರುವ ಕಾಲೇಜು ವಿದ್ಯಾರ್ಥಿಯಾಗಿರಲಿ, ಸಣ್ಣ ಪಟ್ಟಣದಲ್ಲಿ ಕೆಲಸ ಮಾಡುವ ತಂತ್ರಜ್ಞಾನ ಉತ್ಸಾಹಿಯಾಗಿರಲಿ ಅಥವಾ ಸ್ಥಳೀಯ ವಹಿವಾಟಿನ ಸವಾಲುಗಳನ್ನು ನೇರವಾಗಿ ಅರ್ಥಮಾಡಿಕೊಳ್ಳುವ ಉದ್ಯಮಿಯಾಗಿರಲಿ, ಈ ಹ್ಯಾಕಥಾನ್ ನಿಮಗೆ ಇ-ಕಾಮರ್ಸ್ ನಲ್ಲಿ ಅರ್ಥಪೂರ್ಣ ಬದಲಾವಣೆಯನ್ನು ತರಲು ವಿಶಿಷ್ಟ ಅವಕಾಶವನ್ನು ಒದಗಿಸಲಿದೆ. ಈ ಹ್ಯಾಕಥಾನ್ ಅನೇಕ ಹಂತಗಳ ಮೂಲಕ ಮುಂದುವರೆಯಲಿದೆ.

## ಸಮೋಸಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

1 ಕಪ್ ಮೈದಾ ಹಿಟ್ಟು, 4 ಬೇಯಿಸಿದ ಆಲೂಗಡ್ಡೆ, ಅಗತ್ಯವಿರುವಷ್ಟು ಚೀಸ್, 1/4 ಟೀ ಚಮಚ ಕೆಂಪು ಮೆಣಸಿನ ಪುಡಿ, 1/4 ಟೀ ಚಮಚ ಕೊತ್ತಂಬರಿ ಪುಡಿ, ದೇಸಿ ತುಪ್ಪ, 1 ಟೀ ಚಮಚ ಚಾಟ್ ಮಸಾಲ, 1/4 ಟೀ ಚಮಚ ಗರಂ ಮಸಾಲಾ, ರುಚಿಗೆ ತಕ್ಕಂತೆ ಉಪ್ಪು, ಕುಕ್ಕರ್

### ಮಾಡುವ ವಿಧಾನ

ಮೊದಲು ಮೈದಾ ಹಿಟ್ಟು, ಉಪ್ಪು ಮತ್ತು ಸ್ವಲ್ಪ ನೀರನ್ನು ಒಂದು ಬಟ್ಟಲಿನಲ್ಲಿ ಹಾಕಿ ಹಿಟ್ಟನ್ನು ಬೆರೆಸಿಕೊಳ್ಳಿ. ಹಿಟ್ಟು ತುಂಬಾ ಗಟ್ಟಿ ಅಥವಾ ತುಂಬಾ ಮೃದುವಾಗಿರಬಾರದು. ಇನ್ನೊಂದು ಬಟ್ಟಲನ್ನು ತೆಗೆದುಕೊಂಡು ಆಲೂಗಡ್ಡೆ, ಪನೀರ್, ಕೆಂಪು ಮೆಣಸಿನ ಪುಡಿ, ಕೊತ್ತಂಬರಿ ಪುಡಿ, ಚಾಟ್ ಮಸಾಲಾ, ಗರಂ ಮಸಾಲ ಮತ್ತು ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಮತ್ತು ಚೆನ್ನಾಗಿ ಮಿಶ್ರಣ ಮಾಡಿ, ಸ್ಟಫಿಂಗ್ ಮಾಡಬೇಕಾಗುತ್ತದೆ. ಮೆದುವಾಗಿ ಕಲಿಸಿದ ಹಿಟ್ಟನ್ನು ಸಣ್ಣ ಉಂಡೆಗಳನ್ನಾಗಿ ಮಾಡಿ, ಸ್ವಲ್ಪ ಲಟ್ಟಿಸಿ ಅದರಲ್ಲಿ ಒಂದು ಚಮಚ ಸ್ಟಫಿಂಗ್ ತುಂಬಿಸಿ ಮತ್ತು ತ್ರಿಕೋನದಲ್ಲಿ ಸಮೋಸಾ ಆಕಾರದಲ್ಲಿ ಮಡಚಿ ಮುಚ್ಚಿ. ಇದರ ನಂತರ, ಪ್ರೆಶರ್ ಕುಕ್ಕರ್ ತೆಗೆದುಕೊಂಡು, ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಮತ್ತು ಅದನ್ನು ಮೆಶ್ ಸ್ಟ್ಯಾಂಡ್ ನಲ್ಲಿಡಿ. ಕುಕ್ಕರಿನ ಮುಚ್ಚಳವನ್ನು ಮುಚ್ಚಿ ಮತ್ತು ಅದನ್ನು 10 ನಿಮಿಷಗಳ ಕಾಲ ಬಿಸಿ ಮಾಡಲು ಬಿಡಿ. ಇದರ ನಂತರ, ಒಂದು ತಟ್ಟೆಯಲ್ಲಿ ತುಪ್ಪವನ್ನು ಹರಡಿ. ಸ್ವಲ್ಪ ತುಪ್ಪದೊಂದಿಗೆ ಸಮೋಸವನ್ನು ಗ್ರೀಸ್ ಮಾಡಿ ಮತ್ತೆ ಕುಕ್ಕರ್ ನಲ್ಲಿಟ್ಟು ಕುಕ್ಕರ್ ಮುಚ್ಚಳ ಮುಚ್ಚಿ. ಕನಿಷ್ಠ 15 ರಿಂದ 20 ನಿಮಿಷ ಬೇಯಲು ಬಿಡಿ. ಈಗ ನಿಮ್ಮ ಆಯಿಲ್ ಲೆಸ್ ಸಮೋಸಾ ರೆಡಿ.

## ತಮನ್ನಾ ಭಾಟಿಯಾಗೆ ಇಡಿ ಡ್ರಿಲ್



ಬಹುಭಾಷಾ ನಟಿ ತಮನ್ನಾ ಭಾಟಿಯಾ ಇದೀಗ ಜಾರಿ ನಿರ್ದೇಶನಾಲಯದ ವಿಚಾರಣೆಯಲ್ಲಿ ಭಾಗವಹಿಸಿದ್ದಾರೆ. HPZ ಟೋಕನ್ ಮೊಬೈಲ್ ಅಪ್ಲಿಕೇಶನ್ಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ತನಿಖಾ ಸಂಸ್ಥೆ ನಟಿ ತಮನ್ನಾಗೆ ವಿಚಾರಣೆಗೆ ಆಗಮಿಸುವಂತೆ ಸಮನ್ಸ್ ನೀಡಿತ್ತು.

ಅದರಂತೆ ಗುರುವಾರ (ಅ. 17) ಗುವಾಹಟಿಯ ಇಡಿ ಕಚೇರಿಗೆ ತಾಯಿಯ ಜತೆಗೆ ಆಗಮಿಸಿದ್ದರು. ಸುದೀರ್ಘ 8 ಗಂಟೆಗಳ ಕಾಲ ನಟಿಯನ್ನು ಇಡಿ ಪ್ರಶ್ನೆ ಮಾಡಿದೆ. ಅಕ್ರಮ ಹಣ ವರ್ಗಾವಣೆ ಆರೋಪದ ಮೇಲೆ ನಟಿ ತಮನ್ನಾ ಭಾಟಿಯಾ ಅವರನ್ನು ಆರೋಪಿಯಾಗಿ ವಿಚಾರಣೆ ಮಾಡಲಾಗುತ್ತಿಲ್ಲ. ಬದಲಿಗೆ ಈ ಅಪ್ಲಿಕೇಶನ್ ಅನ್ನು ಪ್ರಚಾರ ಮಾಡಿದ್ದಕ್ಕಾಗಿ ವಿಚಾರಣೆ ನಡೆಸಲಾಗುತ್ತಿದೆ ಎಂದು ಇಡಿ ಮೂಲಗಳು ತಿಳಿಸಿವೆ. ಈ ಆಯಪ್ ಮೂಲಕ ಜನರಿಗೆ 57 ಸಾವಿರ ರೂಪಾಯಿಗಳನ್ನು ಹೂಡಿಕೆ ಮಾಡಿದರೆ, ದಿನಕ್ಕೆ 4 ಸಾವಿರ ರೂಪಾಯಿ ನೀಡುವುದಾಗಿ ಹೇಳಿ ಕೋಟ್ಯಂತರ ರೂಪಾಯಿ ವಂಚನೆ ಮಾಡಲಾಗಿತ್ತು ಎಂಬ ಆರೋಪ ಇದೆ.

ಈ ರೀತಿ ಜನರಿಗೆ ವಂಚಿಸಲು, ಶೆಲ್ ಕಂಪನಿಗಳ ಹೆಸರಿನಲ್ಲಿ ವಿವಿಧ ಬ್ಯಾಂಕ್ಗಳಲ್ಲಿ ನಕಲಿ ಖಾತೆಗಳನ್ನು ತೆರೆಯಲಾಗಿದ್ದು, ಅದರಲ್ಲಿ ಹೂಡಿಕೆದಾರರಿಂದ ಹಣವನ್ನು ವರ್ಗಾಯಿಸಲಾಗಿದೆ. ಆರೋಪಿಗಳು ಈ ಹಣವನ್ನು ಕ್ರಿಪ್ಟೋ ಮತ್ತು ಬಿಟ್ಕಾಯಿನ್ಗಳಲ್ಲಿ ಹೂಡಿಕೆ ಮಾಡಿದ್ದಾರೆ ಎಂದೂ ಇಡಿ ಮಾಹಿತಿ ನೀಡಿದೆ. ಈ ಪ್ರಕರಣದಲ್ಲಿ ಇಡಿ ಇದುವರೆಗೆ 497.20 ಕೋಟಿ ಮೌಲ್ಯದ ಚರ ಮತ್ತು ಸ್ಥಿರ ಆಸ್ತಿಯನ್ನು ಜಪ್ತಿ ಮಾಡಿದೆ. ಮಹದೇವ್ ಆಯಪ್ ಹಗರಣಕ್ಕೂ ಈ ಕೇಸ್ ತಳುಕು ಹಾಕಿಕೊಂಡಿದೆ.

ಇಲ್ಲಿನ ಪ್ರಾದೇಶಿಕ ಕಚೇರಿಯಲ್ಲಿ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ನಟಿ ತಮನ್ನಾ ಅವರ ಹೇಳಿಕೆಯನ್ನು ದಾಖಲಿಸಿಕೊಳ್ಳಲಾಗಿದೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ. ಆಯಪ್ ಕಂಪನಿಯ ಕಾರ್ಯಕ್ರಮವೊಂದರಲ್ಲಿ ಸೆಲೆಬ್ರಿಟಿಯಾಗಿ ಭಾಗವಹಿಸಿದ್ದಕ್ಕಾಗಿ ತಮನ್ನಾ ಭಾಟಿಯಾ ಸಂಭಾವನೆ ರೂಪದಲ್ಲಿ ಸ್ವಲ್ಪ ಹಣವನ್ನು ಪಡೆದಿದ್ದಾರೆ ಮತ್ತು ಅವರ ವಿರುದ್ಧ ಯಾವುದೇ ಕ್ರಿಮಿನಲ್ ಆರೋಪಗಳಿಲ್ಲ ಎಂದು ಮೂಲಗಳು ತಿಳಿಸಿವೆ

ಏಪ್ರಿಲ್ನಲ್ಲಿ ತಮನ್ನಾ ಭಾಟಿಯಾ ಇಂಥಹದ್ದೇ ಪ್ರಕರಣದಲ್ಲಿ ಸಿಲುಕಿದ್ದರು. ಅದು ಕೂಡ ಬೆಟ್ಟಿಂಗ್ ಆಪ್ಗೆ ಸಂಬಂಧಿಸಿದ ವಿಷಯವಾಗಿತ್ತು. ಆ ಸಂದರ್ಭದಲ್ಲೂ ತಮನ್ನಾ ಮಹಾದೇವ್ ಬೆಟ್ಟಿಂಗ್ ಆಯಪ್ ಅಂಗ ಸಂಸ್ಥೆ ಫೇರ್‌ಪ್ಲೇ ಪ್ರಚಾರ ಮಾಡುತ್ತಿದ್ದರಂತೆ. ಈ ಫೇರ್‌ಪ್ಲೇ ಅಪ್ಲಿಕೇಶನ್ ಯಾವುದೇ ಪೂರ್ವಾನುಮತಿ ಇಲ್ಲದೆ ಐಪಿಎಲ್ ಪಂದ್ಯಗಳನ್ನು ನೇರವಾಗಿ ತನ್ನ ಆಯಪ್ನಲ್ಲಿ ಪ್ಲೇ ಮಾಡಿತ್ತು. ಇದರಿಂದ ಅಧಿಕೃತ ಪ್ರಸಾರಕ ಸಂಸ್ಥೆ ವಯಾಕಾಮ್ 18 ಕೋಟ್ಯಂತರ ನಷ್ಟ ಉಂಟಾಗಿತ್ತು. ಈ ಹಿನ್ನೆಲೆಯಲ್ಲಿ ಈ ಆಯಪ್ ಪ್ರಚಾರ ಮಾಡಿದ ಆರೋಪದ ಮೇಲೆ ನಟಿಗೆ ಮಹಾರಾಷ್ಟ್ರ ಸೈಬರ್ ಸೆಲ್ ಸಮನ್ಸ್ ನೀಡಿ ವಿಚಾರಣೆ ನಡೆಸಿತ್ತು.

## ಪದೇ ಪದೇ ಹುಳಿ ತೇಗು ಬರುವುದೇ.?



### ಹೆಲ್ತ್ ಟಿಪ್ಸ್

ಹುಳಿ ತೇಗು ಯಾಕೆ ಬರುತ್ತದೆ ಎನ್ನುವುದಕ್ಕೆ ಅನೇಕ ಕಾರಣಗಳು ಇರುತ್ತವೆ. ಉದಾಹರಣೆಗೆ ಹೆಚ್ಚು ಕರಿದ ಆಹಾರವನ್ನು ತಿನ್ನುವುದು, ಅತಿಯಾಗಿ ತಿನ್ನುವುದು, ಬೇಗ ಬೇಗನೆ ತಿನ್ನುವುದು, ಅಜೀರ್ಣ, ಆಸಿಡಿಟಿ, ಧೂಮಪಾನ ಮತ್ತು ಮದ್ಯಪಾನ ಈ ಕಾರಣಗಳಿಂದ ಹುಳಿ ತೇಗು ಬರುತ್ತದೆ. ಕೆಲವು ಮನೆಮದ್ದುಗಳ ಸಹಾಯದಿಂದ ಈ ಸಮಸ್ಯೆಯನ್ನು ಸಂಪೂರ್ಣವಾಗಿ ತೊಡೆದು ಹಾಕಬಹುದು.

ಹೊಟ್ಟೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಹೋಗಲಾಡಿಸಲು ಸೋಂಪು ತುಂಬಾ ಪರಿಣಾಮಕಾರಿಯಾಗಿದೆ. ಇದರ ಸೇವನೆಯು ಜೀರ್ಣಕಾರಿ ಕಿಣ್ವಗಳ ಉತ್ಪಾದನೆಯನ್ನು ಉತ್ತೇಜಿಸುತ್ತದೆ. ಇದು ಆಹಾರವನ್ನು ಜೀರ್ಣಿಸಿಕೊಳ್ಳಲು ಸಹಾಯ ಮಾಡುತ್ತದೆ.ಗ್ಯಾಸ್, ಹೊಟ್ಟೆ ಉಬ್ಬುವುದುಮತ್ತು ಹುಳಿ ತೇಗಿನಿಂದ ಪರಿಹಾರವನ್ನು ನೀಡುತ್ತದೆ.ಇದಕ್ಕಾಗಿ ಊಟದ ನಂತರ ಅರ್ಧ ಚಮಚ ಸೋಂಫನ್ನು ಜಗಿದು ತಿನ್ನಬಹುದು ಅಥವಾ ಸೋಂಫಿನ ಟೀ ಮಾಡಿಕೊಂಡು ಕುಡಿಯಬಹುದು. :ಹಳದಿ ಹಲ್ಲನ್ನು ಮುತ್ತಿನಂತೆ ಹೊಳೆಯುವಂತೆ ಮಾಡುತ್ತದೆ !ಹುಳುಕನ್ನು ಬುಡಸಮೇತ ತೆಗೆದು ಹಲ್ಲು ಉದುರದಂತೆ ತಡೆಯುತ್ತದೆ ಈ ವಸ್ತು !

ಹುಳಿ ತೇಗು ಸಮಸ್ಯೆಯಲ್ಲಿ ಶುಂಠಿಯ ಸೇವನೆಯು ತುಂಬಾ ಪ್ರಯೋಜನಕಾರಿಯಾಗಿರುತ್ತದೆ. ಇದು ಉತ್ಕರ್ಷಣ ನಿರೋಧಕಗಳು ಮತ್ತು ಉರಿಯೂತದ ಗುಣಲಕ್ಷಣಗಳನ್ನು ಹೊಂದಿದೆ. ಇದು ಜೀರ್ಣಾಂಗ ವ್ಯವಸ್ಥೆಯನ್ನು ಉತ್ತಮಗೊಳಿಸುತ್ತದೆ. ಗ್ಯಾಸ್ ಮತ್ತು ಹುಳಿ ತೇಗಿನಿಂದ ಪರಿಹಾರವನ್ನು ನೀಡುತ್ತದೆ. ಇದಕ್ಕಾಗಿ ಒಂದು ಚಮಚ ಶುಂಠಿಯ ರಸವನ್ನು ನೀರಿನಲ್ಲಿ ಬೆರೆಸಿ ಕುಡಿದರೆ ತ್ವರಿತ ಪರಿಹಾರ ಸಿಗುತ್ತದೆ. ಹುಳಿ ತೇಗಿನ ಸಮಸ್ಯೆಯನ್ನುಹೋಗಲಾಡಿಸಲು, ಜೀರಿಗೆ ನೀರನ್ನು ಸೇವಿಸಬಹುದು. ಇದು ಜೀರ್ಣಾಂಗ ವ್ಯವಸ್ಥೆಯನ್ನು ಸುಧಾರಿಸುವ ಮೂಲಕ ಗ್ಯಾಸ್,ಆಸಿಡಿಟಿ ಮತ್ತು ಹುಳಿ ತೇಗಿನ ಸಮಸ್ಯೆಯನ್ನು ತೊಡೆದು ಹಾಕಲು ಸಹಾಯ ಮಾಡುತ್ತದೆ. ಒಂದು ಲೋಟ ನೀರಿಗೆ ಒಂದು ಚಮಚ ಜೀರಿಗೆ ಹಾಕಿ ಕುದಿಸಿ. ಸ್ವಲ್ಪ ತಣ್ಣಗಾದ ನಂತರ ಕುಡಿಯಿರಿ.

## ಹೊಸ ಸೀಸನ್ ನೊಂದಿಗೆ ಇನ್ನಷ್ಟು ಹೊಸತನದಲ್ಲಿ ಶುರುವಾಗ್ತಿದೆ ಬೊಂಬಾಟ್ ಭೋಜನ ಸೀಸನ್ 5




ಇದೇ ಸೋಮವಾರದಿಂದ ಮಧ್ಯಾಹ್ನ 12 ಗಂಟೆಗೆ..!

ಕನ್ನಡ ಕಿರುತೆರೆಯಲ್ಲಿ ಅಡುಗೆ ಶೋ ಅಂದ್ರೆ, ಥಟ್ಟನೆ ನೆನಪಾಗೋದೇ ಸ್ಟಾರ್ ಸುವರ್ಣ ವಾಹಿನಿಯ 'ಬೊಂಬಾಟ್ ಭೋಜನ'. ಸಾವಿರಕ್ಕೂ ಹೆಚ್ಚು ಸಂಚಿಕೆಗಳನ್ನು ದಾಟಿ ಹೊಸ ಮೈಲಿಗಲ್ಲು ಸೃಷ್ಟಿಸಿರುವ ಈ ಶೋ ಈಗಾಗಲೇ 4 ಸೀಸನ್ ಗಳನ್ನು ಯಶಸ್ವಿಯಾಗಿ ಪೂರೈಸಿದೆ. ಇದೀಗ ಇನ್ನಷ್ಟು ಹೊಸತನವನ್ನೊಳಗೊಂಡು 5ನೇ ಆವೃತ್ತಿಯೊಂದಿಗೆ ವೀಕ್ಷಕರ ಮುಂದೆ ಬರಲು ಸಜ್ಜಾಗಿದೆ.

ಈ ಬಾರಿ 'ಬೊಂಬಾಟ್ ಭೋಜನ ಸೀಸನ್ 5' ರ ಪ್ರಮುಖ ವಿಶೇಷತೆಯಂದ್ರೆ, ಬೊಂಬಾಟ್ ಭೋಜನ ಊಟಿ ಘುಜಜಟ. ಇನ್ಮುಂದೆ ಬೊಂಬಾಟ್ ಭೋಜನದ ಗಾಡಿ ರಾಜ್ಯಾದ್ಯಂತ ಸಂಚರಿಸಿ ನಿಮ್ ಊರಿಗೆ, ನಿಮ್ ಕೇರಿಗೆ, ನಿಮ್ ಗಲ್ಲಿಗಳಿಗೆ ಬಂದು ರುಚಿ ರುಚಿಯಾದ ಅಡುಗೆಯನ್ನು ತಯಾರಿಸಿ ಆ ರುಚಿಯನ್ನು ಅಲ್ಲಿನ ಜನರಿಗೆ ತಿಳಿಸಿಕೊಡಲಿದೆ. ಇದು ಈ ಸೀಸನ್ ನ ಮುಖ್ಯ ಆಕರ್ಷಣೆ.

ಜೊತೆಗೆ ಈ ಸೀಸನ್ ಅಲ್ಲಿ ಏನೆಲ್ಲಾ ಇರುತ್ತೆ ಎಂದು ಹೇಳೋದಾದ್ರೆ

1. ಸ್ಪೆಷಲ್ ಊಟ : ಸಿಹಿ ಕಹಿ ಚಂದ್ರು ಅವರು ರುಚಿ-ರುಚಿಯಾದ ಅಡುಗೆಯನ್ನು ತಿಳಿಸುತ್ತಾರೆ.
2. ಹೋಟೆಲ್ ಊಟ : ಕರ್ನಾಟಕದಾದ್ಯಂತ ಚಲಿಸಿ, ಜನಪ್ರಿಯತೆಗಳಿಸಿರುವ ವರ್ಷಗಳ ಇತಿಹಾಸವಿರುವ ಹೋಟೆಲ್ ಗಳಿಗೆ ಧಾವಿಸಿ ಅಲ್ಲಿನ ಜನಪ್ರಿಯ ತಿನಿಸುಗಳನ್ನು ಸವಿದು ಜನರಿಗೆ ತಿಳಿಸುವುದು.
3. ಊಟ ರೆಡಿ : ಜನಸಾಮಾನ್ಯರು / ಸೆಲೆಬ್ರಿಟಿಸ್ ಗಳು ಬಂದು ವಿವಿಧ ರೀತಿಯ ಕೈರುಚಿಯನ್ನು ತಿಳಿಸುವುದು.
4. ಆರೋಗ್ಯ ಅಡುಗೆ : ಡಾ|| ಗೌರಿ ಸುಬ್ರಮಣ್ಯ ರವರು ಜನರಿಗೆ ಉಪಯುಕ್ತವಾದ ಮನೆಮದ್ದನ್ನು ಇಲ್ಲಿ ತಿಳಿಸುತ್ತಾರೆ.
5. ಸವಿಯೂಟ : ಬೇರೆ ಬೇರೆ ಜಿಲ್ಲೆಗಳಲ್ಲಿರುವ ಲೇಡೀಸ್ ಕ್ಲಬ್ ಗಳಿಗೆ ಹೋಗಿ ಅಲ್ಲಿನ ಜನರೊಂದಿಗೆ ಬೆರೆತು, ಅಡುಗೆ ಮಾಂತ್ರಿಕ ಸಿಹಿ ಕಹಿ ಚಂದ್ರು ರವರು ವಿಭಿನ್ನ ಅಡುಗೆ ಡಿಶ್ ಗಳನ್ನು ತಯಾರಿಸುತ್ತಾರೆ.

ಇದೆಲ್ಲದರ ಜೊತೆಗೆ ಸ್ಟಾರ್ ಸುವರ್ಣ ವಾಹಿನಿಯಲ್ಲಿ ಇದೇ ಮೊದಲ ಬಾರಿಗೆ ಪ್ರತೀ ಶನಿವಾರ ಮಾಂಸ ಪ್ರಿಯರಿಗಾಗಿ ಸಿದ್ಧವಾಗ್ತಿದೆ 'ಬೊಂಬಾಟ್ ಬಾಡೂಟ'. ಅಡುಗೆ ಮಾಂತ್ರಿಕ ಆದರ್ಶ್ ತಟಪತಿ ಈ ಕಾರ್ಯಕ್ರಮವನ್ನು ನಡೆಸಿಕೊಡಲಿದ್ದಾರೆ. ಇದರಲ್ಲಿ ಖಾರ ಮಸಾಲ, ಮಿರ್ಚಿ ಮಸಾಲ ಹಾಗು ನಾಟಿ ಮಸಾಲ ಎಂಬ ವಿಭಾಗಗಳು ಹೊಂದಿರುತ್ತದೆ. ನಳ ಮಹಾರಾಜ ಸಿಹಿ ಕಹಿ ಚಂದ್ರು ರವರ ನೇತೃತ್ವದಲ್ಲಿ ಶುರುವಾಗುತ್ತಿರುವ 'ಬೊಂಬಾಟ್ ಭೋಜನ ಸೀಸನ್ 5' ಇದೇ ಸೋಮವಾರದಿಂದ ಮಧ್ಯಾಹ್ನ 12 ಗಂಟೆಗೆ ನಿಮ್ಮ ನೆಚ್ಚಿನ ಸ್ಟಾರ್ ಸುವರ್ಣ ವಾಹಿನಿಯಲ್ಲಿ ಪ್ರಸಾರವಾಗುತ್ತಿದೆ ತಪ್ಪದೇ ವೀಕ್ಷಿಸಿ.

## ಸೌಂದರ್ಯ ವೃದ್ಧಿಸುತ್ತೆ ನುಗ್ಗೆ ಎಲೆ

### ಬ್ಯೂಟಿ ಟಿಪ್ಸ್



ನಮ್ಮ ಮನೆಯ ಹಿತ್ತಿಲಿನಲ್ಲೇ ಸಿಗುವ ಅದೆಷ್ಟೋ ಸೊಪ್ಪುಗಳು ನಮ್ಮ ಆರೋಗ್ಯ ಮತ್ತು ಸೌಂದರ್ಯಕ್ಕೆ ಪೂರಕವಾಗಿವೆ. ಆದರೆ ನಾವು ಅದನ್ನು ನಿರ್ಲಕ್ಷಿಸಿ ಮಾರುಕಟ್ಟೆಯಲ್ಲಿ ಸಿಗುವ ಸೌಂದರ್ಯ ವರ್ಧಕಗಳ ಮೊರೆ ಹೋಗುತ್ತೇವೆ. ಸೊಪ್ಪುಗಳನ್ನೇ ಸದ್ಬಳಕೆ ಮಾಡಿಕೊಂಡರೆ ಜಗ ಮೆಚ್ಚುವ ಸೌಂದರ್ಯ ಗಳಿಸಿಕೊಳ್ಳಬಹುದು. ಇಂತಹ ಸೊಪ್ಪುಗಳಲ್ಲಿ ನುಗ್ಗೆ ಸೊಪ್ಪು ಕೂಡಾ ಒಂದು. ನುಗ್ಗೆ ಸೊಪ್ಪು ಚರ್ಮದ ವೃದ್ಧಾಪ್ಯವನ್ನು ತಡೆಯುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ನುಗ್ಗೆ ಸೊಪ್ಪಿನಲ್ಲಿರುವ ಔಷಧೀಯ ಗುಣಗಳು, ಮುಖದ ಚರ್ಮ ಸುಕ್ಕುಗಟ್ಟಲು ಕಾರಣವಾಗುವ ಫ್ರಿರಯಾಡಿಕಲ್ ಅಂಶವನ್ನು ತಡೆಗಟ್ಟಿ ಸುಕ್ಕುಗಟ್ಟದಂತೆ ನೋಡಿಕೊಳ್ಳುತ್ತದೆ. ಹೀಗಾಗಿ ನುಗ್ಗೆಕಾಯಿ ಸೊಪ್ಪನ್ನು ನುಣ್ಣಗೆ ರುಬ್ಬಿ ಮುಖ, ಕತ್ತಿಗೆ ಹಚ್ಚಿಕೊಂಡು ಕೆಲ ಸಮಯ ಬಿಟ್ಟು ತಣ್ಣೀರಿನಲ್ಲಿ ತೊಳೆದುಕೊಳ್ಳುವುದರಿಂದ ಮುಖದ ಕಾಂತಿ ಹೆಚ್ಚುತ್ತದೆ ಮತ್ತು ಇದು ಮುಖವನ್ನು ಬ್ಯಾಕ್ಟೀರಿಯಾ ಮುಕ್ತವಾಗಿಸುತ್ತದೆ. ಹದಿಹರೆಯದ ಯುವತಿಯರನ್ನು ಕಾಡುವ ಮೊಡವೆ ಸಮಸ್ಯೆಗೂ ನುಗ್ಗೆ ಸೊಪ್ಪು ರಾಮಬಾಣವಾಗಿದೆ. ನುಗ್ಗೆ ಸೊಪ್ಪನ್ನು ಲಿಂಬೆಹಣ್ಣಿನ ರಸದೊಂದಿಗೆ ಅರೆದು ಹಚ್ಚಿಕೊಳ್ಳುವುದರಿಂದ ಮೊಡವೆ ಸಮಸ್ಯೆಗೆ ಪರಿಹಾರ ಕಾಣಬಹುದು.

ದೇಹದಲ್ಲಿ ಸಂಗ್ರಹವಾಗುವ ವಿಷಕಾರಿ ಅಂಶಗಳಿಂದಾಗಿ ಚರ್ಮದ ಮೇಲೆ ಗುಳ್ಳೆಗಳು ಏಳುವುದು ಹಾಗೂ ಚರ್ಮದ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇಂತಹ ಸಂದರ್ಭದಲ್ಲಿ ರಕ್ತ ಶುದ್ಧಿಗಾಗಿ ನುಗ್ಗೆ ಸೊಪ್ಪನ್ನು ಬಳಸಬಹುದು. ನುಗ್ಗೆ ಸೊಪ್ಪಿನ ಎರಡು ಚಮಚ ರಸವನ್ನು ಹಾಲಿನೊಂದಿಗೆ ಬೆರೆಸಿ ರಾತ್ರಿ ಮಲಗುವ ಮುನ್ನ ಸೇವಿಸುವುದರಿಂದ ರಕ್ತ ಶುದ್ಧಿಯಾಗುತ್ತದೆ. ನುಗ್ಗೆ ಸೊಪ್ಪಿಗೆ ಒಂದು ಚಮಚ ಅರಿಶಿಣ, ಲಿಂಬೆರಸ, ಗಂಧದ ಪುಡಿ ಸೇರಿಸಿ, ನುಣ್ಣಗೆ ರುಬ್ಬಿ ಫೇಸ್ ಪ್ಯಾಕ್ ನಂತೆ ಬಳಸಿಕೊಳ್ಳುವುದರಿಂದ ಮುಖದ ಕಾಂತಿ ಹೆಚ್ಚಿಸಿಕೊಳ್ಳಬಹುದು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಆಧ್ಯಾತ್ಮಿಕ ಚಿಂತನೆ, ತಂದೆಯಿಂದ ಅನುಕೂಲ, ಉನ್ನತ ವಿದ್ಯಾಭ್ಯಾಸದ ಹಂಬಲ, ಶುಭಕಾರ್ಯಗಳ ಯೋಚನೆ.

**ವೃಷಭ:** ದೂರ ಪ್ರಯಾಣ, ಪ್ರಯಾಣದಲ್ಲಿ ಅಡತಡೆ, ಆಯುಷ್ಯದ ಭೀತಿ, ಧನಾಗಮನ.

**ಮಿಥುನ:** ಪ್ರೀತಿ ಪ್ರೇಮದಲ್ಲಿ ಯಶಸ್ಸು, ಭಾವನಾತ್ಮಕ ಚಿಂತನೆ, ದೈಹಿಕ ಅಸಮತೋಲನ, ಪಾಲುದಾರಿಕೆಯಲ್ಲಿ ನಷ್ಟ.

**ಕಟಕ:** ತಾಯಿಯ ಆರೋಗ್ಯದಲ್ಲಿ ವ್ಯತ್ಯಾಸ, ದಾಂಪತ್ಯದಲ್ಲಿ ಮನಸ್ತಾಪ, ವ್ಯಾಪಾರದಲ್ಲಿ ನಷ್ಟ, ಸಾಲದ ಚಿಂತೆಗಳು.

**ಸಿಂಹ:** ಮಕ್ಕಳಿಂದ ಅನುಕೂಲ, ಉದ್ಯೋಗ ನಷ್ಟದ ಭೀತಿ, ಉದ್ಯೋಗದಲ್ಲಿ ಒತ್ತಡಗಳು, ದಾಯಾದಿಗಳಿಂದ ತೊಂದರೆ.

**ಕನ್ಯಾ:** ಆರ್ಥಿಕ ಅನುಕೂಲ, ಸ್ಥಿರಾಸ್ತಿಯ ಮೇಲೆ ಸಾಲ, ಕೋರ್ಟ್ ಕೇಸುಗಳ ಚಿಂತೆ, ಪ್ರಯಾಣದಲ್ಲಿ ಅನುಕೂಲ.

**ತುಲಾ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಶುಭಕಾರ್ಯಕ್ಕೆ ಯಶಸ್ಸು, ಆಕಸ್ಮಿಕ ಪ್ರಯಾಣ, ಸ್ತ್ರೀಯರಿಂದ ಅನುಕೂಲ.

**ವೃಶ್ಚಿಕ:** ಪಾಲುದಾರಿಕೆಯಿಂದ ಧನಾಗಮನ, ಸಂಗಾತಿಯಿಂದ ಆರ್ಥಿಕ ಅನುಕೂಲ, ಶುಭ ಕಾರ್ಯದಲ್ಲಿ ಯಶಸ್ಸು, ರತ್ನಾಭರಣ ಖರೀದಿ.

**ಧನಸ್ಸು:** ಸಾಲದ ಚಿಂತೆಗಳು, ಗೌರವ ಮತ್ತು ಕೀರ್ತಿಯ ಹಂಬಲ, ಅನಾರೋಗ್ಯದಿಂದ ಮುಕ್ತಿ, ವಿದ್ಯಾಭ್ಯಾಸದಲ್ಲಿ ಒತ್ತಡಗಳು.

**ಮಕರ:** ಪ್ರೀತಿ ಪ್ರೇಮದಲ್ಲಿ ಹಿನ್ನಡೆ, ಮಕ್ಕಳು ದೂರ, ವಿದ್ಯಾಭ್ಯಾಸದಿಂದ ನಿದ್ರಾಭಂಗ, ಅಪಕೀರ್ತಿ ಮತ್ತು ಅಪವಾದಗಳು.

**ಕುಂಭ:** ಸ್ಥಿರಾಸ್ತಿ ಯೋಗ ಮತ್ತು ಲಾಭ, ವಾಹನ ಅನುಕೂಲ, ತಾಯಿಯಿಂದ ಸಹಕಾರ, ಆರೋಗ್ಯದಲ್ಲಿ ಚೇತರಿಕೆ.

**ಮೀನ:** ಉದ್ಯೋಗ ಒತ್ತಡಗಳು, ಧನ ನಷ್ಟಗಳು, ಅಪಮೃತ್ಯು ಭಯ, ಸೋಲಿನ ಚಿಂತೆ.

## ಮೆನೋಪಾಸ್ ದಿನ




ಪ್ರಪಂಚದಾದ್ಯಂತ ಮಹಿಳೆಯರ ಜೀವನದ ಮೇಲೆ ಈ ಸ್ಥಿತಿಯು ಬೀರುವ ಪ್ರಭಾವದ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಅಕ್ಟೋಬರ್ 18 ರಂದು ವಿಶ್ವ ಋತುಬಂಧ ದಿನವನ್ನು ಆಚರಿಸಲಾಗುತ್ತದೆ. ಪ್ರಪಂಚದ ಅರ್ಧದಷ್ಟು ಜನಸಂಖ್ಯೆಯ ಮೇಲೆ ಪರಿಣಾಮ ಬೀರುವ ಹೊರತಾಗಿಯೂ, ಋತುಬಂಧವು ಎಷ್ಟು ಇರಬೇಕು ಎಂಬುದರ ಬಗ್ಗೆ ಮಾತನಾಡುವುದಿಲ್ಲ. ದಿನವನ್ನು ಗಮನಿಸುವುದು ಪರಿಸ್ಥಿತಿಯ ಕುರಿತು ಹೆಚ್ಚಿನ ವೈದ್ಯಕೀಯ ಸಂಶೋಧನೆಯನ್ನು ಪ್ರೋತ್ಸಾಹಿಸಲು ಒಂದು ಅವಕಾಶವಾಗಿದೆ.

1984 ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಮತ್ತು ಇಂಟರ್ನ್ಯಾಷನಲ್ ಮೆನೋಪಾಸ್ ಸೊಸೈಟಿ ಮೂಲಕ ವಿಶ್ವ ಋತುಬಂಧ ದಿನವನ್ನು ಸ್ಥಾಪಿಸಲಾಯಿತು, ಇದು ವಯಸ್ಸಾದಂತೆ ಮಹಿಳೆಯರ ಮೇಲೆ ಪರಿಣಾಮ ಬೀರುವ ಈ ಸ್ಥಿತಿಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ.ಋತುಬಂಧವು ಮಹಿಳೆಯ ಸಂತಾನೋತ್ಪತ್ತಿ ಹಾರ್ಮೋನುಗಳ ಸ್ವಾಭಾವಿಕ ಕುಸಿತವನ್ನು ವಿವರಿಸಲು ಬಳಸಲಾಗುವ ಪದವಾಗಿದೆ, ಇದು 45 ಮತ್ತು 55 ವರ್ಷಗಳ ನಡುವೆ ಪ್ರಾರಂಭವಾಗುತ್ತದೆ, ದೇಹವು ತನ್ನ ಕೊನೆಯ ಋತುಚಕ್ರವನ್ನು ಅನುಭವಿಸಿದಾಗ. ಋತುಬಂಧದ ಸಾಮಾನ್ಯ ಲಕ್ಷಣಗಳೆಂದರೆ ಬಿಸಿ ಹೊಳಪಿನ, ರಾತ್ರಿ ಬೆವರುವಿಕೆ, ಮೂಡ್ ಬದಲಾವಣೆಗಳು ಮತ್ತು ನಿದ್ರಾ ಭಂಗಗಳು. ಈ ಎಲ್ಲಾ ರೋಗಲಕ್ಷಣಗಳು ಆತಂಕ ಮತ್ತು ಖಿನ್ನತೆಯ ಹೆಚ್ಚಳಕ್ಕೆ ಕಾರಣವಾಗಬಹುದು. ಋತುಬಂಧದ ನಂತರ, ಮಹಿಳೆಯರು ಹೃದ್ರೋಗ ಮತ್ತು ಆಸ್ಟಿಯೊಪೊರೋಸಿಸ್ನಂತಹ ಪರಿಸ್ಥಿತಿಗಳನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಹೊಂದಿರುತ್ತಾರೆ. ಋತುಬಂಧಕ್ಕೆ ಸಂಬಂಧಿಸಿದ ಹೆಚ್ಚಿನ ಚಿಕಿತ್ಸೆಗಳು ರೋಗಲಕ್ಷಣದ ಪರಿಹಾರದ ಮೇಲೆ ಕೇಂದ್ರೀಕರಿಸುತ್ತವೆ ಏಕೆಂದರೆ ಇದು ವಯಸ್ಸಾದ ಸಾಮಾನ್ಯ ಭಾಗವಾಗಿದೆ ಮತ್ತು ಅದರಂತೆ, ಗುಣಪಡಿಸಬಹುದಾದ ಸ್ಥಿತಿಯಲ್ಲ.ಈ ಸ್ಥಿತಿಯನ್ನು ಎಷ್ಟು ಅಧ್ಯಯನ ಮಾಡಬೇಕೋ ಅಷ್ಟು ಅಧ್ಯಯನ ಮಾಡಿಲ್ಲ ಮತ್ತು ಬಹಿರಂಗವಾಗಿ ಚರ್ಚಿಸಲಾಗಿಲ್ಲ. ಋತುಬಂಧ ಮತ್ತು ಅದರ ಪರಿಣಾಮಗಳ ಕುರಿತು ಸಂಭಾಷಣೆ ಮತ್ತು ಸಂಶೋಧನೆಯನ್ನು ಉತ್ತೇಜಿಸುವ ಮೂಲಕ ವಿಶ್ವ ಋತುಬಂಧ ದಿನವನ್ನು ಈ ಸಮಸ್ಯೆಗಳಿಗೆ ಪರಿಹಾರವಾಗಿ ನೋಡಲಾಗಿದೆ.

ಪ್ರಪಂಚದಾದ್ಯಂತ ಜನರು ಹೆಚ್ಚು ಕಾಲ ಬದುಕುತ್ತಿರುವಂತೆ, ಹೆಚ್ಚು ಹೆಚ್ಚು ಮಹಿಳೆಯರು ಋತುಬಂಧಕ್ಕೆ ಒಳಗಾಗುವ ಸಾಧ್ಯತೆಯಿದೆ. ಋತುಬಂಧದ ಪರಿಣಾಮವಾಗಿ ಸಂಭವಿಸಬಹುದಾದ ಪರಿಣಾಮಗಳಿಗೆ ನಾವು ಸಿದ್ಧರಾಗಿರುವುದು ಮುಖ್ಯ, ಇದರಿಂದ ನಾವು ಉತ್ತಮ, ಆರೋಗ್ಯಕರ ಜೀವನವನ್ನು ನಡೆಸಬಹುದು

# ಶಬರಿಮಲೆ ಯಾತ್ರಾರ್ಥಿಗಳಿಗೆ 5 ಲಕ್ಷ ರೂ. ವಿಮೆ ಯೋಜನೆ ಜಾರಿ

**ಶಬರಿಮಲೆ:** ಶ್ರೀ ಕ್ಷೇತ್ರ, ಶಬರಿಮಲೆ ಯಾತ್ರಾರ್ಥಿಗಳು, ದಿನಗೂಲಿ ನೌಕರರು ಮತ್ತು ಎಲ್ಲಾ ಸಿಬ್ಬಂದಿಗೆ 5 ಲಕ್ಷ ರೂಪಾಯಿ ವಿಮೆ ಯೋಜನೆ ಜಾರಿಗೆ ತರಲಾಗಿದ್ದು, ತಿರುವಾಂಕೂರು ದೇವಸ್ವಂ ಮಂಡಳಿ ಅಪಘಾತ ವಿಮೆ ಒದಗಿಸಲಿದೆ.

ಒಂದು ವರ್ಷದ ಅವಧಿಯ ವಿಮೆಯಲ್ಲಿ ಆಕಸ್ಮಿಕ ಮರಣ ಸಂಭವಿಸಿದರೆ ಮೃತರ ಅವಲಂಬಿತರಿಗೆ 5 ಲಕ್ಷ ರೂಪಾಯಿ ಲಭಿಸಲಿದೆ.

ತಿರುವಾಂಕೂರು ದೇವಸ್ವಂ ಮಂಡಳಿ ವತಿಯಿಂದ ವಿಮೆಯ ಪ್ರೀಮಿಯಂ ಮೊತ್ತವನ್ನು ಭರಿಸಲಾಗುತ್ತದೆ.

ಶಬರಿಮಲೆ ಸನ್ನಿಧಾನಂ ಅಥವಾ ಆಸುಪಾಸಿನಲ್ಲಿ ಯಾತ್ರಾರ್ಥಿಗಳು ಹೃದಯಾಘಾತ ಅಥವಾ ಅಪಘಾತದಿಂದ ಮೃತಪಟ್ಟಲ್ಲಿ ಮೃತದೇಹವನ್ನು ಆಂಬುಲೆನ್ಸ್‌ನಲ್ಲಿ ಮನೆಗೆ ತಲುಪಿಸಲಾಗುವುದು. ದಿನಗೂಲಿ ನೌಕರರು,



ಯಾತ್ರಾರ್ಥಿಗಳು, ಎಲ್ಲಾ ಸಿಬ್ಬಂದಿಗೆ ತಿರುವಾಂಕೂರು ದೇವಸ್ವಂ ಮಂಡಳಿಯಿಂದ 5 ಲಕ್ಷ ರೂ. ವಿಮೆ ಯೋಜನೆ ಜಾರಿಗೆ ತರಲಾಗಿದೆ.

# ಜೈಲಲ್ಲಿ ಇನ್ಸುಲಿನ್ ಕೊಡದೇ ನನ್ನನ್ನು ಸಾಯಿಸಲು ಸಂಚು ಮಾಡಿದ್ದರು: ಕೇಜ್ರಿವಾಲ್

**ನವದೆಹಲಿ:** ನಾನು ಜೈಲಿನಲ್ಲಿದ್ದ ಸಂದರ್ಭ ನನಗೆ ಇನ್ಸುಲಿನ್ ಕೊಡದೇ ನನ್ನನ್ನು ಕೊಲ್ಲಲು ಬಿಜೆಪಿ ಸಂಚು ರೂಪಿಸಿತ್ತು ಎಂದು ದೆಹಲಿಯ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ಬುಧವಾರ ಆರೋಪಿಸಿದ್ದಾರೆ.

ಇಂದು ಪಕ್ಷದ ಜನಸಂಪರ್ಕ ಕಾರ್ಯಕ್ರಮದಲ್ಲಿ ಮಾತನಾಡಿದ ಎಎಪಿ ರಾಷ್ಟ್ರೀಯ ಸಂಚಾಲಕ ಕೇಜ್ರಿವಾಲ್, ನನ್ನ ಶುಗರ್ ಲೆವೆಲ್ ಜಾಸ್ತಿಯಾಗಿದ್ದರಿಂದ ನಾನು ದಿನಕ್ಕೆ ನಾಲ್ಕು ಚುಚ್ಚು ಮದ್ದುಗಳನ್ನು ತೆಗೆದುಕೊಳ್ಳಬೇಕಿತ್ತು.

ಆದರೆ ಬಿಜೆಪಿಯವರು ನನ್ನನ್ನು ಜೈಲಿಗೆ ಹಾಕಿ ಇನ್ಸುಲಿನ್ ಕೊಡದೇ ಸತಾಯಿಸಿದ್ದರು. ಇದರಿಂದ ನನ್ನ ಕಿಡ್ನಿಗಳು ಹಾಳಾಗಿ ನಾನು ಸಾಯಬಹುದಿತ್ತು ಎಂದು ಹೇಳಿದ್ದಾರೆ.

ಆದರೆ ಬಿಜೆಪಿಯವರ ಪಿತೂರಿಯ ಹೊರತಾಗಿಯೂ ಬದುಕುಳಿದೆ. ನಿಮ್ಮ ಆಶೀರ್ವಾದದಿಂದ ಜೈಲಿನಿಂದ ಹೊರ ಬಂದೆ ಎಂದು ಜನರನ್ನು ಉದ್ದೇಶಿಸಿ ಹೇಳಿದ್ದಾರೆ.



ದೆಹಲಿ ಅಬಕಾರಿ ನೀತಿ ಹಗರಣದಲ್ಲಿ ಜೈಲು ಸೇರಿದ್ದ ಕೇಜ್ರಿವಾಲ್ ಅವರಿಗೆ ಶುಗರ್ ಸಮಸ್ಯೆ ಇತ್ತು. ಅವರಿಗೆ ಜೈಲಿನಲ್ಲಿ ಇನ್ಸುಲಿನ್ ಕೊಡುತ್ತಿಲ್ಲ ಎಂದು ಏಪ್ರಿಲ್‌ನಲ್ಲಿ ಆರೋಪಿಸಿದ್ದು, ವಿವಾದಕ್ಕೆ ಕಾರಣವಾಗಿತ್ತು.

# ಹರಿಯಾಣದ ಸಿಎಂ ಆಗಿ 'ನಯಾಬ್ ಸಿಂಗ್ ಸೈನಿ' ಪ್ರಮಾಣ ವಚನ ಸ್ವೀಕಾರ

**ನವದೆಹಲಿ:** ನಯಾಬ್ ಸಿಂಗ್ ಸೈನಿ ಇಂದು ಹರಿಯಾಣದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ.ಪಂಚಕುಲದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ, ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಇತರ ಉನ್ನತ ಬಿಜೆಪಿ ನಾಯಕರು ಭಾಗವಹಿಸಿದ್ದಾರೆ. ರಾಜ್ಯಪಾಲ ಬಂಡಾರು ದತ್ತಾತ್ರೇಯ ಅವರು ಪ್ರಮಾಣ ವಚನ ಭೋದಿಸಿದರು. ಹರಿಯಾಣದ ಮಾಜಿ ಮುಖ್ಯಮಂತ್ರಿ ಮನೋಹರ್ ಲಾಲ್ ಖಟ್ಟರ್, ಬಿಜೆಪಿ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಅವರ ಪ್ರತಿನಿಧಿಗಳು ಭಾಗವಹಿಸಿದ್ದರು. ತಮ್ಮ ಮಾರ್ಗದರ್ಶಕ ಖಟ್ಟರ್ ಅವರನ್ನು ಮುಖ್ಯಮಂತ್ರಿಯಾಗಿ ಬದಲಿಸಿದ ತಿಂಗಳುಗಳ ನಂತರ, ಸೈನಿ ಅಕ್ಟೋಬರ್ 5 ರಂದು ನಡೆದ ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಐತಿಹಾಸಿಕ ವಿಜಯದತ್ತ ಮುನ್ನಡೆಸಿದರು, 90 ಸದಸ್ಯರ ಸದನದಲ್ಲಿ 48 ಸ್ಥಾನಗಳನ್ನು ಗಳಿಸಿದರು, ಪಕ್ಷಕ್ಕೆ ಸತತ ಮೂರನೇ ಅವಧಿಯನ್ನು ನೀಡಿದರು. ಕುರುಕ್ಷೇತ್ರ ಜಿಲ್ಲೆಯ ಲಾಡ್ವಾ ಸ್ಥಾನದಿಂದ ಸ್ಪರ್ಧಿಸಿ ಗೆದ್ದ 54 ವರ್ಷದ ದಲಿತ ನಾಯಕನನ್ನು ಹರಿಯಾಣದಲ್ಲಿ ಬಿಜೆಪಿಯ ಶಾಸಕಾಂಗ ಪಕ್ಷದ ನಾಯಕರಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ನಂತರ ಅವರು ರಾಜ್ಯಪಾಲ ಬಂಡಾರು ದತ್ತಾತ್ರೇಯ ಅವರನ್ನು ಭೇಟಿಯಾಗಿ ರಾಜ್ಯದಲ್ಲಿ ಮುಂದಿನ ಸರ್ಕಾರ ರಚಿಸಲು ಹಕ್ಕು ಮಂಡಿಸಿದರು.ಸೈನಿ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ.



# ಉಪ ಚುನಾವಣೆ ದಿನಾಂಕ ಬದಲಾಯಿಸುವಂತೆ ಚುನಾವಣಾ ಆಯೋಗಕ್ಕೆ ಬಿಜೆಪಿ ಆಗ್ರಹ

**ದೆಹಲಿ:** ಕಾರ್ತಿಕ ಪೂರ್ಣಿಮೆಯ ಕಾರಣ ಉತ್ತರ ಪ್ರದೇಶದ 10 ಕ್ಷೇತ್ರಗಳಿಗೆ ನಡೆಯುವ ಉಪ ಚುನಾವಣೆ ಚುನಾವಣಾ ದಿನಾಂಕವನ್ನು ಬದಲಾಯಿಸುವಂತೆ ಭಾರತೀಯ ಜನತಾ ಪಾರ್ಟಿ ನಿಯೋಗ ಇಂದು ಚುನಾವಣಾ ಆಯೋಗವನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ.

ನಿಯೋಗದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಗೋವಿಂದ್ ನಾರಾಯಣ್ ಶುಕ್ಲಾ, ಸಂಜಯ್ ರೈ, ರಾಮಪ್ರತಾಪ್ ಸಿಂಗ್ ಚೌಹಾಣ್ ಮತ್ತು ಚುನಾವಣಾ ಆಯೋಗದ ಸಂಪರ್ಕ ವಿಭಾಗದ ರಾಜ್ಯ ಸಂಚಾಲಕ ಅಖಿಲೇಶ್ ಕುಮಾರ್ ಅವಸ್ತಿ ಅವರಿದ್ದರು.



ಕಾರ್ತಿಕ ಪೂರ್ಣಿಮಾ ಹಬ್ಬದ ಕಾರಣ ಮತದಾನದ ದಿನಾಂಕವನ್ನು ಬದಲಾಯಿಸುವಂತೆ ಚುನಾವಣಾ ಆಯೋಗಕ್ಕೆ ಮನವಿ ಪತ್ರ ಸಲ್ಲಿಸಿದ್ದಾರೆ.

ಕಾರ್ತಿಕ ಪೂರ್ಣಿಮಾ ಸ್ನಾನ ಮತ್ತು ಪೂಜೆಯ ದೃಷ್ಟಿಯಿಂದ ಉಪಚುನಾವಣೆ ದಿನಾಂಕವನ್ನು ನವೆಂಬರ್ 13 ರಿಂದ ನವೆಂಬರ್ 20 ರವರೆಗೆ ಮುಂದೂಡುವಂತೆ ಬಿಜೆಪಿ ಮತ್ತು ರಾಷ್ಟ್ರೀಯ ಲೋಕದಳ ಗುರುವಾರ ಚುನಾವಣಾ ಆಯೋಗವನ್ನು ಕೋರಿದೆ.

ಉತ್ತರ ಪ್ರದೇಶದಲ್ಲಿ ಉಪಚುನಾವಣೆಯ ದಿನಾಂಕವನ್ನು ನವೆಂಬರ್ 13 ರಂದು ಘೋಷಿಸಲಾಗಿದೆ. ನವೆಂಬರ್ 15 ರಂದು ಕಾರ್ತಿಕ ಪೂರ್ಣಿಮಾ ಸ್ನಾನದ ಹಬ್ಬ. ಸ್ನಾನದ ಹಬ್ಬ ಮತ್ತು ಕಾರ್ತಿಕ ಪೂರ್ಣಿಮೆಯ ಆರಾಧನೆಯು ಉತ್ತರ ಪ್ರದೇಶದಲ್ಲಿ ವಿಶೇಷ ಪ್ರಾಮುಖ್ಯತೆಯನ್ನು ಹೊಂದಿದೆ.

ಕಾರ್ತಿಕ ಪೂರ್ಣಿಮೆಯಂದು ಹೆಚ್ಚಿನ ಸಂಖ್ಯೆಯ ಜನರು ಸ್ನಾನ ಮತ್ತು ಪೂಜೆಗೆ ಹೋಗುತ್ತಾರೆ. ಕಾರ್ತಿಕ ಪೂರ್ಣಿಮೆಯ ಸಂದರ್ಭದಲ್ಲಿ ಜನರು ಕುಂದರ್ಕಿ, ಮೀರಾಪುರ, ಗಾಜಿಯಾಬಾದ್ ಮತ್ತು ಪ್ರಯಾಗ್ರಾಜ್ಗೆ ತಲುಪುತ್ತಾರೆ, ಜನರು ಜಾತ್ರೆಯಲ್ಲಿ ಭಾಗವಹಿಸಲು ಮತ್ತು ಪೂಜೆ ಮಾಡಲು ಕನಿಷ್ಠ ಮೂರ್ನಾಲ್ಕು ದಿನಗಳ ಮುಂಚಿತವಾಗಿ ಆಗಮಿಸುತ್ತಾರೆ. ಇದರಿಂದ ಬಹುತೇಕ ಮತದಾರರು ಮತದಾನದಿಂದ ವಂಚಿತರಾಗಬಹುದು ಎಂದು ನಿಯೋಗ ಹೇಳಿದೆ.




# ಕಾಶ್ಮೀರದಿಂದ ಕನ್ಯಾಕುಮಾರಿಯವರೆಗಿನ ದಕ್ಷಿಣ ಭಾಗದ ದಂಡಯಾತ್ರೆಗೆ ಚಾಲನೆ

**ಬೆಂಗಳೂರು:** ಭಾರತದಾದ್ಯಂತ ಸುಸ್ಥಿರ ಸಾರಿಗೆಯನ್ನು ಉತ್ತೇಜಿಸುವ ತನ್ನ ಉದ್ದೇಶದೊಂದಿಗೆ, ಗ್ರೀನ್ಸೆಲ್ ಮೊಬಿಲಿಟಿ ಅಡಿಯಲ್ಲಿ ದೇಶದ ಮೊದಲ ಸಂಘಟಿತ ಎಲೆಕ್ಟ್ರಿಕ್ ಇಂಟರ್‌ಸಿಟಿ ಬ್ರ್ಯಾಂಡ್ ಆಗಿರುವ NueGo,, ಇಂದು ತನ್ನ ಬೆಂಗಳೂರಿನಲ್ಲಿ ಡಿಪೋದಲ್ಲಿ ತನ್ನ ಐಕಾನಿಕ್ ಕಾಶ್ಮೀರದಿಂದ ಕನ್ಯಾಕುಮಾರಿ (ಕೆ2ಕೆ) ವರೆಗಿನ ದಕ್ಷಿಣ ಭಾಗದ ಎಲೆಕ್ಟ್ರಿಕ್ ಬಸ್ ದಂಡಯಾತ್ರೆಗೆ ಚಾಲನೆ ನೀಡಿತು. ಬೆಂಗಳೂರಿನ ಈ ಸಮಾರಂಭದಲ್ಲಿ ಜಗದೀಶ್, ಉಪ ಪೊಲೀಸ್ ಅಧೀಕ್ಷಕರು, ನೆಲಮಂಗಲ, ಬೆಂಗಳೂರು ಇವರು ಇತರ ಗಣ್ಯರಾದ ಮಂಜುನಾಥ್, ಆಯುಕ್ತರು, ನಗರ ಪಾಲಿಕೆ, ಶ್ರೀ ರವಿಕುಮಾರ್, ಸಂಚಾರ ಪೊಲೀಸ್ ನಿರೀಕ್ಷಕರು, ನೆಲಮಂಗಲ, ಕೆ.ಎಂ. ಸಿದ್ದಹೊನ್ನಪ್ಪ, ಅಗ್ನಿಶಾಮಕ ಠಾಣಾಧಿಕಾರಿ, ನೆಲಮಂಗಲ, ಮತ್ತು ಮುರಳೀಧರ್, ಪೊಲೀಸ್ ನಿರೀಕ್ಷಕರು, ಮಾದನಾಯಕನಹಳ್ಳಿ ಇವರುಗಳ ಜೊತೆಯಲ್ಲಿ ಉಪಸ್ಥಿತರಿದ್ದರು.

ಕಾಶ್ಮೀರದಿಂದ ತನ್ನ ಪ್ರಯಾಣವನ್ನು ಆರಂಭಿಸಿದ ಕೆ2ಕೆ ಎಲೆಕ್ಟ್ರಿಕ್ ಬಸ್ ದಂಡಯಾತ್ರೆಯು ಈಗ ದಕ್ಷಿಣದ ಭಾಗವನ್ನು ಪ್ರವೇಶಿಸುತ್ತಿದೆ. ಅತ್ಯಾಧುನಿಕ ತಂತ್ರಜ್ಞಾನ ಮತ್ತು ಶೂನ್ಯ ಟೈಲ್-ಪೈಪ್ ಎಮಿಷನ್ ಹೊರಸೂಸುವ ಈ ಆಲ್-ಎಲೆಕ್ಟ್ರಿಕ್ ಬಸ್ 11 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮೂಲಕ 4,000 ಕಿಲೋಮೀಟರ್ಗಳನ್ನು ಕ್ರಮಿಸುವ ಮುಖಾಂತರ ಹೊಸ ದಾಖಲೆಗಳನ್ನು ಸ್ಥಾಪಿಸುವ ಗುರಿಯನ್ನು ಹೊಂದಿದೆ. ಈಗಾಗಲೇ ಸರಿಸುಮಾರು 3300 ಕಿಲೋಮೀಟರ್ಗಳಷ್ಟು ವ್ಯಾಪಿಸಿರುವ ಈ ಪ್ರಯಾಣವು ಕಠಿಣ ಭೂಪ್ರದೇಶಗಳು ಮತ್ತು ಹವಾಮಾನ ಪರಿಸ್ಥಿತಿಗಳಲ್ಲಿ ಇಂಟರ್‌ಸಿಟಿ ಪ್ರಯಾಣಕ್ಕಾಗಿ ಇಗಿ ಗಳ ಕಾರ್ಯಸಾಧ್ಯತೆಯನ್ನು ಎತ್ತಿ ತೋರಿಸುತ್ತದೆ. ಹಾಗೂ ಸುಸ್ಥಿರತೆಯ ಕುರಿತು ಚರ್ಚೆಗಳನ್ನು ಉತ್ತೇಜಿಸಲು, ಬಸ್, ದಾರಿಯುದ್ದಕ್ಕೂ ಅನೇಕ ನಗರಗಳಲ್ಲಿ ಸಾರ್ವಜನಿಕರೊಂದಿಗೆ ತೊಡಗಿಸಿಕೊಳ್ಳುತ್ತದೆ,



ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವರಾದ ಮಾನ್ಯ ನಿತಿನ್ ಗಡ್ಕರಿ ಅವರು ಪಶ್ಚಿಮ ವಿಭಾಗವನ್ನು ಉದ್ಘಾಟಿಸಿ ಭಾರತದ ಸಾರಿಗೆ ಪರಿಸರ ವ್ಯವಸ್ಥೆಯಲ್ಲಿ ಇಗಿ ಗಳ ಪ್ರಾಮುಖ್ಯತೆಯನ್ನು ಒತ್ತಿಹೇಳಿದ ನಾಗ್ಪುರ ಸೇರಿದಂತೆ ಇತರ ಪ್ರದೇಶಗಳಲ್ಲಿನ ತನ್ನ ಹಿಂದಿನ ಚಾಲನೆಗಳನ್ನು ಯಾತ್ರೆಯ ಈ ಹಂತವು ಅನುಸರಿಸುತ್ತದೆ.

ಗ್ರೀನ್ಸೆಲ್ ಮೊಬಿಲಿಟಿಯ ಸಿಇಒ ಮತ್ತು ಎಂಡಿ ಆದ ದೇವೇಂದ್ರ ಚಾವ್ಲಾ ಅವರು ಭಾರತದಲ್ಲಿ ಹಸಿರು ಸಮೂಹ ಚಲನಶೀಲತೆಯ ಪರಿಹಾರಗಳ ಅಗತ್ಯವನ್ನು ಒತ್ತಿ ಹೇಳಿದರು. NueGo ನ ಮಹತ್ವಾಕಾಂಕ್ಷೆಯ ಇ-ಕೆ2ಕೆ ಪ್ರಯಾಣವು ನಾವು ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ 4,000 ಕಿಲೋಮೀಟರ್ಗಳಷ್ಟು ಪ್ರಯಾಣಿಸುವುದನ್ನು ತೋರಿಸುತ್ತದೆ, ಆ ಮೂಲಕ ವಿವಿಧ ಭೂಪ್ರದೇಶಗಳಲ್ಲಿ ಎಲೆಕ್ಟ್ರಿಕ್ ಬಸ್ಗಳ ಸ್ಥಿತಿಸ್ಥಾಪಕತ್ವವನ್ನು ಪ್ರದರ್ಶಿಸುತ್ತದೆ. ಈ ದಂಡಯಾತ್ರೆಯು ಕೇವಲ ರೆಕಾರ್ಡ್-ಬ್ರೇಕಿಂಗ್ ಸಾಧನೆಗಿಂತ ಹೆಚ್ಚು; ಇದು ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಸಂಕೇತಿಸುತ್ತದೆ. 200+ ನಗರಗಳು ಮತ್ತು ಪಟ್ಟಣಗಳನ್ನು ಹಾದು ಮೂಲಕ, ಈ ಪ್ರಯಾಣವು ಸ್ವಚ್ಛವಾದ ಪ್ರಯಾಣದ ವಿಧಾನಗಳ ಬಗ್ಗೆ ಜಾಗೃತಿ ಮೂಡಿಸುವ ಮತ್ತು ಇ-ಕೆ2ಕೆ ಬಸ್‌ಗಳಿಗೆ ಪರಿವರ್ತನೆಯನ್ನು ಪ್ರೇರೇಪಿಸುವ ಗುರಿಯನ್ನು ಹೊಂದಿದೆ. ವಿವಿಧ ಪರಿಣಾಮಕಾರಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ, ನಿಜವಾಗಿಯೂ ಒಳ್ಳೆಯದನ್ನು ಮಾಡುವ ಇ-ಬಸ್ನ ಮನೋಭಾವವನ್ನು ಸಾಕಾರಗೊಳಿಸುತ್ತದೆ ಎಂದರು.

# ಹಿಂದೂಗಳ ಸುರಕ್ಷತೆ ಬಗ್ಗೆ ಕಳವಳ ವ್ಯಕ್ತಪಡಿಸಿದ ಕೆನಡಾದ ಸಂಸದ

**ಒಟ್ಟಾವಾ:** ಭಾರತ ಮತ್ತು ಕೆನಡಾ ನಡುವೆ ನಡೆಯುತ್ತಿರುವ ಉದ್ವಿಗ್ನತೆಯ ನಡುವೆ ಖಲಿಸ್ತಾನಿ ಭಯೋತ್ಪಾದಕ ಗುರುಪತ್ವಂತ್ ಸಿಂಗ್ ಪನ್ನು ಭಾರತ ಹಾಗೂ ಹಿಂದೂಗಳ ಮೇಲೆ ಬೆದರಿಕೆ ಹಾಕುವುದನ್ನು ಮುಂದುವರಿಸಿದ್ದಾನೆ. ಈ ಹಿನ್ನೆಲೆ ಭಾರತೀಯ ಮೂಲದ, ಕೆನಡಾದ ಸಂಸತ್ತಿನ ಹಿಂದೂ ಸದಸ್ಯ ಚಂದ್ರ ಆರ್ಯ ಕೆನಡಾದಲ್ಲಿ ವಾಸಿಸುವ ಹಿಂದೂಗಳ ಸುರಕ್ಷತೆ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.



ಇತ್ತೀಚೆಗಷ್ಟೇ ಹೌಸ್ ಆಫ್ ಕಾಮನ್ಸ್ ನಲ್ಲಿ ನೇಪಿಯನ್ ಸಂಸದ ಚಂದ್ರ ಆರ್ಯ ಅವರಿಗೆ ಪನ್ನು ಬೆದರಿಕೆ ಹಾಕಿದ್ದು, ಇದರ ಬೆನ್ನಲ್ಲೇ ಅವರ ಭದ್ರತೆಯನ್ನು ಮತ್ತಷ್ಟು ಹೆಚ್ಚಿಸಲಾಗಿದೆ. ಇದೀಗ ಕಳವಳ ವ್ಯಕ್ತಪಡಿಸಿರುವ ಸಂಸದರು, ಒಬ್ಬ ಸಂಸದನಾಗಿ ನಾನು ಖಲಿಸ್ತಾನಿಗಳಿಂದ ಬೆದರಿಕೆಯನ್ನು ಎದುರಿಸಿದ್ದೇನೆ. ನನ್ನ ವಿರುದ್ಧ ಖಲಿಸ್ತಾನಿ ಪ್ರತಿಭಟನಾಕಾರರು ಅಪಾಯಕಾರಿ ಪ್ರದರ್ಶನ ನಡೆಸಿದ ಹಿನ್ನೆಲೆ ಕಳೆದ ವಾರ ಹಿಂದೂ ಕಾರ್ಯಕ್ರಮವೊಂದರಲ್ಲಿ ನಾನು ಭಾಗವಹಿಸಲು ಆರ್‌ಸಿಎಂಪಿ ರಕ್ಷಣೆಯನ್ನು ಪಡೆಯಬೇಕಾಯಿತು ಎಂದು ತಿಳಿಸಿದ್ದಾರೆ. ಖಲಿಸ್ತಾನಿಗಳ ಹಿಂಸಾತ್ಮಕ ಉಗ್ರವಾದದ ಗಂಭೀರ ಸಮಸ್ಯೆಯೊಂದಿಗೆ ಕೆನಡಾ ದೀರ್ಘ ಕಾಲದಿಂದ ಹೋರಾಡುತ್ತಿದೆ. ಕೆನಡಾದಲ್ಲಿ ಯಾವುದೇ ರೂಪದಲ್ಲಿ ವಿದೇಶಿ ಗುಂಪುಗಳ ಕ್ರಮ ಅಥವಾ ಒಳಗೊಳ್ಳುವಿಕೆ ಸ್ವೀಕಾರಾರ್ಹವಲ್ಲ ಎಂಬುದನ್ನು ಸ್ಪಷ್ಟಪಡಿಸುತ್ತೇನೆ. ಕೆನಡಿಯನ್ನರಾಗಿ ಈ ದೇಶ ಇತರ ದೇಶಗಳ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡುವುದನ್ನು ನಾನು ಬಯಸುವುದಿಲ್ಲ. ಅದೇ ರೀತಿ ಖಲಿಸ್ತಾನಿ ಉಗ್ರವಾದಕ್ಕೆ ಸಂಬಂಧಿಸಿದಂತೆ ಕೆನಡಾ ದೇಶೀಯ ವ್ಯವಹಾರಗಳಲ್ಲಿ ವಿದೇಶಿ ಸರ್ಕಾರಗಳು ಮಧ್ಯಪ್ರವೇಶಿಸುವುದನ್ನು ನಾವು ಬಯಸುವುದಿಲ್ಲ ಎಂದಿದ್ದಾರೆ.

# ಹಮಾಸ್ ನಾಯಕನ ಹತ್ಯೆ - ಜಾಗತಿಕ ನಾಯಕರಿಂದ ಪ್ರಶಂಸೆ.!

**ಇಸ್ರೇಲ್ :** ಕಳೆದ ವರ್ಷ ಇಸ್ರೇಲ್ ಮೇಲೆ ಹಮಾಸ್ ನಡೆಸಿದ ಬೀಕರ ದಾಳಿಯ ಹಿಂದಿನ ಮಾಸ್ಟರ್ ಮೈಂಡ್ ಆಗಿದ್ದ ಯಾಹ್ಯಾ ಸಿನ್ವಾರ್ ನನ್ನು ಇಸ್ರೇಲ್ ಹೊಡೆದುರುಳಿಸಿದ್ದು, ಇದೀಗ ವಿಶ್ವದಾದ್ಯಂತ ಪ್ರಶಂಸೆಯ ಮಹಾಪೂರವೆ ಹರಿದು ಬಂದಿದೆ. ಗಾಜಾ ಪಟ್ಟಿಯಲ್ಲಿ ಐಡಿಎಫ್ ಯೋಧರು ನಡೆಸಿದ ಸೇನಾ ಕಾರ್ಯಾಚರಣೆಯಲ್ಲಿ ಹಮಾಸ್ ನ ಮೂವರು ಭಯೋತ್ಪಾದಕರು ಕೊಲ್ಲಲ್ಪಟ್ಟರು ಎಂದು ಇಸ್ರೇಲ್ ಹೇಳಿಕೊಂಡಿದೆ. ಈ ಪೈಕಿ ಓರ್ವ ಯಾಹ್ಯಾ ಸಿನ್ವಾರ್ ಆಗಿದ್ದು, ಈ ಹಂತದಲ್ಲಿ ಭಯೋತ್ಪಾದಕರ ಗುರುತನ್ನು ಖಚಿತಪಡಿಸಲು ಸಾಧ್ಯವಿಲ್ಲ ಎಂದು ಇಸ್ರೇಲಿ ರಕ್ಷಣಾ ಪಡೆ ಹೇಳಿದೆ. ಇನ್ನು ಈ ಬಗ್ಗೆ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಟ್ವೀಟ್ ಮಾಡಿ, ಅಕ್ಟೋಬರ್ 7 ರ ಭಯೋತ್ಪಾದಕ ದಾಳಿ ಮತ್ತು ಬರ್ಬರ ಕೃತ್ಯಗಳಿಗೆ ಯಾಹ್ಯಾ ಸಿನ್ವಾರ್ ಪ್ರಮುಖ ಹೊಣೆಗಾರರಾಗಿದ್ದರು. ಇಂದು, ನಮ್ಮ 48 ದೇಶವಾಸಿಗಳು ಮತ್ತು ಅವರ ಪ್ರೀತಿಪಾತ್ರರು ಸೇರಿದಂತೆ ಸಂತ್ರಸ್ತರ ಭಾವನೆಗಳ ಬಗ್ಗೆ ನಾನು ಯೋಚಿಸುತ್ತೇನೆ ಎಂದರು. ಇದರ ಜೊತೆ ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಪ್ರತಿಕ್ರಿಯಿಸಿದ್ದು, ಹಮಾಸ್ ನಾಯಕನ ಹತ್ಯೆಯಿಂದ ಹಲವಾರು ದೇಶಗಳಿಗೆ ಸ್ವತಂತ್ರ ಬಂದಿದೆ. ಇಸ್ರೇಲ್ ತನ್ನನ್ನು ತಾನು ರಕ್ಷಣೆ ಮಾಡಿಕೊಳ್ಳುವ ಹಕ್ಕನ್ನು ಹೊಂದಿದೆ. ಹಮಾಸ್ ನಲ್ಲಿದ್ದ ಕೆಟ್ಟ ಜನರು ನಾಶವಾದರು, ಅದರ ಜೊತೆ ನಾಯಕತ್ವವನ್ನು ಕೂಡ ತೆಗೆದುಹಾಕಲಾಗಿದೆ. ಈ ಘಟನೆಯಿಂದ ಹಮಾಸ್ ನ ಒತ್ತೆಯಾಳುಗಳನ್ನು ಬಿಡುಗಡೆ ಮಾಡಲಾಗುತ್ತದೆ, ಗಾಜಾದಲ್ಲಿ ನೋವು ಕೊನೆಗೊಳ್ಳುತ್ತದೆ ಮತ್ತು ಪ್ಯಾಲೇಸ್ಟಿನಿಯನ್ ಜನರು ತಮ್ಮ ಘನತೆ, ಭದ್ರತೆ, ಸ್ವಾತಂತ್ರ್ಯದ ಹಕ್ಕನ್ನು ಅರಿತುಕೊಳ್ಳಬಹುದು. ಮತ್ತು ಸ್ವಯಂ ನಿರ್ಣಯ ತೆಗೆದುಕೊಳ್ಳಬಹುದು ಎಂದು ಹ್ಯಾರಿಸ್ ಬರೆದುಕೊಂಡಿದ್ದಾರೆ.

# ಇಸ್ರೇಲ್, ಜಗತ್ತಿಗೆ ಇದು ಒಳ್ಳೆಯ ದಿನ: ಹಮಾಸ್ ಮುಖ್ಯಸ್ಥನ ಹತ್ಯೆಗೆ ಅಮೆರಿಕ ಸಂತಸ

**ವಾಷಿಂಗ್ಟನ್:** ಕಳೆದ ವರ್ಷ ಅಕ್ಟೋಬರ್ 7 ರ ದಾಳಿಯ ಹಿಂದಿನ ಮಾಸ್ಟರ್ ಮೈಂಡ್ ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವಾರ್ ಹತ್ಯೆಗೆ ಅಮೆರಿಕ ಸಂತಸ ವ್ಯಕ್ತಪಡಿಸಿದೆ. 'ಇದು ಇಸ್ರೇಲ್ ಮತ್ತು ಜಗತ್ತಿಗೆ ಒಳ್ಳೆಯ ದಿನ' ಎಂದು ಅಮೆರಿಕ ಅಧ್ಯಕ್ಷ ಜೋ ಬೈಡೆನ್ ಪ್ರತಿಕ್ರಿಯಿಸಿದ್ದಾರೆ. ಹಮಾಸ್ ನಾಯಕರನ್ನು ಬೆನ್ನಟ್ಟಲು ಅಮೆರಿಕದ ಗುಪ್ತಚರವು ಇಸ್ರೇಲ್ ರಕ್ಷಣಾ ಪಡೆಗಳಿಗೆ ಸಹಾಯ ಮಾಡಿದೆ ಎಂದು ಅಧ್ಯಕ್ಷ ಬೈಡೆನ್ ಉಲ್ಲೇಖಿಸಿದ್ದಾರೆ. ಭಯೋತ್ಪಾದಕರನ್ನು ನಿರ್ಮೂಲನೆ ಮಾಡಲು ಇಸ್ರೇಲ್‌ಗೆ ಎಲ್ಲ ಹಕ್ಕು ಇದೆ ಎಂದು ಅವರು ಪುನರುಚ್ಚರಿಸಿದ್ದಾರೆ. ಕಳೆದ ವರ್ಷ ಅಕ್ಟೋಬರ್ 7 ರಂದು ಇಸ್ರೇಲ್ ಮೇಲಿನ ಹಮಾಸ್ ದಾಳಿಯ ಮಾಸ್ಟರ್‌ಮೈಂಡ್‌ನ ಹತ್ಯೆಯು, ಜಗತ್ತಿನಲ್ಲಿ ಎಲ್ಲಿಯೂ ಯಾವುದೇ ಭಯೋತ್ಪಾದಕರು ಎಷ್ಟು ಸಮಯ ತೆಗೆದುಕೊಂಡರೂ ನ್ಯಾಯದಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಮತ್ತೊಮ್ಮೆ ಸಾಬೀತುಪಡಿಸಿದೆ ಎಂದು ಯುಎಸ್ ಅಧ್ಯಕ್ಷ ತಿಳಿಸಿದ್ದಾರೆ.

# ಹಸೀನಾ ವಿರುದ್ಧ ಬಂಧನ ವಾರಂಟ್ ಜಾರಿ

ಢಾಕ : ವಿದ್ಯಾರ್ಥಿಗಳ ವ್ಯಾಪಕ ಪ್ರತಿಭಟನೆಯ ಬಳಿಕ ಆಗಸ್ಟ್‌ನಲ್ಲಿ ಪದಚ್ಯುತಗೊಂಡಿದ್ದ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ವಿರುದ್ಧ ಬಾಂಗ್ಲಾದೇಶದ ನ್ಯಾಯಾಲಯ ಬಂಧನ ವಾರಂಟ್ ಜಾರಿಗೊಳಿಸಿರುವುದಾಗಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ.

ಬಾಂಗ್ಲಾದೇಶದಿಂದ ಭಾರತಕ್ಕೆ ಪಲಾಯನ ಮಾಡಿದ್ದ ಶೇಖ್ ಹಸೀನಾ ಆ ಬಳಿಕ ಸಾರ್ವಜನಿಕವಾಗಿ ಕಾಣಿಸಿಕೊಂಡಿಲ್ಲ.

ಅವರನ್ನು ಬಂಧಿಸಿ ನವೆಂಬರ್ 18ರಂದು ನ್ಯಾಯಾಲಯದ ಎದುರು ಹಾಜರುಪಡಿಸಲು ನ್ಯಾಯಾಲಯ ಆದೇಶಿಸಿದೆ. ಜುಲೈ ಮತ್ತು ಆಗಸ್ಟ್‌ನ ಪ್ರತಿಭಟನೆ ಸಂದರ್ಭ ಹತ್ಯಾಕಾಂಡ ಮತ್ತು ಮಾನವೀಯತೆಯ ವಿರುದ್ಧ ಅಪರಾಧ ಎಸಗಿದವರು ಹಸೀನಾ ಅವರ ನಿಯಂತ್ರಣದಲ್ಲಿದ್ದರು ಎಂದು ಬಾಂಗ್ಲಾದೇಶದ ಅಂತರಾಷ್ಟ್ರೀಯ ಅಪರಾಧ ನ್ಯಾಯಮಂಡಳಿಯ ಮುಖ್ಯ ಪ್ರಾಸಿಕ್ಯೂಟರ್ ಮುಹಮ್ಮದ್ ತಾಜುಲ್ ಇಸ್ಲಾಂ ಹೇಳಿದ್ದಾರೆ.

ಮಾನವೀಯತೆಯ ವಿರುದ್ಧದ ಅಪರಾಧ ಪ್ರಕರಣದಡಿ ಹಸೀನಾ ವಿರುದ್ಧ ಬಂಧನ ವಾರಂಟ್ ಜಾರಿಯಾಗಿರುವುದಾಗಿ ವರದಿಯಾಗಿದೆ. ಹಸೀನಾ ಅವರ 15 ವರ್ಷದ ಆಳ್ವಿಕೆಯಲ್ಲಿ ಅವರ ರಾಜಕೀಯ ವಿರೋಧಿಗಳ ಸಾಮೂಹಿಕ ಬಂಧನ ಮತ್ತು ಕಾನೂನುಬಾಹಿರ ಹತ್ಯೆಗಳು ಸೇರಿದಂತೆ ವ್ಯಾಪಕವಾದ ಮಾನವ ಹಕ್ಕುಗಳ ಉಲ್ಲಂಘನೆಯ ವರದಿಗಳಿವೆ. ಹಸೀನಾ ಅವರ ಅವಾಮಿ ಲೀಗ್ ಪಕ್ಷದ ಮಾಜಿ ಪ್ರಧಾನ ಕಾರ್ಯದರ್ಶಿ ಒಬೈದುಲ್ ಖಾದರ್ ಹಾಗೂ ಇತರ 44 ಮಂದಿಯ ವಿರುದ್ಧವೂ ಬಂಧನ ವಾರಂಟ್ ಜಾರಿಯಾಗಿರುವುದಾಗಿ ವರದಿಯಾಗಿದೆ.



# ಕೆನಡಾ ಪ್ರಧಾನಿ ಕಚೇರಿಯೊಡನೆ ಪನ್ನೂನ್ ಸಂಘಟನೆ ಸಂಪರ್ಕ

**ನ್ಯೂಯಾರ್ಕ್:** ಅಮೆರಿಕ ಮೂಲದ ಸಂಘಟನೆ 'ಸಿಖ್ಸ್ ಫಾರ್ ಜಸ್ಟಿಸ್ (ಎಸ್‌ಎಫ್‌ಜೆ) ಕೆನಡಾ ಪ್ರಧಾನಿ ಜಸ್ಟಿನ್ ಟ್ರೂಡೊ ಅವರ ಕಚೇರಿಯ ಜತೆ ಸಂಪರ್ಕದಲ್ಲಿರುವುದನ್ನು ಖಾಲಿಸ್ತಾನ್ ಪ್ರತ್ಯೇಕತಾವಾದಿ ಮುಖಂಡ, ಎಸ್‌ಎಫ್‌ಜೆ ಸಂಸ್ಥಾಪಕ ಗುರುಪತ್ವಂತ್ ಸಿಂಗ್ ಪನ್ನೂನ್ ಒಪ್ಪಿಕೊಂಡಿರುವುದಾಗಿ ಕೆನಡಾದ ಸಿಬಿಸಿ ನ್ಯೂಸ್ ವರದಿ ಮಾಡಿದೆ. ಕೆನಡಾದಲ್ಲಿ ಭಾರತೀಯ ರಾಜತಾಂತ್ರಿಕ ನಿಯೋಗದ ಗೂಢಚಾರಿಕೆ ನೆಟ್ವರ್ಕ್ ಬಗ್ಗೆ ಟ್ರೂಡೊಗೆ ತಾನು ಮಾಹಿತಿ ನೀಡಿದ್ದೇನೆ. ಕಳೆದ ಮೂರು ವರ್ಷಗಳಲ್ಲಿ ಎಸ್‌ಎಫ್‌ಜೆ ಕೆನಡಾ ಪ್ರಧಾನಿಯ ಕಚೇರಿಯ ಜತೆ ಸಂವಹನ ನಡೆಸುತ್ತಿದೆ. ಕೆಲವು ವರ್ಷಗಳಿಂದ ಕೆನಡಾ ಸರಕಾರಕ್ಕೆ ಮಾಹಿತಿ ಒದಗಿಸುತ್ತಿದ್ದೆವು. ಟ್ರೂಡೊ ಅಧಿಕಾರಕ್ಕೆ ಬಂದ ಮೇಲೆ ಧನಾತ್ಮಕ ಬೆಳವಣಿಗೆ ನಡೆದಿದ್ದು ನ್ಯಾಯದೆಡೆಗೆ ಒಂದು ಹೆಜ್ಜೆ ಮುಂದೆ ಸಾಗಲಾಗಿದೆ. ಭಾರತದ ವಿರುದ್ಧದ ಕೆನಡಾದ ಆರೋಪಗಳು ನ್ಯಾಯ, ಕಾನೂನು ಮತ್ತು ರಾಷ್ಟ್ರೀಯ ಭದ್ರತೆಗೆ ಕೆನಡಾ ಸರಕಾರದ ಅಚಲವಾದ ಬದ್ಧತೆಯನ್ನು ಪ್ರದರ್ಶಿಸಿವೆ ಎಂದು ಪನ್ನೂನ್ ಹೇಳಿರುವುದಾಗಿ ವರದಿಯಾಗಿದೆ. ಭಾರತದ ರಾಜತಾಂತ್ರಿಕರನ್ನು ಕೆನಡಾ ಉಚ್ಚಾಟಿಸಿರುವುದು ಕೇವಲ ಆರಂಭ ಮಾತ್ರ. ವ್ಯಾಂಕೋವರ್ ಮತ್ತು ಟೊರಂಟೋದಲ್ಲಿರುವ ಭಾರತದ ಕಾನ್ಸುಲೇಟ್‌ಗಳನ್ನು ಶಾಶ್ವತವಾಗಿ ಮುಚ್ಚಬೇಕು. ಉಚ್ಚಾಟಿಸಲ್ಪಟ್ಟ ರಾಜತಾಂತ್ರಿಕರ ಸ್ಥಾನದಲ್ಲಿ ಮತ್ತೊಬ್ಬರನ್ನು ಭಾರತ ಕಳುಹಿಸಿದರೆ ಈ ಗೂಢಚಾರಿಕೆ ಜಾಲ ಮತ್ತೆ ಸಕ್ರಿಯವಾಗುತ್ತದೆ. ಇದು ಕೆನಡಾದ ಸಾರ್ವಭೌಮತ್ವಕ್ಕೆ ನೇರ ಸವಾಲಾಗಿದೆ ಎಂದು ಪನ್ನೂನ್ ಆಗ್ರಹಿಸಿದ್ದಾನೆ.



# ಡಿಜೆ ಸೌಂಡ್ ಗೆ 13 ವರ್ಷದ ಬಾಲಕ ಬಲಿ

**ಭೋಪಾಲ್:** 13 ವರ್ಷದ ಬಾಲಕನೊಬ್ಬ ಡಿಜೆ ಸೌಂಡ್ ಗೆ ಡಾನ್ಸ್ ಮಾಡುತ್ತಿದ್ದಾಗಲೇ ಕುಸಿದು ಬಿದ್ದು ಹೃದಯಸ್ತಂಭನದಿಂದ ಸಾವನ್ನಪ್ಪಿರುವ ಘಟನೆ ಮಧ್ಯಪ್ರದೇಶದ ಭೋಪಾಲ್ ನಲ್ಲಿ ನಡೆದಿದೆ.

13 ವರ್ಷದ ಸಮರ್ ಮೃತ ಬಾಲಕ. ದುರ್ಗಾ ಮೂರ್ತಿ ವಿಸರ್ಜನೆ ಮೆರವಣಿಗೆ ಡಿಜೆ ಸೌಂಡ್ ಹಾಗೂ ಕಲಾತಂಡಗಳ ನೃತ್ಯದೊಂದಿಗೆ ಬಾಲಕನ ಮನೆಯ ಮುಂದೆ ಸಾಗಿತ್ತು.

ಈ ವೇಳೆ ಮನೆಯಿಂದ ಹೊರ ಬಂದ ಬಾಲಕ ಕಿವಿಗಡಚಿಕ್ಕುವ ಡಿಜೆ ಸೌಂಡ್ ಗೆ ತಾನೂ ಹೆಜ್ಜೆ ಹಾಕಲು ಆರಂಭಿಸಿದ್ದಾನೆ. ಡಾನ್ಸ್ ಮಾಡುತ್ತಲೇ ಏಕಾಏಕಿ ಕುಸಿದುಬಿದ್ದ ಬಾಲಕ ಕಾರ್ಡಿಯಾಕ್ ಅರೆಸ್ಟ್‌ನಿಂದ ಸಾವನ್ನಪ್ಪಿದ್ದಾನೆ.

ಮೆರವಣಿಗೆಯಲ್ಲಿ ಸಾಗಿದ್ದ ಜನರು ಬಾಲಕ ಸಮರ್ ಕುಸಿದು ಬಿದ್ದುದನ್ನು ಗಮನಿಸದೇ ಡಿಜೆ ಸೌಂಡ್ ಗೆ ಡಾನ್ಸ್ ಮಾಡುತ್ತಲೇ ಇದ್ದರು. ಈ ವೇಳೆ ಬಾಲಕನ ತಾಯಿ ತನ್ನ ಮಗ ಕೆಳಗೆ ಬಿದ್ದಿರುವುದನ್ನು ಗಮನಿಸಿ ಸಹಾಯಕ್ಕಾಗಿ ಕೂಗಿಕೊಂಡಿದ್ದಾರೆ. ತಕ್ಷಣ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೆ ಬಾಲಕ ಅಷ್ಟರಲ್ಲೇ ಉಸಿರು ಚೆಲ್ಲಿದ್ದಾನೆ. ಕಾರ್ಡಿಯಾಕ್ ಅರೆಸ್ಟ್ ನಿಂದ ಬಾಲಕ ಸಾವನ್ನಪ್ಪಿದ್ದಾಗಿ ವೈದ್ಯರು ತಿಳಿಸಿದ್ದಾರೆ.

ಬಾಲಕನ ತಾಯಿ ಹೇಳುವ ಪ್ರಕಾರ ಬಾಲಕನಿಗೆ ಸ್ವಲ್ಪ ಹೃದಯ ಸಂಬಂಧಿ ಸಮಸ್ಯೆಯಿತ್ತಾದರೂ ಆತ ಆರೋಗ್ಯವಾಗಿಯೇ ಇದ್ದ. ಆದರೆ ಬಾಲಕನ ತಂದೆ ಹೇಳುವ ಪ್ರಕಾರ ಭಾರಿ ಸದ್ದು-ಗದ್ದಲ, ಡಿಜೆ ಸೌಂಡ್ ನೊಂದಿಗೆ ಮೆರವಣಿಗೆ ಸಾಗಿತ್ತು, ಹಲವು ಬಾರಿ ಡಿಜೆ ಸೌಂಡ್ ಕಡಿಮೆ ಮಾಡುವಂತೆ ಕೇಳಿಕೊಂಡರೂ ಮೆರವಣಿಗೆ ಆಯೋಜಕರು ಸೌಂಡ್ ಕಡಿಮೆ ಮಾಡಿಲ್ಲ. ಕಿವಿಗಡಚಿಕ್ಕುವ ಡಿಜೆ ಸೌಂಡ್ ಗೆ ಆಘಾತಕ್ಕೊಳಗಾಗಿ ತನ್ನ ಮಗ ಕೊನೆಯುಸಿರೆಳೆದಿದ್ದಾನೆ ಎಂದು ಕಣ್ಣೀರಿಟ್ಟಿದ್ದಾರೆ.



# ರತನ್ ಟಾಟಾ ಚಿತಾ ಭಸ್ಮವನ್ನು ಅರಬ್ಬಿ ಸಮುದ್ರದಲ್ಲಿ ವಿಸರ್ಜಿಸಲು ನಿರ್ಧಾರ

**ಮುಂಬೈ:** ಖ್ಯಾತ ಕೈಗಾರಿಕೋದ್ಯಮಿ ರತನ್ ಟಾಟಾ ಅವರ ಚಿತಾ ಭಸ್ಮವನ್ನು ಅರಬ್ಬಿ ಸಮುದ್ರದಲ್ಲಿ ವಿಸರ್ಜಿಸಲು ನಿರ್ಧರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಅನಾರೋಗ್ಯದಿಂದ ಮುಂಬೈನ ಬ್ರೀಚ್ ಕ್ಯಾಂಡಿ ಆಸ್ಪತ್ರೆಗೆ ದಾಖಲಾಗಿದ್ದ ಟಾಟಾ ಸಮೂಹದ ಮುಖ್ಯಸ್ಥ ರತನ್ ಟಾಟಾ (86) ಅ.9 ರಂದು ಕೊನೆಯುಸಿರೆಳೆದರು. ಅ.10 ರಂದು ಅಂತಿಮ ವಿಧಿವಿಧಾನಗಳನ್ನು ಮುಂಬೈನ ಚಿತಾಗಾರದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗಿತ್ತು.

ಇದೀಗ ಅವರ ಆಸೆಯಂತೆ ಅವರ ಚಿತಾ ಭಸ್ಮವನ್ನು ಅರಬ್ಬಿ ಸಮುದ್ರದಲ್ಲಿ ವಿಸರ್ಜಿಸುವುದಾಗಿ ಟಾಟಾ ಕುಟುಂಬ ನಿರ್ಧಾರ ಕೈಗೊಂಡಿದೆ. ಮುಂಬೈನ ಗೇಟ್ ವೇ ಆಫ್ ಇಂಡಿಯಾದಿಂದ ಹಡಗಿನಲ್ಲಿ ಮೆರವಣಿಗೆಯ ಮೂಲಕ ಚಿತಾ ಭಸ್ಮವನ್ನು ವಿಸರ್ಜಿಸಲಾಗುವುದು. ಈ ಸಂದರ್ಭದಲ್ಲಿ ಅವರ ಕುಟುಂಬ, ಅವರ ಸ್ನೇಹಿತರು ಸೇರಿದಂತೆ ಇನ್ನಿತರರು ಭಾಗಿಯಾಗಲಿದ್ದಾರೆ ಎಂದು ಮೂಲಗಳು ತಿಳಿಸಿವೆ.ರತನ್ ಟಾಟಾ ಮುಂಬೈ ನಗರದೊಂದಿಗೆ ಅವಿನಾಭಾವ ಸಂಬಂಧವನ್ನು ಹೊಂದಿದ್ದರು. ಜೊತೆಗೆ ತಮ್ಮ ಜೀವನದ ಬಹುಪಾಲು ದಿನಗಳನ್ನು ಅವರು ಅಲ್ಲಿಯೇ ಕಳೆದಿದ್ದು, ಟಾಟಾ ಗ್ರೂಪ್ಸ್ ಎಂಬ ವ್ಯವಹಾರ ಸಾಮ್ರಾಜ್ಯಕ್ಕೆ ಮುಂಬೈನಲ್ಲಿ ಅಡಿಪಾಯ ಹಾಕಿದ್ದರು. ಅರಬ್ಬಿ ಸಮುದ್ರದ ನೀರು ಪ್ರಶಾಂತವಾದ ನೀರು. ಒಬ್ಬ ವ್ಯಕ್ತಿಗೆ ಅಂತಿಮ ವಿಶ್ರಾಂತಿಯನ್ನು ನೀಡುತ್ತದೆ ಎಂಬ ಅಭಿಪ್ರಾಯದೊಂದಿಗೆ ಈ ನಿರ್ಧಾರ ಕೈಗೊಳ್ಳಲಾಗಿದೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬಿಗ್ ಬಾಸ್ ಮನೆಯಿಂದ ಲಾಯರ್ ಜಗದೀಶ್, ರಂಜಿತ್ ಹೊರಬಂದಿದ್ದೇಕೆ?

**ಬೆಂಗಳೂರು:** ಕನ್ನಡದ ಬಿಗ್ ಬಾಸ್ ರಿಯಾಲಿಟಿ ಶೋದಿಂದ ಲಾಯರ್ ಜಗದೀಶ್ ಮತ್ತು ನಟ ರಂಜಿತ್ ಹೊರಬಂದಿದ್ದು, ಮನೆಯ ನಿಯಮ ಉಲ್ಲಂಘಿಸಿದ ಹಿನ್ನಲೆಯಲ್ಲಿ ಇಬ್ಬರನ್ನೂ ಮನೆಯಿಂದ ಹೊರದಬ್ಬಲಾಗಿದೆ ಎನ್ನಲಾಗಿದೆ.

ಕನ್ನಡ ಕಿರುತೆರೆಯ ಅತಿ ದೊಡ್ಡ ರಿಯಾಲಿಟಿ ಶೋ ಬಿಗ್ ಬಾಸ್ ಮತ್ತೊಂದು ವಿವಾದಕ್ಕೆ ಗುರಿಯಾಗಿದ್ದು, ನಟ ಕಿಚ್ಚ ಸುದೀಪ್ ನಿರೂಪಣೆಯ ರಿಯಾಲಿಟಿ ಶೋದಲ್ಲಿ ಹೊಡೆದಾಡಿಕೊಂಡ ಹಿನ್ನೆಲೆಯಲ್ಲಿ ಜಗದೀಶ್ ಮತ್ತು ರಂಜಿತ್ ಇಬ್ಬರನ್ನೂ ಬಿಗ್‌ಬಾಸ್ ಮನೆಯಿಂದ ಹೊರ ಕಳುಹಿಸಿದ್ದಾರೆ.

**ಇಷ್ಟಕ್ಕೂ ಆಗಿದ್ದೇನು?:** ಮೂಲಗಳ ಪ್ರಕಾರ, ಬಿಗ್‌ಬಾಸ್ ಮನೆಯಲ್ಲಿ ನಿನ್ನೆಯಿಂದಲೂ ಸ್ಪರ್ಧಿಗಳ ಮಧ್ಯೆ ಅತಿರೇಕದ ಜಗಳ ನಡೆಯುತ್ತಿತ್ತು. ಜಗದೀಶ್, ಉಗ್ರಂ ಮಂಜು ಹಾಗೂ ರಂಜಿತ್ ಮಧ್ಯೆ ಮಾತಿಗೆ ಮಾತು ಬೆಳೆದು ಜಗಳ ವಿಕೋಪಕ್ಕೆ ತಿರುಗಿದೆ. ನಿನ್ನೆ ರಾತ್ರಿ ರಂಜಿತ್ ಮತ್ತು ಜಗದೀಶ್ ಹಾಗೂ ಉಗ್ರಂ ಮಂಜು ಮತ್ತು ಜಗದೀಶ್ ಮಧ್ಯೆ ಜೋರು ಗಲಾಟೆಯಾಗಿದೆ. ಬಿಗ್‌ಬಾಸ್ ಶೋ ಬಗ್ಗೆ ಜಗದೀಶ್ ಅವರು ಅವಾಚ್ಯವಾಗಿ ಮಾತನಾಡುತ್ತಿದ್ದು ಈ ಬಗ್ಗೆ ಎಲ್ಲಾ ಸ್ಪರ್ಧಿಗಳು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ವಾಗ್ವಾದದ ಮಧ್ಯೆ ಮಾನಸ ವಿಚಾರವಾಗಿ ರಂಜಿತ್ ಮತ್ತು ಜಗದೀಶ್ ಮಧ್ಯೆ, ಜಗಳವಾಗಿದ್ದು ಅತಿರೇಕದ ಹಂತಕ್ಕೆ ಹೋಗಿದೆ. ಇದಾದ ಮೇಲೆ ರಂಜಿತ್ ಮತ್ತು ಜಗದೀಶ್ ಇಬ್ಬರು ಕೈ ಕೈ ಮಿಲಾಯಿಸಿಕೊಂಡಿದ್ದು ಈ ವೇಳೆ ಬಿಗ್ ಬಾಸ್ ಮನೆಯಿಂದ ಅವರನ್ನು ಹೊರಹಾಕಲಾಗಿದೆ ಎನ್ನಲಾಗಿದೆ. ಇನ್ನು ನಿನ್ನೆಯ ಎಪಿಸೋಡ್‌ನಲ್ಲೂ ಗಲಾಟೆಯೇ ಹೈಲೈಟ್ಸ್ ಆಗಿತ್ತು. ಇಂದು ಬೆಳ್ಳಂಬೆಳಗ್ಗೆ ಕಲರ್ಸ್ ಕನ್ನಡ ಪ್ರೋಮೋ ರಿಲೀಸ್ ಮಾಡಿತ್ತು. ಅದರಲ್ಲಿ ಸ್ಪರ್ಧಿಗಳ ಗಲಾಟೆಗೆ ಸಂಬಂಧಿಸಿದ್ದಾಗಿತ್ತು. ಈ ವೇಳೆ ಬಿಗ್‌ಬಾಸ್ ತುಂಬಾ ಗರಂ ಆಗಿರೋದು ಕಂಡು ಬಂದಿತ್ತು. ಲಾಯರ್ ಜಗದೀಶ್ ವಿರುದ್ಧ ಕೆಲ ಸ್ಪರ್ಧಿಗ ತಿರುಗಿ ಬಿದ್ದಿದ್ದು ಈ ವೇಳೆ ಒಬ್ಬರನೊಬ್ಬರು ಏಕವಚನದಲ್ಲೇ ಬೈದಾಡಿಕೊಂಡಿದ್ದರು. ಕ್ಯಾಪ್ಟನ್



## 'ನಾಮಿನೇಟ್ ಆದವರೇ ಸುಮ್ಮನಿದ್ದಾರೆ, ನಿಂದೇನೋಲೇ'

ಈ ವೇಳೆ ಮಧ್ಯ ಪ್ರವೇಶಿಸಿದ ಮತ್ತೋರ್ವ ಸ್ಪರ್ಧಿ ತ್ರಿವಿಕ್ರಮ್, 'ನಾಮಿನೇಟ್ ಆದವರೇ ಸುಮ್ಮನೆ ಇದ್ದಾರೆ, ನಿಂದೇನು ಲೇ.. ಎಂದಿದ್ದಾರೆ. ಈ ವೇಳೆ ಉಗ್ರಂ ಮಂಜು ಬಂದು ಥೂ ನಿನ್ನ ಯೋಗ್ಯತೆಗೆ, ಹೋಗಲೇ..ಎಂದು ಕಿಡಿಕಾರಿದ್ದಾರೆ. ಈ ರೀತಿ ಹೇಳುವಾಗ ಜಗದೀಶ್ ಹಾಗೂ ಮಂಜು ಇಬ್ಬರು ಫೇಸ್ ಟು ಫೇಸ್ ಇದ್ದರು. ಇದೇ ವೇಳೆ ಬಿಗ್ ಬಾಸ್ ಎಂಟ್ರಿಯಾಗಿದ್ದು ಈ ಕೂಡಲೇ ಸೋಫಾದಲ್ಲಿ ಕುಳಿತುಕೊಳ್ಳಿ ಎಂದು ಹೇಳಿದ್ದಾರೆ. ಹೀಗೆ ಹೇಳುವಾಗಲೂ ಸ್ಪರ್ಧಿಗಳೆಲ್ಲ ಗುಂಪಾಗಿಯೇ ಇದ್ದರು. ಆದರೆ ಬಿಗ್‌ಬಾಸ್ ತುಂಬಾ ಗರಂ ಆದಂತೆ ಕಂಡು ಬಂದಿದೆ. ಸಾಕು, ಯಾರೂ ತುಟಿ, ಪಿಟಿಕ್ ಅನ್ನೋ ಹಾಗಿಲ್ಲ ಎಂದು ಕೋಪದಿಂದ ಹೇಳಿದ್ದರು.

ಶಿಶಿರ್ ಅವರು ತಮ್ಮ ಮೊದಲ ನಾಮಿನೇಷನ್ ಧರ್ಮ ಅವರು ಎಂದು ಹೇಳುತ್ತಾರೆ. ಇದಕ್ಕೆ ಲಾಯರ್ ಜಗದೀಶ್ ಅವರು ನೀವು ಅವರನ್ನು ಟಾರ್ಗೆಟ್ ಮಾಡುತ್ತಿದ್ದೀರಿ ಎಂದು ನನಗನಿಸುತ್ತಿದೆ ಎಂದಿದ್ದಾರೆ. ಈ ವೇಳೆ ಮಾನಸ ಎಲ್ಲದಕ್ಕೂ ಬಾಯಿ ಹಾಕುತ್ತಿರಲ್ಲ ಎಂದು ಜಗದೀಶ್? ಅವರಿಗೆ ಆವಾಜ್ ಹಾಕಿದ್ದಾರೆ. ಆಗ ಮನೆ ಮಂದಿಯೆಲ್ಲ ಎದ್ದು ಜಗಳಕ್ಕೆ ನಿಂತಿದ್ದಾರೆ.

# ಹೊಸ ಅವತಾರದಲ್ಲಿ ನಟಿ ರಚಿತಾ ರಾಮ್

## ಪಡ್ಡೆ ಹುಡುಗರ ನಿದ್ರೆಗೆಡಿಸಿದ ಫೋಟೋ ವೈರಲ್!



ಸ್ಯಾಂಡಲ್‌ವುಡ್ ಡಿಂಪಲ್ ಕ್ವೀನ್ ರಚಿತಾ ರಾಮ್ ಕೆಲವು ದಿನಗಳ ಹಿಂದೆ ಬೆಂಗಳೂರಿನಲ್ಲಿ ನಡೆದ ಚಿನ್ನದ ಮೇಳ ಕಾರ್ಯಕ್ರಮದಕ್ಕೆ ಹೊಸ ಶೈಲಿಯಲ್ಲಿ ಫೋಟೋಶೂಟ್ ಮಾಡಿಸಿದ್ದಾರೆ. ಕನ್ನಡ ಚಿತ್ರರಂಗದ ಲೇಡಿ ಸೂಪರ್ ಸ್ಟಾರ್ ಹೊಸ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಛಾಯಾಗ್ರಹಕ್ಕೆ ಭುವನ್ ಫೋಟೋಗಳನ್ನು ಕ್ಲಿಕ್ ಮಾಡಿದ್ದಾರೆ.

ಕಪ್ಪು ಬಣ್ಣದ ಇಂಡೋವೆಸ್ಟ್ರನ್ ಡ್ರೆಸ್‌ಗೆ ಹಸಿರು ಬಣ್ಣದ ಸ್ಟೋನ್ ಸರವನ್ನು ಧರಿಸಿದ್ದಾರೆ.ಮತ್ತೊಂದು ಕೆಂಪು ಬಣ್ಣದ ಲೆಹೆಂಗಾಗೆ ಸಿಂಪಲ್ ಲುಕ್ ಆಯ್ಕೆ ಮಾಡಿಕೊಂಡಿದ್ದಾರೆ. ಸದ್ಯ ರಚಿತಾ ರಾಮ್ ಶಬರಿ ಸರ್ಚಿಂಗ್ ಫಾರ್ ರಾವಣ, ಲವ್ ಮಿ ಆರ್ ಹೇಟ್ ಮೀ, ಸಂಜು ವೆಡ್ಸ್ ಗೀತಾ 2 ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಸಿನಿಮಾ ಚಿತ್ರೀಕರಣಗಳು ನಡೆಯುತ್ತಿದೆ. ಬುಲ್ ಬುಲ್ ಚಿತ್ರದ ಮೂಲಕ ಬಣ್ಣದ ಪ್ರಪಂಚಕ್ಕೆ ಎಂಟ್ರಿ ಕೊಟ್ಟ ರಚಿತಾ ರಾಮ್ ಯಾಕೆ ಹೆಚ್ಚಾಗಿ ಟ್ರೆಡಿಷನಲ್ ಸೀರೆಯಲ್ಲಿ ಕಾಣಿಸಿಕೊಳ್ಳುವುದು ಎಂದು ಬಹುತೇಕರು ಪ್ರಶ್ನಸುತ್ತಾರೆ. ರಚಿತಾ ರಾಮ್ ಅಪ್ಲೋಡ್ ಮಾಡುವ ಪ್ರತಿಯೊಂದು ಫೋಟೋ ವೈರಲ್ ಆಗುತ್ತದೆ. ರಚಿತಾ ರಾಮ್ ಕನ್ನಡಿಗರ ಮನಸ್ಸಿಗೆ ತುಂಬಾನೇ ಹತ್ತಿರವಾದವರು. ಹೀಗಾಗಿ ಬಹುತೇಕ ಜಾಹೀರಾತು ಸಂಸ್ಥೆಗಳು ರಚ್ಚು ಸಂಪರ್ಕ ಮಾಡುತ್ತಾರೆ. ರಚಿತಾ ರಾಮ್ ಎಷ್ಟೇ ಮಾಡರ್ನ್ ಬಟ್ಟೆ ಧರಿಸಿದ್ದರು ಕೈಯಲ್ಲಿ ಇರುವ ಕೆಂಪು ಮತ್ತು ಕಪ್ಪು ಧಾರಾವನ್ನು ತೆಗೆಯುವುದಿಲ್ಲ. ದೃಷ್ಟಿ ತಡೆಯುವುದಕ್ಕೆ ಈ ದೇವರ ದಾರವನ್ನು ಕಟ್ಟಿಕೊಂಡಿದ್ದಾರೆ. ಸ್ಟಾರ್ ನಟಿಯಾದರೂ ರಚಿತಾ ರಾಮ್ ಹಣೆ ಬೊಟ್ಟು ಮರೆಯುವುದಿಲ್ಲ.ಹಣೆ ಬೊಟ್ಟು ಇಟ್ಟರೆನೇ ಚೆಂದ ಎಂದು ಆಗಾಗ ಹೇಳುತ್ತಿರುತ್ತಾರೆ. ಶೂಟಿಂಗ್ ಇಲ್ಲದ ಸಮಯದಲ್ಲಿ ಕುಂಕುಮ ಮತ್ತು ಗಂಧ ಕೂಡ ಹಣೆಗೆ ಇಟ್ಟುಕೊಳ್ಳುತ್ತಾರೆ.






# ಮದುವೆಯಾದ 12 ವರ್ಷಗಳ ಬಳಿಕ ಚೊಚ್ಚಲ ಮಗುವಿನ ನಿರೀಕ್ಷೆಯಲ್ಲಿ ರಾಧಿಕಾ ಆಪ್ಟೆ

ಬಾಲಿವುಡ್ ಬೆಡಗಿ ರಾಧಿಕಾ ಆಪ್ಟೆ ಅಭಿಮಾನಿಗಳಿಗೆ ಬಿಗ್ ಸರ್ಪ್ರೈಸ್ ನೀಡಿದ್ದಾರೆ. ಮದುವೆಯಾದ 12 ವರ್ಷಗಳ ಬಳಿಕ ಚೊಚ್ಚಲ ಮಗುವಿನ ನಿರೀಕ್ಷೆಯಲ್ಲಿರುವ ಸಿಹಿಸುದ್ದಿ ನೀಡಿದ್ದಾರೆ. ರಾಧಿಕಾ ಆಪ್ಟೆ ಅವರು ಇತ್ತೀಚೆಗೆ ಲಂಡನ್ ಫಿಲ್ಮ್ ಫೆಸ್ಟಿವಲ್ ಸಮಾರಂಭದಲ್ಲಿ ಭಾಗಿಯಾಗಿದ್ದರು. ಈ ವೇಳೆ, ಬೇಬಿ ಬಂಪ್ ತೋರಿಸಿದ್ದಾರೆ. ಈ ಫೋಟೋಗಳನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಇದೀಗ ಮಗುವಿನ ನಿರೀಕ್ಷೆಯಲ್ಲಿರುವ ರಾಧಿಕಾಗೆ ಫ್ಯಾನ್ಸ್, ಸೆಲೆಬ್ರಿಟಿಗಳು ಶುಭಕೋರುತ್ತಿದ್ದಾರೆ. ಅಂದಹಾಗೆ, 2012ರಲ್ಲಿ ಬ್ರಿಟಿಷ್ ಮ್ಯೂಸಿಕ್ ಡೈರೆಕ್ಟರ್ ಬೆನೆಡಿಕ್ಟ್ ಟೇಲರ್ ಅವರನ್ನು ನಟಿ ಮದುವೆಯಾದರು. ಆದರೆ ಈ ಮದುವೆಯ ಬಗ್ಗೆ ಎಲ್ಲೂ ನಟಿ ಬಹಿರಂಗವಾಗಿ ಮಾತನಾಡುತ್ತಿರಲಿಲ್ಲ. ಸದ್ಯ ನಟಿಯ ಪ್ರೆಗ್ನೆನ್ಸಿ ವಿಚಾರ ಅಭಿಮಾನಿಗಳಲ್ಲಿ ಅಚ್ಚರಿ ಮೂಡಿಸಿದೆ.

# ಮಗನ ಲೇಟೆಸ್ಟ್ ಫೋಟೋ ಶೇರ್ ಮಾಡಿದ ಹೆಬ್ಬುಲಿ ನಟಿ



ಕನ್ನಡದ 'ಹೆಬ್ಬುಲಿ' ನಟಿ ಅಮಲಾ ಪೌಲ್ ಅವರು ಸದ್ಯ ಮಗನ ಪಾಲನೆಯಲ್ಲಿ ಬ್ಯುಸಿಯಾಗಿದ್ದಾರೆ. ಸಿನಿಮಾ ಕೆಲಸಗಳ ನಡುವೆ ಮಗನ ಜೊತೆ ನಟಿ ಸಮಯ ಕಳೆಯುತ್ತಿದ್ದಾರೆ. ಗುಂಡಾಗಿರುವ ಮುದ್ದಾದ ಮಗನ ಮುದ್ದಾದ ಫೋಟೋವೊಂದನ್ನು ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. ಜೂನ್‌ನಲ್ಲಿ ಅಮಲಾ ಗಂಡು ಮಗುವಿಗೆ ಜನ್ಮ ನೀಡಿದರು. ಮಗನ ಎಂಟ್ರಿಯಿಂದ ನಟಿಯ ಮನೆಯಲ್ಲಿ ಸಂಭ್ರಮ ಮನೆ ಮಾಡಿದೆ. ಇದೀಗ ಮುದ್ದಾಗಿರುವ ಮಗನ ಜೊತೆಗಿನ ಲೇಟೆಸ್ಟ್ ಫೋಟೋವೊಂದನ್ನು ನಟಿ ಹಂಚಿಕೊಂಡಿದ್ದಾರೆ. ಅಮಲಾ ಮಗನ ಲುಕ್‌ಗೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಇತ್ತೀಚೆಗೆ ಓಣಂ ಹಬ್ಬದಂದು ಮಗನ ಮುಖವನ್ನು ಮೊದಲ ಬಾರಿಗೆ ರಿವೀಲ್ ಮಾಡಿದ್ದರು. ಹೊಸ ಫೋಟೋಶೂಟ್‌ನಲ್ಲಿ ದೋಣಿಯಲ್ಲಿ ಕುಳಿತು ಪತಿ ಮತ್ತು ಮಗನ ಜೊತೆ ನಟಿ ಕ್ಯಾಮೆರಾಗೆ ಪೋಸ್ ನೀಡಿದ್ದರು. ಮತ್ತೊಂದು ಫೋಟೋದಲ್ಲಿ ಮಗನನ್ನು ಹಿಡಿದುಕೊಂಡು ಪತಿ ಜೊತೆ ಅಮಲಾ ಲಿಪ್‌ಲಾಕ್ ಮಾಡಿದ್ದರು. ನಟಿ ಮಗನ ಫೋಟೋವನ್ನು ರಿವೀಲ್ ಮಾಡಿದ್ದಕ್ಕೆ ಫ್ಯಾನ್ಸ್ ಸಂಭ್ರಮಿಸಿದ್ದರು. ಅಂದಹಾಗೆ, ಕಳೆದ ವರ್ಷ ನವೆಂಬರ್‌ನಲ್ಲಿ ಉದ್ಯಮಿ ಜಗತ್ ದೇಸಾಯಿ ಜೊತೆ ಅಮಲಾ ಮದುವೆಯಾದರು. ಈ ವರ್ಷ ಜೂನ್ 11ರಂದು ಗಂಡು ಮಗುವಿಗೆ ನಟಿ ಜನ್ಮ ನೀಡಿದರು.

# ಕಿವೀಸ್ ಆರ್ಭಟ; 46ಕ್ಕೆ ಭಾರತ ಆಲೌಟ್



ನ್ಯೂಜಿಲೆಂಡ್ ವಿರುದ್ಧ ನಡೆಯುತ್ತಿರುವ ಟೆಸ್ಟ್ ಸರಣಿಯ ಮೊದಲ ಪಂದ್ಯದ ಮೊಲದ ಇನ್ನಿಂಗ್ಸ್‌ನಲ್ಲಿ ಭಾರತ ತಂಡ ಅತ್ಯಂತ ಕಳಪೆ ಪ್ರದರ್ಶನ ನೀಡಿದೆ. ವಿಲಿಯಂ ಓ'ರೂರ್ಕ್, ಮ್ಯಾಟ್ ಹೆನ್ರಿ ವೇಗಿಗಳ ಆರ್ಭಟಕ್ಕೆ ನಲುಗಿದ ಟೀಂ ಇಂಡಿಯಾ 46 ರನ್‌ಗಳಿಗೆ ಆಲೌಟ್ ಆಗಿ ಭಾರೀ ಮುಖಭಂಗ ಅನುಭವಿಸಿದೆ. ಅಲ್ಲದೇ ಟೆಸ್ಟ್ ಕ್ರಿಕೆಟ್‌ನಲ್ಲಿ ಅತೀ ಕೆಟ್ಟ ದಾಖಲೆಯೊಂದನ್ನು ಹೆಗಲಿಗೇರಿಸಿಕೊಂಡಿದೆ.

ಇಲ್ಲಿನ ಎಂ.ಚಿನ್ನಸ್ವಾಮಿ ಕ್ರೀಂಡಾಗಣದಲ್ಲಿ ನಡೆಯುತ್ತಿರುವ ಮೊದಲ ಟೆಸ್ಟ್ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ದುಕೊಂಡ ಟೀಂ ಇಂಡಿಯಾ ಕಿವೀಸ್ ವೇಗಿಗಳ ಅಬ್ಬರಕ್ಕೆ ಮಕಾಡೆ ಮಲಗಿತು. ನಿಧಾನಗತಿ ಬ್ಯಾಟಿಂಗ್ ಆರಂಭಿಸಿದ ಭಾರತ ಒಂದೊಂದು ಕದಿಯಲು ತಿಣುಕಾಡಿತು. ರೋಹಿತ್, ಕೊಹ್ಲಿ, ರಾಹುಲ್ ಸೇರಿದಂತೆ ಅಗ್ರಕ್ರಮಾಂಕದ ಬ್ಯಾಟರ್‌ಗಳು ಬಹುಬೇಗನೆ ಪೆವಿಲಿಯನ್ ಪರೇಡ್ ನಡೆಸಿದರು. ಅಂತಿಮವಾಗಿ ಭಾರತ 46 ರನ್‌ಗಳಿಗೆ ಆಲೌಟ್ ಆಯಿತು. ಈ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ 3ನೇ ಅತೀ ಕಡಿಮೆ ರನ್ ಗಳಿಸಿದ ಕೆಟ್ಟ ದಾಖಲೆಯನ್ನು ಹೆಗಲಿಗೇರಿಸಿಕೊಂಡಿತು. ಟೀಂ ಇಂಡಿಯಾ ಪರ ರಿಷಭ್ ಪಂತ್ 20 ರನ್, ಯಶಸ್ವಿ ಜೈಸ್ವಾಲ್ 13 ರನ್ ಗಳಿದರು. ಉಳಿದ ಆಟಗಾರರು ಅಲ್ಪ ಮೊತ್ತಕ್ಕೆ ವಿಕೆಟ್ ಒಪ್ಪಿಸಿ ಹೊರನಡೆದರು. ರೋಹಿತ್ ಶರ್ಮಾ 2ರನ್, ಕುಲೀಪ್ ಯಾದವ್ 2ರನ್, ಜಸ್ಪ್ರೀತ್ ಬುಮ್ರಾ 1 ರನ್, ಸಿರಾಜ್ 4 ರನ್ ಗಳಿಸಿದರು. ಇನ್ನುಳಿದಂತೆ ವಿರಾಟ್ ಕೊಹ್ಲಿ, ಸರ್ಫರಾಜ್ ಖಾನ್, ಕೆ.ಎಲ್ ರಾಹುಲ್, ರವೀಂದ್ರ ಜಡೇಜಾ, ರವಿಚಂದ್ರನ್ ಅಶ್ವಿನ್ ಶೂನ್ಯ ಸುತ್ತಿದರು.

ರೂರ್ಕ್, ಹೆನ್ರಿ ಕಮಾಲ್: ಆರಂಭದಿಂದಲೂ ಅಧಿಕ ರನ್ ಬಿಟ್ಟುಕೊಟಡ ವಿಲಿಯಂ ಓ'ರೂರ್ಕ್, ಮ್ಯಾಟ್ ಹೆನ್ರಿ ಭಾರತದ ಆಟಗಾರರನ್ನು ಬಿಗಿ ಹಿಡಿತದಲ್ಲಿ ಕಟ್ಟಿಹಾಕುವಲ್ಲಿ ಯಶಸ್ವಿಯಾದರು. ಮಾರಕ ದಾಳಿ ನಡೆಸಿದ ವೇಗಿ ಮ್ಯಾಕ್ ಹೆನ್ರಿ 13.2 ಓವರ್‌ಗಳಲ್ಲಿ 15 ರನ್ ಬಿಟ್ಟುಕೊಟ್ಟು 5 ವಿಕೆಟ್ ಕಿತ್ತರೆ, ವಿಲಿಯಂ ಓ'ರೂರ್ಕ್ 12 ಓವರ್‌ಗಳಲ್ಲಿ 22 ರನ್ ಬಿಟ್ಟುಕೊಟ್ಟು 4 ವಿಕೆಟ್ ಹಾಗೂ ಟಿಮ್ ಸೌಥಿ ಒಂದು ವಿಕೆಟ್ ಪಡೆದರು.

## ಕಾವೇರಿ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆ

# ವರ್ಷದಲ್ಲಿ 3ನೇ ಬಾರಿಗೆ ಕೆಆರ್‌ಎಸ್ ಭರ್ತಿ

**ಮಂಡ್ಯ:** ಕಾವೇರಿ ಜಲಾನಯನ ಪ್ರದೇಶದಲ್ಲಿ ಉತ್ತಮ ಹಿಂಗಾರುಮಳೆಯಾಗುತ್ತಿದೆ. ಇದರಿಂದ ಕೆಆರ್‌ಎಸ್ ಡ್ಯಾಮ್‌ಗೆ ಒಳಹರಿವು ಮತ್ತೆ ಹೆಚ್ಚಾಗಿದೆ.

ಡ್ಯಾಮ್‌ಗೆ 8,547 ಕ್ಯುಸೆಕ್ ಒಳಹರಿವು ಬರುತ್ತಿದೆ. ಒಳಹರಿವಿನ ಪ್ರಮಾಣ ಹೆಚ್ಚಾದ ಬೆನ್ನಲ್ಲೇ ಕೆಆರ್‌ಎಸ್ ಡ್ಯಾಮ್ ಸಂಪೂರ್ಣ ಭರ್ತಿಯಾಗಿದೆ. ಈ ಮೂಲಕ ವರ್ಷದಲ್ಲಿ 3ನೇ ಬಾರಿಗೆ ಡ್ಯಾಮ್ ಸಂಪೂರ್ಣ ಭರ್ತಿಯಾದಂತಾಗಿದೆ. ನೀರಿನ ಮಟ್ಟ 124.80 ಅಡಿ ತಲುಪಿದೆ.

ಕಳೆದ ಜು.27ರಂದು ಡ್ಯಾಮ್ ಸಂಪೂರ್ಣ ಭರ್ತಿಯಾಗಿತ್ತು. ಇದೀಗ ಮತ್ತೆ ಸಂಪೂರ್ಣ ಭರ್ತಿಯಾಗಿ ಕಣ್ಮನ ಸೆಳೆಯುತ್ತಿದೆ. ಸಂಪೂರ್ಣ ಭರ್ತಿಯಾಗಿರುವುದರಿಂದ 8,287 ಕ್ಯುಸೆಕ್ ನೀರನ್ನು ಡ್ಯಾಮ್‌ನಿಂದ ಬಿಡುಗಡೆ ಮಾಡಲಾಗಿದೆ.

ನೀರಿನ ಮಟ್ಟ ಮತ್ತೆ ಏರಿಕೆಯಾಗಿದ್ದರಿಂದ, ಬೇಸಿಗೆ ಬೆಳೆಗೂ ನೀರಿನ ಸಮಸ್ಯೆ ಆಗುವುದಿಲ್ಲ ಎಂದು ಮಂಡ್ಯ ರೈತರು ಸಂಭ್ರಮಿಸಿದ್ದಾರೆ. ಅಲ್ಲದೇ ಈ ಬಾರಿ ಬೇಸಿಗೆಯಲ್ಲಿ ಬೆಂಗಳೂರು ಜನರಿಗೂ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ.



# ಧೋನಿಯ ದಾಖಲೆ ಮುರಿದ ಕೊಹ್ಲಿ




ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯುತ್ತಿರುವ ನ್ಯೂಝಿಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಕಣಕ್ಕಿಳಿಯುವ ಮೂಲಕ ವಿರಾಟ್ ಕೊಹ್ಲಿ ವಿಶೇಷ ದಾಖಲೆ ಬರೆದಿದ್ದಾರೆ. ಈ ದಾಖಲೆಯೊಂದಿಗೆ ಕಿಂಗ್ ಕೊಹ್ಲಿ ಟೀಮ್ ಇಂಡಿಯಾದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿಯನ್ನು ಹಿಂದಿಕ್ಕಿರುವುದು ವಿಶೇಷ.

ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಭಾರತ ತಂಡ ಉತ್ತಮ ಆರಂಭ ಪಡೆದಿರಲಿಲ್. ಆರಂಭಿಕ ಆಟಗಾರ ರೋಹಿತ್ ಶರ್ಮಾ ಕೇವಲ 2 ರನ್‌ಗಳಿಸಿ ಔಟಾದರು. ಇನ್ನು ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿಯುವ ವಿರಾಟ್ ಕೊಹ್ಲಿ ವಿಶೇಷ ದಾಖಲೆಯನ್ನು ತಮ್ಮದಾಗಿಸಿಕೊಂಡರು. ಅಂದರೆ ಟೀಮ್ ಇಂಡಿಯಾ ಪರ ಅತೀ ಹೆಚ್ಚು ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿದ ಆಟಗಾರರ ಪಟ್ಟಿಯಲ್ಲಿ ಇದೀಗ ವಿರಾಟ್ ಕೊಹ್ಲಿ ಎರಡನೇ ಸ್ಥಾನಕ್ಕೇರಿದ್ದಾರೆ. ಇದಕ್ಕೂ ಮುನ್ನ ಈ ದಾಖಲೆ ಮಹೇಂದ್ರ ಸಿಂಗ್ ಧೋನಿಯ ಹೆಸರಿನಲ್ಲಿತ್ತು.

2004 ರಿಂದ 2019 ರವರೆಗೆ ಟೀಮ್ ಇಂಡಿಯಾ ಪರ ಕಣಕ್ಕಿಳಿದಿದ್ದ ಧೋನಿ ಒಟ್ಟು 535 ಪಂದ್ಯಗಳನ್ನಾಡಿದ್ದಾರೆ. ಈ ಮೂಲಕ ಟೀಮ್ ಇಂಡಿಯಾ ಪರ ಅತೀ ಹೆಚ್ಚು ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿದ 2ನೇ ಆಟಗಾರ ಎನಿಸಿಕೊಂಡಿದ್ದರು.

ಇದೀಗ ಈ ದಾಖಲೆಯನ್ನು ಮುರಿಯುವಲ್ಲಿ ವಿರಾಟ್ ಕೊಹ್ಲಿ ಯಶಸ್ವಿಯಾಗಿದ್ದಾರೆ. ನ್ಯೂಝಿಲೆಂಡ್ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿಯುವ ಮೂಲಕ ಕಿಂಗ್ ಕೊಹ್ಲಿ ಒಟ್ಟು 536 ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿದ ಸಾಧನೆ ಮಾಡಿದ್ದಾರೆ. ಈ ಮೂಲಕ ಭಾರತದ ಪರ ಅತ್ಯಧಿಕ ಇಂಟರ್‌ನ್ಯಾಷನಲ್ ಮ್ಯಾಚ್‌ಗಳನ್ನು ಆಡಿದ 2ನೇ ಆಟಗಾರ ಎಂಬ ದಾಖಲೆ ಬರೆದಿದ್ದಾರೆ.

ಇನ್ನು ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್. 1989 ರಿಂದ 2013 ರವರೆಗೆ ಭಾರತ ತಂಡವನ್ನು ಪ್ರತಿನಿಧಿಸಿದ್ದ ಸಚಿನ್ ಒಟ್ಟು 664 ಪಂದ್ಯಗಳನ್ನಾಡಿದ್ದಾರೆ. ಈ ಮೂಲಕ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ಪಂದ್ಯಗಳನ್ನಾಡಿದ ವಿಶ್ವ ದಾಖಲೆ ನಿರ್ಮಿಸಿದ್ದಾರೆ.

# ನಟಿ ಅಮೂಲ್ಯ ಸಹೋದರ, ಚಿತ್ರ ನಿರ್ದೇಶಕ ದೀಪಕ್ ಅರಸ್ ನಿಧನ

**ಬೆಂಗಳೂರು:** ಕನ್ನಡ ನಟಿ ಅಮೂಲ್ಯ ಅವರ ಸಹೋದರ ಹಾಗೂ ನಿರ್ದೇಶಕ ದೀಪಕ್ ಅರಸ್ ಅವರು ಗುರುವಾರ ವಿಧಿವಶರಾಗಿದ್ದಾರೆ. ಕಿಡ್ನಿ ವೈಫಲ್ಯದಿಂದಾಗಿ ದೀಪಕ್ ಅರಸ್ ಅವರು ನಿಧನರಾಗಿದ್ದಾರೆಂದು ಎಂದು ತಿಳಿದುಬಂದಿದೆ. ಸಂಜೆ 7 ಗಂಟೆ ಸುಮಾರಿಗೆ ಅವರು ಕೊನೆಯುಸಿರು ಎಳೆದಿದ್ದಾರೆಂದು ವರದಿಗಳು ತಿಳಿದುಬಂದಿದೆ.

ದೀಪಕ್ ಅರಸ್ ಅವರಿಗೆ ಕಿಡ್ನಿ ವೈಫಲ್ಯ ಆಗಿತ್ತು. ಇದಕ್ಕಾಗಿ ಡಯಾಲಿಸಿಸ್ ಕೂಡ ಮಾಡಿಸುತ್ತಿದ್ದರು. ಆದರೆ ಚಿಕಿತ್ಸೆ ಫಲಕಾರಿ ಆಗದೇ ಇಹಲೋಕ ತ್ಯಜಿಸಿದ್ದಾರೆ. ದೀಪಕ್ ಅರಸ್ ಅವರ ಸಾವಿನಿಂದಾಗಿ ಅಮೂಲ್ಯ ಅವರ ಕುಟುಂಬದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ.

ಸ್ಯಾಂಡಲ್‌ವುಡ್‌ನಲ್ಲಿ ಅಮೂಲ್ಯ ಬಾಲನಟಿ, ನಾಯಕಿಯಾಗಿ ಜನಪ್ರಿಯತೆ ಪಡೆದಿದ್ದರೆ, ಅವರ ಸಹೋದರ ದೀಪಕ್ ಅರಸ್ ಡೈರೆಕ್ಟರ್ ಕ್ಯಾಪ್ ತೊಟ್ಟು ನಿರ್ದೇಶಕರಾಗಿ ಗುರುತಿಸಿಕೊಂಡಿದ್ದರು. ಕನ್ನಡದ 'ಮನಸಾಲಜಿ', 'ಶುಗರ್ ಫ್ಯಾಕ್ಟರಿ' ಸಿನಿಮಾಗಳಿಗೆ ದೀಪಕ್ ಅರಸ್ ಆಕ್ಷನ್ ಕಟ್ ಹೇಳಿದ್ದರು



# ಡಬಲ್ ಮರ್ಡರ್

## ಪತ್ನಿ, ಆಕೆ ಪ್ರಿಯಕರನ ಕೊಲೆ ಮಾಡಿ ವ್ಯಕ್ತಿ ಆತ್ಮಹತ್ಯೆ




**ಬೆಂಗಳೂರು:** ಶೀಲ ಶಂಕಿಸಿ ಪತ್ನಿ ಹಾಗೂ ಆಕೆಯ ಪ್ರಿಯಕರನನ್ನು ಬರ್ಬರವಾಗಿ ಹತ್ಯೆ ಮಾಡಿ ಬಳಿಕ ಪತಿ ತಾನೂ ಆತ್ಮಹತ್ಯೆ ಮಾಡಿಕೊಂಡ ಘಟನೆ ಬೆಂಗಳೂರಿನ ಆರ್‌ಬಿಐ ಲೇಔಟ್ ಸಮೀಪದ ಸೋಮೇಶ್ವರ ಬಡಾವಣೆಯಲ್ಲಿ ನಡೆದಿದೆ. ನಿರ್ಮಾಣ ಹಂತದ ಕಟ್ಟಡದಲ್ಲಿ ಮರದ ತುಂಡಿನಿಂದ ಪತ್ನಿ ಹಾಗೂ ಆಕೆಯ ಪ್ರಿಯಕರನ ಮೇಲೆ ಹಲ್ಲೆ ನಡೆಸಿ, ಪತಿ ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಡಬಲ್ ಮರ್ಡರ್ ಮಾಡಿದ ಬಳಿಕ ತಾನು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಕೋಣನಕುಂಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಕೋಣನಕುಂಟೆ ಪೊಲೀಸರು ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com